ಸಂಪುಟ: 21, ಸಂಚಿಕೆ: 177, ಪುಟಗಳು: 8, ಶುಕ್ರವಾರ, 5 ಏಪ್ರಿಲ್ 2024 RNI NO. KARKAN/2002/08054
epaper: www.sanjemugilu.com



ವೇಣು ಸಾರಥ್ಯದಲ್ಲಿ...

ಸುದ್ದಿಗಳ ಹೊನಲು

# ಸಂಜೆ ಮುಗಿಲು

ಕನ್ನಡ ಪ್ರಾದೇಶಿಕ ಸಂಜೆ ದಿನಪತ್ರಿಕೆ

ಬೆಂಗಳೂರು। ಬೆಂಗಳೂರು ಗ್ರಾಮಾಂತರ। ಕೋಲಾರ। ಚಿಕ್ಕಬಳ್ಳಾಪುರ। ರಾಮನಗರ। ಮಂಡ್ಯ। ಮೈಸೂರು। ಚಾಮರಾಜನಗರ

### ಸುಭಾಷಿತ

ಸ್ವಲ್ಪ ಉಳ್ಳವನು ಬಡವನಲ್ಲ;
ಇನ್ನೂ ಬೇಕೆನ್ನುವವನು ಬಡವ

। ಸೆಬೇಕಾ

### ಪಂಚಾಂಗ

(ಶುಕ್ರವಾರ 5, ಏಪ್ರಿಲ್ -2024)

- ಶ್ರೀ ಶೋಭಕೃತ ನಾಮ ಸಂವತ್ಸರ,
- ಉತ್ತರಾಯಣ, ಶಿಶಿರ ಋತು, ಪಾಲ್ಗುಣ ಮಾಸ, ಕೃಷ್ಣ ಪಕ್ಷ,
- ಏಕಾದಶಿ, ಶುಕ್ರವಾರ, ಧನಿಷ್ಠ ನಕ್ಷತ್ರ
- ರಾಹುಕಾಲ 10:54 ರಿಂದ 12:26
- ಗುಳಿಕಕಾಲ 07:50 ರಿಂದ 09:22
- ಯಮಗಂಡಕಾಲ 03:30 ರಿಂದ 05:02

## ಯುಗಾದಿ, ರಂಜಾನ್‌ಗೆ ಸಾಲುಸಾಲು ರಜೆ



# KSRTC 2275 ವಿಶೇಷ ಬಸ್ ವ್ಯವಸ್ಥೆ

**ಬೆಂಗಳೂರು:** ಯುಗಾದಿ ಹಬ್ಬಕ್ಕೆ ನಗರದಿಂದ ತಮ್ಮ ತಮ್ಮ ಊರುಗಳಿಗೆ ತೆರಳಲು ಸಿದ್ಧತೆ ನಡೆಸಿರುವ ಜನರಿಗೆ ಕೆಎಸ್ಆರ್ ಟಿಸಿ ಗುಡ್‌ನ್ಯೂಸ್ ಕೊಟ್ಟಿದೆ. ಯುಗಾದಿ, ರಂಜಾನ್ ಹಬ್ಬದ ಸಾಲುಸಾಲು ರಜೆಗಳಿಂದ ಪ್ರಯಾಣಿಕರ ಸಂಖ್ಯೆ ಹೆಚ್ಚಾಗಲಿದ್ದು ಬೆಂಗಳೂರಿನಿಂದ ಹೆಚ್ಚುವರಿ ಬಸ್‌ಗಳನ್ನು ರಸ್ತೆಗಿಳಿಸಲು ನಿಗಮ ಮುಂದಾಗಿದೆ. ಒಟ್ಟು 2275 ವಿಶೇಷ ಬಸ್‌ಗಳನ್ನು ರಸ್ತೆಗಿಳಿಸಲು ನಾಲ್ಕು ನಿಗಮಗಳು ನಿರ್ಧರಿಸಿದ್ದು, ರಜೆ ಹಿನ್ನೆಲೆ ಊರಿಗೆ ಹಾಗೂ ಪ್ರವಾಸಕ್ಕೆ ತೆರಳುವವರಿಗೆ ಅನುಕೂಲವಾಗಲಿದೆ. ಕೆಎಸ್‌ಆರ್‌ಟಿಸಿಯಿಂದ 1,750ಬಸ್, ಎನ್‌ಡಬ್ಲ್ಯೂಕೆಎಸ್‌ಆರ್‌ಟಿಸಿಯ 145 ಬಸ್, ಕೆಕೆಆರ್‌ಟಿಸಿಯ 200 ಬಸ್ ಹಾಗೂ ಬಿಎಂಟಿಸಿಯ 180 ವಿಶೇಷ ಬಸ್‌ಗಳನ್ನು ರಸ್ತೆಗಿಳಿಸಲು ಸಿದ್ಧತೆ ಮಾಡಿಕೊಳ್ಳಲಾಗಿದೆ.

ಪ್ರಯಾಣಿಕರಿಗೆ ಅನುಕೂಲವಾಗುವಂತೆ, ಕೆಂಪೇಗೌಡ ನಿಲ್ದಾಣ, ಸ್ಯಾಟ್‌ಲೈಟ್ ನಿಲ್ದಾಣ, ಶಾಂತಿನಗರದಿಂದ ಧರ್ಮಸ್ಥಳ, ಕುಕ್ಕೆಸುಬ್ರಹ್ಮಣ್ಯ, ಶೃಂಗೇರಿ, ಹೊರನಾಡು, ಶಿವಮೊಗ್ಗ, ಮಡಿಕೇರಿ, ದಾವಣಗೆರೆ, ಗೋಕರ್ಣ, ಕೊಲ್ಲೂರು, ಹುಬ್ಬಳ್ಳಿ ಸೇರಿದಂತೆ ಹಲವು ಸ್ಥಳಗಳಿಗೆ ವಿಶೇಷ ಬಸ್ ಸೇವೆ ಮಾಡಲಾಗಿದೆ. ಅಲ್ಲದೇ ನೆರೆರಾಜ್ಯ ಹೈದರಾಬಾದ್, ಚೆನ್ನೈ, ಗೋವಾ ಪಣಜಿ, ಶಿರಡಿ, ಎರ್ನಾಕುಲಂಗೆ ವಿಶೇಷ ಬಸ್ ಸೇವೆ ಇರಲಿದೆ ಎಂದು ಕೆಎಸ್‌ಆರ್‌ಟಿಸಿ ಪ್ರಕಟಣೆಯಲ್ಲಿ ತಿಳಿಸಿದೆ.

## ಸಂಕ್ಷಿಪ್ತ ಸುದ್ದಿ

### ಬಿಜೆಪಿ ಹೈಕಮಾಂಡ್‌ನಿಂದ ಅಖಾಡದಲ್ಲಿ ಗುಪ್ತ್ ರಿಪೋರ್ಟ್ ಟೀಂ!



**ಬೆಂಗಳೂರು:** ಲೋಕಸಭಾ ಚುನಾವಣೆಯ ಸಮಯದಲ್ಲಿ ಬಿಜೆಪಿ ಹೈಕಮಾಂಡ್ ಸಕ್ರೀಯವಾಗಿದ್ದು ಕಠಿಣ ಸ್ಪರ್ಧೆ ಇರುವ ಕ್ಷೇತ್ರದಲ್ಲಿ ತಂಡವೊಂದರಿಂದ ರಹಸ್ಯ ವರದಿ ಸಂಗ್ರಹಿಸಲು ಮುಂದಾಗಿದೆ. ಕಳೆದ ವಿಧಾನಸಭಾ ಕ್ಷೇತ್ರಗಳಲ್ಲಿ ಬಿಜೆಪಿಗೆ ಒಳ ಹೊಡೆತದಿಂದ ಹೆಚ್ಚು ನ?ವಾಗಿತ್ತು. ಒಬ್ಬರ ಕಾಲನ್ನ ಇನ್ನೊಬ್ಬರು ಎಳೆದು ಗೆಲ್ಲಬಹುದಾಗಿದ್ದ 20ಕ್ಕೂ ಹೆಚ್ಚು ಕ್ಷೇತ್ರಗಳಲ್ಲಿ ಬಿಜೆಪಿಗೆ ಸೋಲಾಗಿತ್ತು. ವಿಧಾನಸಭಾ ಚುನಾವಣೆ ಆಗಿರುವ ತಪ್ಪು ಮತ್ತೆ ಮರುಕಳಿಸದಂತೆ ಮಾಡಲು ಅಸಮಾಧಾನ ಇರುವ 15 ಕ್ಷೇತ್ರಗಳಲ್ಲಿ ತಂಡ ರಹಸ್ಯ ವರದಿಯನ್ನು ಸಂಗ್ರಹಿಸಲಿದೆ. ನಾಮಪತ್ರ ಸಲ್ಲಿಕೆಗೂ ಮೊದಲೇ ಈ ತಂಡ ಈಗಾಗಲೇ ಫೀಲ್ಡ್‌ಗೆ ಇಳಿದು ಕೆಲಸ ಮಾಡುತ್ತಿದೆ. ಅಡ್ಜಸ್ಟ್‌ಮೆಂಟ್ ಪಾಲಿಟಿಕ್ಸ್‌ಗೆ ಕಡಿವಾಣ ಹಾಕಲು ಪ್ಲಾನ್ ಮಾಡಿದ್ದು ಅನುಮಾನ ಇರುವ ನಾಯಕರ ಸುತ್ತ ಸ್ಪೆಷಲ್ ಟೀಂ ಕಣ್ಗಾವಲು ಇಡಲಿದೆ. ಅಸಮಾಧಾನ ಇರುವ ಕ್ಷೇತ್ರಗಳಲ್ಲೂ ಒಬ್ಬರು ರಹಸ್ಯವಾಗಿ ಮಾಹಿತಿ ಸಂಗ್ರಹಿಸುತ್ತಿದ್ದಾರೆ.

### ಇನ್‌ಸ್ಪೆಕ್ಟರ್, ಎಸಿಪಿ ಜೀಪಿಗೂ ಇನ್ಮುಂದೆ ಡ್ಯಾಶ್ ಕ್ಯಾಮೆರಾ

**ಬೆಂಗಳೂರು:** ಹೊಯ್ಸಳ ವಾಹನಕ್ಕೆ ಡ್ಯಾಶ್ ಕ್ಯಾಮೆರಾ ಅಳವಡಿಕೆ ಸಕ್ಸಸ್ ಹಿನ್ನೆಲೆ ಇನ್ಸ್‌ಪೆಕ್ಟರ್ ಮತ್ತು ಎಸಿಪಿ ಜೀಪ್‌ಗೂ ಇನ್ಮುಂದೆ ಡ್ಯಾಶ್ ಕ್ಯಾಮೆರಾ ಅಳವಡಿಸಲು ಬೆಂಗಳೂರು ಪೊಲೀಸ್ ಆಯುಕ್ತ ಬಿ.ದಯಾನಂದ್ ಅವರು ಮಹತ್ವದ ನಿರ್ಧಾರ ಕೈಗೊಂಡಿರುವ ಕುರಿತು ಎಕ್ಸ್?ನಲ್ಲಿ ಹಂಚಿಕೊಂಡಿದ್ದಾರೆ. ಹೌದು, ಪಾರದರ್ಶಕ ಆಡಳಿತ ವ್ಯವಸ್ಥೆ ಜಾರಿಗೊಳಿಸಲು ಈ ಕ್ರಮಕ್ಕೆ ಮುಂದಾಗಿದ್ದಾರೆ. ಇನ್ನು ಹೊಯ್ಸಳದಲ್ಲಿ ಘಟನೆಗಳ ಮಾಹಿತಿ, ಸ್ಪಾಟ್ ರೀಚ್ ಆದ ಸಮಯ,ಎಲ್ಲದರ ಚಿತ್ರೀಕರಣ ಆಗಿತ್ತು. ಈ ಮೂಲಕ ಹೊಯ್ಸಳದ ಸಂಪೂರ್ಣ ಸಂಪರ್ಕ ಕಮಾಂಡ್ ಸೆಂಟರ್‌ನಲ್ಲಿದ್ದು, ಪೊಲೀಸ್ ಸಿಬ್ಬಂದಿಯ ಕರ್ತವ್ಯ ಲೋಪದ ಬಗ್ಗೆಯೂ ಪರಿಶೀಲನೆ ನಡೆಸಲಾಗಿತ್ತು. ಇದರ ಮುಂದುವರೆದ ಭಾಗವಾಗಿ ಇನ್ಸ್‌ಪೆಕ್ಟರ್, ಎಸಿಪಿ ಜೀಪ್‌ಗೂ ಕ್ಯಾಮೆರಾ ಅಳವಡಿಕೆ ಮಾಡುವುದಾಗಿ ಕಮಿಷನರ್ ಮಾಹಿತಿ ಹಂಚಿಕೊಂಡಿದ್ದಾರೆ.



## ಮಂಡ್ಯದಲ್ಲಿ ರಂಗೇರಿದ ಚುನಾವಣಾ ಕಣ

# ಕಮಲ ಮುಡಿದ ಸುಮಲತಾ

ಮಂಡ್ಯ: ಸಕ್ಕರೆ ನಾಡು ಮಂಡ್ಯದಲ್ಲಿ ಲೋಕಸಭಾ ಚುನಾವಣಾ ಜ್ವರ ಜೋರಾಗಿದೆ. ಬೇಸಿಗೆಯ ಬಿಸಿಲಿನ ಕಾವಿಗಿಂತ ಚುನಾವಣಾ ಕಾವು ಏರುತ್ತಿದೆ. ಕಾಂಗ್ರೆಸ್‌ನಿಂದ ಸ್ಟಾರ್ ಚಂದ್ರು ಈ ಬಾರಿ ಅದೃ?ಟ ಪರೀಕ್ಷೆಗೆ ಇಳಿದಿದ್ದರೆ, ಅತ್ತ ಜೆಡಿಎಸ್ ಬಿಜೆಪಿ ಮೈತ್ರಿ ಅಭ್ಯರ್ಥಿಯಾಗಿ ಮಾಜಿ ಸಿಎಂ ಎಚ್‌ಡಿ ಕುಮಾರಸ್ವಾಮಿ ಖುದ್ದು ಕಣಕ್ಕಿಳಿದಿದ್ದಾರೆ. ಈ ನಡುವೆ ಬಿಜೆಪಿಯಿಂದ ಟಿಕೆಟ್ ಸಿಗದೇ ಹಾಲಿ ಸಂಸದೆ ಸುಮಲತಾ ಅಂಬರೀಶ್ ಅಸಮಾಧಾನಗೊಂಡಿದ್ದರು. ಬಳಿಕ ಖುದ್ದು ಎಚ್‌ಡಿ ಕುಮಾರಸ್ವಾಮಿ ಅವರೇ ಸುಮಲತಾ ಬಳಿ ಬಂದು ಬೆಂಬಲ ಕೋರಿದ್ದರು. ಬಳಿಕ ಬಹಿರಂಗ ಸಭೆ ನಡೆಸಿದ್ದ ಸುಮಲತಾ, ಎಚ್‌ಡಿಕೆಗೆ ಬೆಂಬಲ ಘೋಷಿಸಿದ್ದರು. ಇದೀಗ ಸುಮಲತಾ ಅಂಬರೀಶ್ ಅಧಿಕೃತವಾಗಿ ಬಿಜೆಪಿ ಪಕ್ಷ ಸೇರ್ಪಡೆಗೊಂಡಿದ್ದಾರೆ. ಮಂಡ್ಯ ಸಂಸದೆ ಸುಮಲತಾ ಬಿಜೆಪಿ ಸೇರಲಿದ್ದಾರೆ. 2019ರ ಚುನಾವಣೆಯಲ್ಲಿ ಸ್ವತಂತ್ರವಾಗಿ ಸ್ಪರ್ಧಿಸಿ ಗೆದ್ದಿದ್ದ ಸುಮಲತಾ, ಬಳಿಕ ಬಿಜೆಪಿ ಜೊತೆ ಗುರುತಿಸಿಕೊಂಡಿದ್ದರು. ಆದರೆ ಅಧಿಕೃತವಾಗಿ ಬಿಜೆಪಿ ಸೇರಿರಲಿಲ್ಲ. ಇದೀಗ ಸುಮಾಲತಾ ಅಂಬರೀಶ್ ಬಿಜೆಪಿ ಸೇರಿದ್ದಾರೆ.

### ಫೇಸ್‌ಬುಕ್‌ನಲ್ಲಿ ಮಾಹಿತಿ

ಈ ಕುರಿತಂತೆ ಸುಮಲತಾ ಅಂಬರೀಶ್ ತಮ್ಮ ಫೇಸ್‌ಬುಕ್ ಖಾತೆಯಲ್ಲಿ ಮಾಹಿತಿ ಹಂಚಿಕೊಂಡಿದ್ದರು. ಮಂಡ್ಯದ ಅಭಿವೃದ್ಧಿಯೇ ನನ್ನ ಮೂಲ ಮಂತ್ರವಾಗಿಸಿಕೊಂಡು ಹಾಗೂ ನಮ್ಮೆಲ್ಲರ ನೆಚ್ಚಿನ ಪ್ರಧಾನ ಮಂತ್ರಿಗಳಾದ ಶ್ರೀ ನರೇಂದ್ರ ಮೋದಿ ಅವರು ಮತ್ತೊಮ್ಮೆ ಪ್ರಧಾನಿ ಆಗಲಿ ಎನ್ನುವ ಆಶಯದೊಂದಿಗೆ ಭಾರತೀಯ ಜನತಾ ಪಕ್ಷವನ್ನು ಬೆಂಬಲಿಸುವುದಾಗಿ ಘೋಷಿಸಿದ್ದೆ ಅಂತ ಬರೆದು ಕೊಂಡಿದ್ದರು.



## ನನಗೆ ಗೌರವ ಇಲ್ಲದ ಕಡೆ ಹೋಗಲ್ಲ

27 ವರ್ಷ ಅಂಬರೀ?ಷ್ ಜೊತೆ ನಾನು ಸಂಸಾರ ಮಾಡಿದವಳು. ನಾನು ಸ್ವಾಭಿಮಾನವನ್ನು ಅಂಬರೀಷ್‌ರಿಂದ ಕಲಿತಿದ್ದೇನೆ. ಆದರೆ ನನಗೆ ಗೌರವ ಇಲ್ಲದ ಕಡೆ ನಾನು ಹೋಗಲ್ಲ. ನನಗೆ ಗೌರವ ಇಲ್ಲದ ಕಡೆ ನಾನು ಹೋಗಬೇಕು ಎಂದು ನೀವು ಬಲವಂತ ಮಾಡಬೇಡಿ ಎಂದ ಸುಮಲತಾ, ಕಾಂಗ್ರೆಸ್‌ನವರೇ ಬೇಡ ಎಂದ ಮೇಲೆ ನಾನು ಅಲ್ಲಿಗೆ ಹೋಗಲ್ಲ ಅಂತ ಹೇಳಿದ್ದರು.

### ಅಂಬರೀಶ್ ಸಮಾಧಿಗೆ ಪೂಜೆ

ಬಿಜೆಪಿ ಸೇರ್ಪಡೆಗೂ ಮುನ್ನ ಸುಮಲತಾ ಅಂಬರೀಶ್ ಅವರು; ಕಂಠೀರವ ಸ್ಟುಡಿಯೋದ ಆವರಣದಲ್ಲಿರುವ ಅಂಬರೀಶ್ ಅವರ ಸಮಾಧಿಗೆ ಪೂಜೆ ಸಲ್ಲಿಸಿದರು. ನಂತರ ತಮ್ಮ ಬೆಂಬಲಿಗರೊಂದಿಗೆ ಬಿಜೆಪಿ ಮುಖಂಡರ ಸಮ್ಮುಖದಲ್ಲಿ ಪಕ್ಷ ಸೇರ್ಪಡೆಗೊಂಡರು.



## ಕ್ರಿಮಿನಲ್‌ಗಳು ಜೈಲಿಗೆ ಹೋಗಲು ಭಯ ಪಡುತ್ತಿದ್ದಾರೆ

**ಲಕ್ನೋ:** ಉತ್ತರ ಪ್ರದೇಶದಲ್ಲಿ ಈಗ ಕ್ರಿಮಿನಲ್‌ಗಳು ಜೈಲಿಗೆ ಹೋಗಲು ಭಯ ಪಡುತ್ತಿದ್ದಾರೆ ಎಂದು ಸಿಎಂ ಯೋಗಿ ಅದಿತ್ಯನಾಥ್ ಹೇಳಿದ್ದಾರೆ.

ಶಂಸಾಬಾದ್‌ನಲ್ಲಿ ಬಿಜೆಪಿ ಅಭ್ಯರ್ಥಿ ಪರ ಮತ ಪ್ರಚಾರ ನಡೆಸಿ ಮಾತನಾಡಿದ ಅವರು, ನಾವು ಶೂನ್ಯ ಸಹಿಷ್ಣುತೆಯ ನೀತಿಯನ್ನು ಅನುಸರಿಸುತ್ತಿದ್ದೇವೆ. ಕ್ರಿಮಿನಲ್ ವ್ಯಕ್ತಿಗಳು ಅಪರಾಧವನ್ನು ನಿಲ್ಲಿಸಬೇಕು ಅಥವಾ ಅದಕ್ಕೆ ತಕ್ಕುದಾದ ಬೆಲೆಯನ್ನು ಪಾವತಿಸಲು ಸಿದ್ಧರಾಗಬೇಕು. ಈಗ ಬಹುತೇಕ ಕ್ರಿಮಿನಲ್‌ಗಳು ಜೈಲಿಗೆ ಹೋಗಲು ಭಯಪಡುತ್ತಿದ್ದಾರೆ ಎಂದು ಹೇಳಿದರು.



ಕಳೆದ ವಾರ ಬಂದಾ ಜೈಲಿನಲ್ಲಿ ಗ್ಯಾಂಗ್‌ಸ್ಟರ್ ಮುಖ್ತಾರ್ ಅನ್ಸಾರಿ ಸಾವನ್ನಪ್ಪಿದ ನಂತರ ಈ ಹೇಳಿಕೆ ಬಂದಿರುವುದು ವಿಶೇಷ.

ಪುಟ 2

## ಅಹಿಂದ'ದತ್ತ ಎಚ್‌ಡಿಕೆ ಚಿತ್ತ

**ಮಂಡ್ಯ:** ರಾಜ್ಯದ ಅಭಿವೃದ್ಧಿಗಾಗಿ ಜೆಡಿಎಸ್ ಬಿಜೆಪಿಯೊಂದಿಗೆ ಕೈ ಜೋಡಿಸಿದ್ದು, ಪ್ರಧಾನಮಂತ್ರಿ ನರೇಂದ್ರ ಮೋದಿ ಅವರ ಕೈ ಬಲಪಡಿಸಲು ಅಲ್ಪಸಂಖ್ಯಾತರು ಮತ್ತು ದಲಿತರು ಬೆಂಬಲ ನೀಡಬೇಕೆಂದು ಜೆಡಿಎಸ್ ರಾಜ್ಯಾಧ್ಯಕ್ಷ ಹೆಚ್'ಡಿ.ಕುಮಾರಸ್ವಾಮಿಯವರು ಗುರುವಾರ ಮನವಿ ಮಾಡಿಕೊಂಡರು.

ಈ ಹಿಂದಿನ ಚುನಾವಣೆಯಲ್ಲಿ ಪುತ್ರ ನಿಖಿಲ್ ಸೋಲಿಗೆ ಅಹಿಂದ ಮತಗಳ ಸಿಗದೆ ಇದ್ದದ್ದು ಕಾರಣವಾಗಿತ್ತು ಎಂದು ತಿಳಿದುಬಂದ ಹಿನ್ನೆಲೆಯಲ್ಲಿ ಕುಮಾರಸ್ವಾಮಿಯವರು ಅಲ್ಪಸಂಖ್ಯಾತರು, ದಲಿತರು ಮತ್ತು ಹಿಂದುಳಿದ ಸಮುದಾಯ ಮನವೊಲಿಸಲು ಯತ್ನ ನಡೆಸುತ್ತಿದ್ದಾರೆ.

ನಿನ್ನೆ ಮಂಡ್ಯದಲ್ಲಿ ನಾಮಪತ್ರ ಸಲ್ಲಿಸಿದ ನಂತರ ಮಾತನಾಡಿದ ಕುಮಾರಸ್ವಾಮಿಯವರು, ರಾಜ್ಯ ಸರ್ಕಾರದ ವಿರುದ್ಧ ವಾಗ್ದಾಳಿ ನಡೆಸಿದರು.

ರಾಜ್ಯ ಸರ್ಕಾರ ತಮಿಳುನಾಡು ರಾಜ್ಯಕ್ಕೆ ಉದಾರವಾಗಿ ಕಾವೇರಿ ನೀರನ್ನು ಹರಿಸಿತು.



ಆದರೆ, ನಮ್ಮ ರೈತರ ಬೆಳೆಗಳಿಗೆ ನೀರು ನೀಡದೆ, ಬೆಳೆಗಳು ಒಣಗುವಂತೆ ಮಾಡಿದ್ದಾರೆ. ಕಬ್ಬಿನ ಗದ್ದೆಗಳನ್ನು ನೋಡಿದರೆ, ಹೃದಯ ಕಿತ್ತು ಬರುತ್ತಿದೆ ಎಂದು ಕಿಡಿಕಾರಿದರು. ಇದೇ ವೇಳೆ ತಾವು ಮುಖ್ಯಮಂತ್ರಿಯಾಗಿದ್ದಾಗ 25 ಸಾವಿರ ರೂ. ಕೃಷಿ ಸಾಲ ಮನ್ನಾ ಮಾಡಿದ್ದನ್ನು ಸ್ಮರಿಸಿದ ಕುಮಾರಸ್ವಾಮಿ, ಕಾಂಗ್ರೆಸ್ ಸರಕಾರಕ್ಕೆ ರಾಜಕೀಯ ಇಚ್ಛಾಶಕ್ತಿ ಇಲ್ಲ, ಸಂತ್ರಸ್ತ ರೈತರಿಗೆ ಬರ ಪರಿಹಾರ ನೀಡಲು ಕೇಂದ್ರದ ಹಣಕ್ಕಾಗಿ ಏಕೆ ಕಾಯಬೇಕು ಎಂದು ಪ್ರಶ್ನಿಸಿದರು.

ಪುಟ 2

## ಹಾಸನದಲ್ಲಿ ಜೆಡಿಎಸ್‌ಗೆ ಒಳ ಏಟಿನ ಭಯ



**ಹಾಸನ :** ಮೈತ್ರಿ ಅಭ್ಯರ್ಥಿ ಪ್ರಜ್ವಲ್ ರೇವಣ್ಣ ಗುರುವಾರ ಜೆಡಿಎಸ್-ಬಿಜೆಪಿ ನಾಯಕರೊಂದಿಗೆ ಎರಡನೇ ಬಾರಿಗೆ ನಾಮಪತ್ರ ಸಲ್ಲಿಸಿದ್ದಾರೆ. ನಂತರ ಹಾಸನ ನಗರದಲ್ಲಿ ಸಹಸ್ರಾರು ಜೆಡಿಎಸ್ -ಬಿಜೆಪಿ ಕಾರ್ಯಕರ್ತರೊಂದಿಗೆ ಬೃಹತ್ ರೋಡ್ ಶೋ ನಡೆಸಿದರು.

ಪುಟ 2

## ರಸ್ತೆಯಲ್ಲಿ ಬೈಕ್ ಸವಾರನಿಗೆ ಗುಮ್ಮಿದ ಗೂಳಿ

**ಬೆಂಗಳೂರು:** ಕೊಂಚ ಯಾಮಾರಿದ್ದರೂ ಈಚರ್ ಚಕ್ರಕ್ಕೆ ಸಿಲುಕಿ ಸವಾರ ಬಲಿಯಾಗುತಿದ್ದ. ಹೌದು, ಬೆಂಗಳೂರಿನ ಮಹಾಲಕ್ಷ್ಮಿ ಲೇಔಟ್ ಸ್ವಿಮ್ಮಿಂಗ್ ಪೂಲ್ ಜಂಕ್ಷನ್ ಬಳಿ ಕಳೆದ ವಾರ ಈ ಘಟನೆ ನಡೆದಿದೆ. ಇದರಲ್ಲಿ ಬೈಕ್ ಸವಾರ ಬದುಕುಳಿದಿದ್ದೆ ಅಚ್ಚರಿಯಂತಿದೆ. ಅಸಲಿಗೆ ಈ ಅಪಘಾತ ಮಾಡಿದ್ದು ಯಾವುದೇ ವಾಹನವಲ್ಲ, ಕೊಲೇ ಬಸವ, ಹೊಡೆದ ಡಿಕ್ಕಿಗೆ ಬೈಕ್ ಸವಾರ ಈಚರ್ ಕೆಳಗೆ ಬಿದ್ದಿದ್ದಾನೆ. ತಕ್ಷಣ ಚಾಲಕ ಈಚರ್ ವಾಹನ ನಿಲ್ಲಿಸಿದ್ದು, ಸ್ವಲ್ಪದರಲ್ಲೇ ಬೈಕ್ ಸವಾರ ಬದುಕುಳಿದಿದ್ದಾನೆ. ಬೆಚ್ಚಿ ಬೀಳಿಸುವ ಈ ಆಕ್ಸಿಡೆಂಟ್‌ನ ಭಯಾನಕ ದೃಶ್ಯ ಸಿಸಿಟಿವಿಯಲ್ಲಿ ಸೆರೆಯಾಗಿದೆ.





## ರಾತ್ರಿ ಆಪರೇಷನ್

### ಹೆಚ್‌ಡಿಕೆಗೆ ಶಾಕ್ ಕೊಟ್ಟ ಡಿಕೆ ಬ್ರದರ್ಸ್

ರಾಮನಗರ: ಚನ್ನಪಟ್ಟಣದಲ್ಲಿ ರಾತ್ರೋರಾತ್ರಿ ಭರ್ಜರಿ ಆಪರೇಷನ್ ಮೂಲಕ ಮಾಜಿ ಸಿಎಂ ಹೆಚ್.ಡಿ ಕುಮಾರಸ್ವಾಮಿ ಅವರಿಗೆ ಡಿಸಿಎಂ ಡಿ.ಕೆ ಶಿವಕುಮಾರ್ ಬಿಗ್ ಶಾಕ್ ಕೊಟ್ಟಿದ್ದಾರೆ.

ಲೋಕಸಭಾ ಚುನಾವಣೆ ಹೊತ್ತಿನಲ್ಲೇ ಜೆಡಿಎಸ್ ಪಕ್ಷದಿಂದ ಆಯ್ಕೆಯಾದ ನಗರಸಭೆ ಅಧ್ಯಕ್ಷ ಸೇರಿದಂತೆ 9 ಮಂದಿ ಸದಸ್ಯರು ಡಿ.ಕೆ ಶಿವಕುಮಾರ್ ನೇತೃತ್ವದಲ್ಲಿ ತಡರಾತ್ರಿ ಕಾಂಗ್ರೆಸ್ ಸೇರ್ಪಡೆಗೊಂಡಿದ್ದಾರೆ. ಚನ್ನಪಟ್ಟಣ ನಗರಸಭೆಯ ಅಧ್ಯಕ್ಷ ಪ್ರಶಾಂತ್, ಸದಸ್ಯರಾದ ರೇವಣ್ಣ, ಸತೀಶ್ ಬಾಬು, ಶ್ರೀನಿವಾಸಮೂರ್ತಿ, ಲೋಕೇಶ್, ನಾಗೇಶ್, ಸೈಯದ್ ರಫೀಕ್, ಅಭಿದಾಭಾನು, ಭಾನುಪ್ರಿಯಾ ಸೇರಿದಂತೆ ಪಕ್ಷೇತರ ಸದಸ್ಯೆಯಾದ ಉಮಾ ಎಂಬವರು ಬೆಂಗಳೂರಿನ ಡಿಸಿಎಂ ನಿವಾಸದಲ್ಲಿ ಕಾಂಗ್ರೆಸ್‌ಗೆ ಸೇರ್ಪಡೆಗೊಂಡಿದ್ದಾರೆ.

ಚನ್ನಪಟ್ಟಣ ನಗರಸಭೆಯ ಒಟ್ಟು ಜೆಡಿಎಸ್ ಸದಸ್ಯರ ಪೈಕಿ ಮೂರನೇ ಒಂದರಷ್ಟು ಮಂದಿ ಪಕ್ಷ ತೊರೆದು ಕಾಂಗ್ರೆಸ್ ಸೇರಿದ್ದು, ತಮ್ಮನ್ನು ಕಾಂಗ್ರೆಸ್ ಸದಸ್ಯರೆಂದು ಪರಿಗಣಿಸಿ ನಗರಸಭೆಯಲ್ಲಿ ತಮಗೆ ಕಾಂಗ್ರೆಸ್ ಸದಸ್ಯರ ಜೊತೆ ಕೂರಲು ಅವಕಾಶ ಕಲ್ಪಿಸಬೇಕು ಎಂದು ಜಿಲ್ಲಾಧಿಕಾರಿಗಳಿಗೆ ಪತ್ರ ಬರೆದು ಮನವಿ ಮಾಡಿದ್ದಾರೆ.

ಈ ಮೂಲಕ ಕೇಂದ್ರ ಗೃಹಸಚಿವ ಅಮಿತ್ ಶಾ ಅವರನ್ನು ಕರೆಸಿ ಶಕ್ತಿ ಪ್ರದರ್ಶನ ಮಾಡಿದ್ದ ಮೈತ್ರಿ ನಾಯಕರಿಗೆ ಡಿಕೆ ಬ್ರದರ್ಸ್ ಶಾಕ್ ಕೊಟ್ಟಿದ್ದಾರೆ. ಹೆಚ್‌ಡಿಕೆ ಮಂಡ್ಯ ಲೋಕಸಭಾ ಅಖಾಡಕ್ಕೆ ಎಂಟ್ರಿ ಕೊಟ್ಟ ಬೆನ್ನಲ್ಲೇ ಚನ್ನಪಟ್ಟಣದಲ್ಲಿ ಜೆಡಿಎಸ್ ಸದಸ್ಯರನ್ನು ಕಾಂಗ್ರೆಸ್ ತನ್ನ ತೆಕ್ಕೆಗೆ ತೆಗೆದುಕೊಂಡಿದೆ.

## ರೆಪೋ ದರದಲ್ಲಿ ಬದಲಾವಣೆ ಇಲ್ಲ; ಶೇ. 6.5ರ ಬಡ್ಡಿದರ ಮುಂದುವರಿಕೆ




**ನವದೆಹಲಿ:** ನಿರೀಕ್ಷೆಯಂತೆ ಭಾರತೀಯ ರಿಸರ್ವ್ ಬ್ಯಾಂಕ್ ರೆಪೋ ದರದಲ್ಲಿ ಯಾವ ಬದಲಾವಣೆ ಮಾಡದಿರಲು ನಿರ್ಧರಿಸಿದೆ. ಇದರೊಂದಿಗೆ ಕಳೆದ ಒಂದು ವರ್ಷದಿಂದ ಇರುವ ಶೇ. 6.5ರ ಬಡ್ಡಿದರವೇ ಮುಂದುವರಿಯಲಿದೆ. ಏಪ್ರಿಲ್ 3ರಿಂದ ನಡೆದ ಆರ್‌ಬಿಐನ ಹಣಕಾಸು ನೀತಿ ಸಮಿತಿ ಅಥವಾ ಎಂಪಿಸಿ ಸಭೆಯಲ್ಲಿ ಈ ನಿರ್ಧಾರ ತೆಗೆದುಕೊಳ್ಳಲಾಗಿದೆ. ಆರ್‌ಬಿಐ ಗವರ್ನರ್ ಶಕ್ತಿಕಾಂತ ದಾಸ್ ಇಂದು ಶುಕ್ರವಾರ ಪತ್ರಿಕಾಗೋಷ್ಠಿಯಲ್ಲಿ ಎಂಪಿಸಿ ಸಭೆಯ ನಿರ್ಧಾರಗಳನ್ನು ಪ್ರಕಟಿಸಿದ್ದಾರೆ.

ಪುಟ 2

### ಬಿಜೆಪಿ ರಾಜ್ಯ ಘಟಕದ ಅಧ್ಯಕ್ಷ ಬಿ.ವೈ.ವಿಜಯೇಂದ್ರ ಹೇಳಿಕೆ

# ಜೆಡಿಎಸ್-ಬಿಜೆಪಿ ಮೈತ್ರಿ ಶಾಶ್ವತ



**ಹಾಸನ:** ಬಿಜೆಪಿಯೊಂದಿಗೆ ಜೆಡಿಎಸ್ ಮೈತ್ರಿ ಶಾಶ್ವತವಾದದ್ದು. ಲೋಕಸಭಾ ಚುನಾವಣೆಗೆ ಮಾತ್ರ ಸೀಮಿತವಾಗಿಲ್ಲ ಎಂದು ಬಿಜೆಪಿ ರಾಜ್ಯ ಘಟಕದ ಅಧ್ಯಕ್ಷ ಬಿವೈ ವಿಜಯೇಂದ್ರ ಹೇಳಿದರು. ಹಾಸನದಲ್ಲಿ ಮೈತ್ರಿ ಅಭ್ಯರ್ಥಿ, ಜೆಡಿಎಸ್ ಸಂಸದ ಪ್ರಜ್ವಲ್ ರೇವಣ್ಣ ನಾಮಪತ್ರ ಸಲ್ಲಿಕೆ ವೇಳೆ ಹಾಜರಿದ್ದು ಅವರು ಮಾತನಾಡಿದರು. ರೈತ, ದಲಿತ ವಿರೋಧಿ ಕಾಂಗ್ರೆಸ್ ಪಕ್ಷವನ್ನು ದೇಶದಿಂದ ಕಿತ್ತೊಗೆಯಬೇಕು. ಆ ನಿಟ್ಟಿನಲ್ಲಿ ಬಿಜೆಪಿಯೊಂದಿಗೆ ಜೆಡಿಎಸ್ ಮೈತ್ರಿ ಮಾಡಿಕೊಂಡಿದೆ. ಮಾಜಿ ಪ್ರಧಾನಿ ಹೆಚ್.ಡಿ ದೇವೇಗೌಡರು ನಮ್ಮೆಲ್ಲರ ಹಿರಿಯರು. ಕಳೆದ ಲೋಕಸಭಾ ಚುನಾವಣೆಯಲ್ಲಿ ಆಶೀರ್ವಾದ ಮಾಡಿರಲಿಲ್ಲ. ಈ ಚುನಾವಣೆಯಲ್ಲಿ ದೇವೇಗೌಡರ ಆಶೀರ್ವಾದ ನಮ್ಮ ಮೇಲಿದೆ ಎಂದು ವಿಜಯೇಂದ್ರ ಹೇಳಿದರು.

ಪ್ರಧಾನಿ ಮೋದಿ ಅವರಿಗಾಗಿ ಹೆಚ್.ಡಿ ದೇವೇಗೌಡರು ಮೈತ್ರಿ ಮಾಡಿಕೊಂಡಿದ್ದಾರೆ. ದೇವೇಗೌಡರು ಖುದ್ದು ಮೋದಿ ಭೇಟಿಯಾಗಿ ಮಾತುಕತೆ ನಡೆಸಿದ್ದರು. ಹಾಸನ ಕ್ಷೇತ್ರದ ಎನ್‌ಡಿಎ ಅಭ್ಯರ್ಥಿ ಗೆಲ್ಲಿಸಲು ನಾವು ಕೆಲಸ ಮಾಡಬೇಕು ಎಂದು ವಿಜಯೇಂದ್ರ ಹೇಳಿದರು. ಜೆಡಿಎಸ್ ಅಭ್ಯರ್ಥಿಯಾಗಿ ಪ್ರಜ್ವಲ್ ರೇವಣ್ಣ ಹಾಸನ ಜಿಲ್ಲಾಧಿಕಾರಿ ಕಚೇರಿಯಲ್ಲಿ ನಾಮಪತ್ರ ಸಲ್ಲಿಸಿದರು. ಮೊಮ್ಮಗ ಪ್ರಜ್ವಲ್ ನಾಮಪತ್ರ ಸಲ್ಲಿಕೆ ವೇಳೆ ದೇವೇಗೌಡರು ಹಾಜರಿದ್ದರು. ಉಳಿದಂತೆ ಬಿವೈ ವಿಜಯೇಂದ್ರ, ಹೆಚ್.ಡಿ.ರೇವಣ್ಣ, ಡಿ.ವಿ.ಸದಾನಂದ ಗೌಡ ಹಾಜರಿದ್ದರು.

ನಾಮಪತ್ರ ಸಲ್ಲಿಕೆ ಬಳಿಕ ದೇವೇಗೌಡರ ನೇತೃತ್ವದಲ್ಲಿ ರೋಡ್?ಶೋ ನಡೆಯಿತು. ಹಾಸನದಲ್ಲಿ ಮೊಮ್ಮಗ ಪ್ರಜ್ವಲ್ ಪರ ದೇವೇಗೌಡ ರೋಡ್?ಶೋ ನಡೆಸಿ ಮತಯಾಚನೆ ಮಾಡಿದರು. ಈ ಮೈತ್ರಿ ತಾತ್ಕಾಲಿಕವಲ್ಲ. ಬಿಜೆಪಿ-ಜೆಡಿಎಸ್ ಮೈತ್ರಿ ಲೋಕಸಭೆ ಚುನಾವಣೆ ನಂತರವೂ ಮುಂದುವರಿಯಲಿದೆ. ಮೈತ್ರಿ ನಾಯಕರು ಭದ್ರ ಬುನಾದಿ ಹಾಕಿದರೆ ರಾಜ್ಯದಲ್ಲಿ ಕಾಂಗ್ರೆಸ್ ಗೆಲುವು ಅಸಾಧ್ಯ ಎಂದು ಇತ್ತೀಚೆಗೆ ಕುಮಾರಸ್ವಾಮಿ ಸಹ ಹೇಳಿದ್ದರು. ಕರ್ನಾಟಕದಲ್ಲಿ ಬಿಜೆಪಿ-ಜೆಡಿಎಸ್ ಮೈತ್ರಿ ತಾತ್ಕಾಲಿಕವಲ್ಲ, ಮುಂದೆಯೂ ಇರಲಿದೆ ಎಂದು ಜೆಡಿಎಸ್ ರಾಷ್ಟ್ರೀಯ ಅಧ್ಯಕ್ಷ ಹೆಚ್.ಡಿ ದೇವೇಗೌಡ ಮಾರ್ಚ್ 30ರಂದು ಘೋಷಣೆ ಮಾಡಿದ್ದರು.

ತುಮಕೂರಿನಲ್ಲಿ ನಡೆದಿದ್ದ ಜಿಲ್ಲಾ ಮಟ್ಟದ ಜೆಡಿಎಸ್ ಮುಖಂಡರ ಸಭೆಯಲ್ಲಿ ಮಾತನಾಡಿದ್ದ ದೇವೇಗೌಡರು, ಚುನಾವಣೆ ಮುಗಿದ ಮೇಲೆಯೂ ಬಿಜೆಪಿ ಜೆಡಿಎಸ್ ಸಂಬಂಧ ಮುಂದುವರೆಯುತ್ತದೆ. ಈ ಸಂಬಂಧ ಕಾಪಾಡಿಕೊಂಡು ಹೋಗುತ್ತೇವೆ. ನಮ್ಮ ಬಾಂಧವ್ಯ ತಾತ್ಕಾಲಿಕವಲ್ಲ. ಈ ಬಾಂಧವ್ಯವನ್ನ ಮುಂದುವರೆಸಿಕೊಂಡು ಹೋಗುವ ಪ್ರಾಮಾಣಿಕ ಕೆಲಸ ಮಾಡಬೇಕು ಎಂದಿದ್ದರು.

## ಡಿಕೆ ಸುರೇಶ್ ಜೊತೆ ಕೈ ಕುಲುಕಿ ಶುಭ ಕೋರಿದ ಶಾಸಕ ಮುನಿರತ್ನ

**ರಾಮನಗರ:** ತೀವ್ರ ಕುತೂಹಲ ಕೆರಳಿಸಿರುವ ಬೆಂಗಳೂರು ಗ್ರಾಮಾಂತರ ಕ್ಷೇತ್ರದಲ್ಲಿಯೂ ನಾಮಪತ್ರ ಭರಾಟೆ ಜೋರಾಗಿದೆ. ಇಂದು ಬಿಜೆಪಿ ಅಭ್ಯರ್ಥಿ ಡಾ.ಸಿ.ಎನ್ ಮಂಜುನಾಥ್ ಉಮೇದುವಾರಿಕೆ ಸಲ್ಲಿಸಿದ್ದಾರೆ. ನಾಮಪತ್ರ ಸಲ್ಲಿಕೆ ಬಳಿಕ ಬೃಹತ್ ಮೈತ್ರಿ ಸಮಾವೇಶ ಆಯೋಜಿಸಲಾಗಿದೆ. ನಾಮಪತ್ರಕ್ಕೂ ಮುನ್ನ ರಾಮನಗರದ ಚಾಮುಂಡೇಶ್ವರಿ ತಾಯಿಗೆ ಮಂಜುನಾಥ್ ಪೂಜೆ ಸಲ್ಲಿಸಲಿದ್ದಾರೆ. ಡಾ.ಮಂಜುನಾಥ್‌ಗೆ ಮಾಜಿ ಸಿಎಂ ಯಡಿಯೂರಪ್ಪ,



ವಿಪಕ್ಷ ನಾಯಕ ಆರ್.ಅಶೋಕ್, ಬಿ.ವೈ.ವಿಜಯೇಂದ್ರ ಅವರು ನಾಮಪತ್ರ ಸಲ್ಲಿಕೆ ವೇಳೆ ಸಾಥ್ ನೀಡಿದ್ದಾರೆ. ಇನ್ನು, ಶಾಸಕ ಮುನಿರತ್ನ - ಡಿ.ಕೆ ಸುರೇಶ್ ಮುಖಾಮುಖಿಯಾಗಿದ್ದು, ಈ ವೇಳೆ ಡಿ.ಕೆ ಸುರೇಶ್ ಗೆ ಕೈ ಕುಲುಕಿ ಮುನಿರತ್ನ ಶುಭಾಶಯ ಕೋರಿದ್ದಾರೆ. ಡಿ.ಕೆ.ಸುರೇಶ್ ಸಿಕ್ಕಿದ್ದರು, ಮಾತನಾಡಿಸಿದೆ. ನನ್ನ ಟಾರ್ಗೆಟ್ ಮಾಡಲು ಆಗಲ್ಲ, ಮಂಜುನಾಥ್ ಈಗಾಗಲೇ ಗೆದ್ದಾಗಿದೆ ಎಂದು ಶಾಸಕ ಮುನಿರತ್ನ ವಿಶ್ವಾಸ ವ್ಯಕ್ತಪಡಿಸಿದ್ದಾರೆ. ಇದೇ ವೇಳೆ ಡಿ.ಕೆ.ಸುರೇಶ್ ಗೆ ವ್ಯಂಗ್ಯವಾಡಿದ ಯೋಗೇಶ್ವರ್, ಡಿ.ಕೆ.ಸುರೇಶ್ ಮುಖಕಪ್ಪಾಗಿದೆ, ಕೇಳ್ದೇ ಬಿಸಿಲು ಎಂದರು. ಇವತ್ತು ನಾಮಪತ್ರ ಸಲ್ಲಿಸಲು ಬಂದಿದ್ದಾರೆ, ಯಾಕೆ ಗೊತ್ತಿಲ್ಲ, ಈ ಬಾರಿ ಮಂಜುನಾಥ್ ರವರು ಗೆಲುವು ಶತಸಿದ್ಧ. ಅಭಿವೃದ್ಧಿ ಗಾಗಿ ಮಂಜುನಾಥ್ ಗೆ ಮತಹಾಕಬೇಕು, ಈ ಬಾರಿ ಅವರು ಗೆಲ್ಲುವುದು ಖಂಡಿತ. ಒಳ್ಳೆಯ ಉದ್ದೇಶದಿಂದ ರಾಜಕೀಯಕ್ಕೆ ಬಂದಿದ್ದಾರೆ ಎಂದು ಹೇಳಿದ್ದಾರೆ. ನಾಮಪತ್ರ ಸಲ್ಲಿಕೆ ಬಳಿಕ ಮಾತನಾಡಿದ ಡಿಕೆ ಸುರೇಶ್, ಇವತ್ತು ಒಳ್ಳೆಯ ದಿನ ಎಂದು ನಾಮಪತ್ರ ಸಲ್ಲಿಸಿದ್ದೇನೆ. ನಾನು ಡಾಕ್ಟರ್ ನ ಮಾತನಾಡಿಸಿದೆ, ಆರೋಗ್ಯ ವಿಚಾರಿಸಿದೆ ಎಂದು ಹೇಳಿದರು. 5 ಲಕ್ಷ ಮತಗಳ ಅಂತರದಲ್ಲಿ ಮಂಜುನಾಥ್ ಗೆಲ್ತಾರೆಂಬ ಅಮಿತ್ ಶಾ ಹೇಳಿಕೆಗೆ ತಿರುಗೇಟು ನೀಡಿ, ಅವರಿಗೆ ಕರ್ನಾಟಕ, ಕನ್ನಡಿಗರ ನಾಡಿಮಿಡಿತ ಗೊತ್ತಿಲ್ಲ. ಹಾಗಾಗಿ ಅವರು ಹಾಗೇ ಹೇಳಿದ್ದಾರೆ ಅಷ್ಟೇ, ನಾವು ಕನ್ನಡಿಗರು ಎಂದು ಶಾಲು ತೋರಿಸಿ ಡಿ.ಕೆ ಸುರೇಶ್ ತೆರಳಿದರು.

## ಲೋಕಸಭೆ ಚುನಾವಣೆ ಬಳಿಕ ರಾಜ್ಯ ಸರ್ಕಾರ ಪತನ

**ಯಾದಗಿರಿ:** ಎಲೆಕ್ಷನ್ ಆದ ಮೇಲೆ ರಾಜ್ಯ ಸರ್ಕಾರ ಬೀಳುತ್ತೆ ಎಂದು ಕಲಬುರಗಿ ಲೋಕಸಭಾ ಬಿಜೆಪಿ ಅಭ್ಯರ್ಥಿ ಉಮೇಶ್ ಜಾಧವ್ (ಭವಿಷ್ಯ ನುಡಿದಿದ್ದಾರೆ. ಯಾದಗಿರಿ ಜಿಲ್ಲೆಯ ಗುರುಮಠಕಲ್ ಪಟ್ಟಣದಲ್ಲಿ ಹಮ್ಮಿಕೊಂಡ ಬಿಜೆಪಿ ಪ್ರಮುಖರ ಸಭೆಯಲ್ಲಿ ಮಾತನಾಡಿದ ಅವರು, ರಾಜ್ಯ ಕಾಂಗ್ರೆಸ್ ಸರ್ಕಾರ ನಾವು ಬೀಳಿಸುವುದಿಲ್ಲ. ಎಲೆಕ್ಷನ್ ಆದ ಮೇಲೆ ಸರ್ಕಾರ ತನ್ನ?ಟ್ಕೆ ತಾನೇ ಬೀಳುತ್ತದೆ ಅಂತಾ ಹೇಳಿದ್ದಾರೆ. ಅಲ್ಲದೇ, ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಯಾವುದೇ ಅಭಿವೃದ್ಧಿ ಕಾರ್ಯ ಮಾಡಿಲ್ಲ ಅಂತಾ ಕಿಡಿಕಾರಿದ್ದಾರೆ. ಇದೇ ವೇಳೆ ಸಚಿವ ಪ್ರಿಯಾಂಕ್ ಖರ್ಗೆ ವಿರುದ್ಧವೂ ವಾಗ್ದಾಳಿ ನಡೆಸಿ, ಪ್ರಿಯಾಂಕ್ ಖರ್ಗೆ ಅವರಿಗೆ ಜೀವ ಬೇದರಿಕೆ ಇದೆ ಅಂತಾರೆ. ಮಿಸ್ಟರ್ ಪ್ರಿಯಾಂಕಾ ಖರ್ಗೆ ನಿಮ್ಮ ಸಾವಿನ ಮೇಲೆ ನಾವು ರಾಜಕೀಯ ಮಾಡುತ್ತೇವೆ ಎಂದು ಹೇಳುತ್ತಿರಲ್ಲ, ಮೊದಲು ನೀವು ಪ್ರೊಟೆಕ್ಷನ್ ಮಾಡಿಕೋ ಅಂತಾ ಕುಟುಕಿದ್ದಾರೆ. ಭಾರತ ಸೇರಿ ಈಡಿ ಜಗತ್ತು ರಕ್ಷಣೆ ಮಾಡಲು ಮೋದಿ ಪಿಎಂ ಆಗ ಬೇಕೆನ್ನುತ್ತಾರೆ, ಪಾಕಿಸ್ತಾನದಲ್ಲಿ ಮುಸ್ಲಿಂರು ಭಾರತದಲ್ಲಿ ಮೋದಿ ಪಿಎಂ ಆಗಬೇಕೆನ್ನುತ್ತಾರೆ. ಮೋದಿ ಅವರು ತಮ್ಮ ಅವಧಿಯಲ್ಲಿ ಇತರ ಸೃಷ್ಟಿಸಿದ್ದು, ಅನೇಕ ವೆಸ್ಟ್ ಕಾನೂನು ರದ್ದು ಮಾಡಿದ್ದಾರೆ. ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಯಾವುದೇ ಅಭಿವೃದ್ಧಿ ಕಾರ್ಯ ಮಾಡಿಲ್ಲ, ರಾಜ್ಯ ಕಾಂಗ್ರೆಸ್ ಸರ್ಕಾರ ನಾವು ಬೀಳಿಸುವುದಿಲ್ಲ, ಎಲೆಕ್ಷನ್ ಆದ ಮೇಲೆ ಸರ್ಕಾರ ತನ್ನಷ್ಟಕ್ಕೆ ತಾನೇ ಬೀಳುತ್ತದೆ ಎಂದು ಜಾಧವ್ ಭಾಷಣದ ಉದ್ದಕ್ಕೂ ವಾಗ್ದಾಳಿ ನಡೆಸಿದ್ದಾರೆ.

## ರೋಡ್ ಶೋ ಮೂಲಕ ತೆರಳಿ ತೇಜಸ್ವಿ ಸೂರ್ಯ ನಾಮಪತ್ರ

**ಬೆಂಗಳೂರು:** ಬೆಂಗಳೂರು ದಕ್ಷಿಣ ಲೋಕಸಭಾ ಅಭ್ಯರ್ಥಿ ತೇಜಸ್ವಿ ಸೂರ್ಯ ಅವರು ಇಂದು ನಾಮಪತ್ರ ಸಲ್ಲಿಸಿದರು. ಇದಕ್ಕೂ ಮೊದಲು ಜಯನಗರ 4ನೇ ಬ್ಲಾಕಿನ ಮಯ್ಯಾಸ್ ಹೋಟೆಲ್‌ನಿಂದ ರೋಡ್ ಶೋ ಮೂಲಕ ಹೊರಟು ಬಿಬಿಎಂಪಿ ಜಂಟಿ ಆಯುಕ್ತರ ಕಚೇರಿಯಲ್ಲಿ ನಾಮಪತ್ರ ಸಲ್ಲಿಸಿದರು.

ಈ ಸಂದರ್ಭದಲ್ಲಿ ಕೇಂದ್ರ ಸಚಿವ ಅನುರಾಗ್ ಸಿಂಗ್ ಠಾಕೂರ್, ವಿರೋಧ ಪಕ್ಷದ ನಾಯಕ ಆರ್. ಅಶೋಕ್, ಸಂಸದ ಪ್ರತಾಪ ಸಿಂಹ, ರಾಜ್ಯಸಭಾ ಸದಸ್ಯ ಜಗ್ಗೇಶ್, ಬೆಂಗಳೂರು ದಕ್ಷಿಣ ಜಿಲ್ಲಾಧ್ಯಕ್ಷ ಮತ್ತು ಶಾಸಕ ಸಿ.ಕೆ. ರಾಮಮೂರ್ತಿ, ಶಾಸಕರಾದ ಸತೀಶ್ ರೆಡ್ಡಿ, ರವಿ ಸುಬ್ರಹ್ಮಣ್ಯ, ಉದಯ ಗರುಡಾಚಾರ್, ವಿಧಾನಪರಿ?ತ್ ಸದಸ್ಯ ಶರವಣ, ಜೆಡಿಎಸ್ ಬೆಂಗಳೂರು ಮಹಾನಗರ ಅಧ್ಯಕ್ಷ ರಮೇಶ್ ಗೌಡ, ಜೆಡಿಎಸ್ ಬೆಂಗಳೂರು ದಕ್ಷಿಣ ಜಿಲ್ಲೆ ಅಧ್ಯಕ್ಷ ತುಳಸಿರಾಮ್ ಅವರು ಹಾಜರಿದ್ದರು. ಬೆಂಗಳೂರು ದಕ್ಷಿಣ ಲೋಕಸಭಾ ಕ್ಷೇತ್ರದ ಬಿ.ಜೆ.ಪಿ. ಮತ್ತು ಜೆ.ಡಿ.ಎಸ್. ಪಕ್ಷದ ಮಾಜಿ ಮಹಾಪೌರರು, ಉಪ ಮಹಾಪೌರರು, ಬಿ.ಬಿ.ಎಂ.ಪಿ. ನಿಕಟಪೂರ್ವ ಸದಸ್ಯರು, ಪಕ್ಷದ ಉಪಾಧ್ಯಕ್ಷರು, ಪ್ರಧಾನ ಕಾರ್ಯದರ್ಶಿಗಳು, ಕಾರ್ಯದರ್ಶಿಗಳು, ಮೋರ್ಚಾಗಳ ಅಧ್ಯಕ್ಷರು, ಪದಾಧಿಕಾರಿಗಳು, ಪ್ರಕೋ?ಗಳ ಅಧ್ಯಕ್ಷರು, ಪದಾಧಿಕಾರಿಗಳು, ಮಂಡಲದ ಅಧ್ಯಕ್ಷರು ಹಾಗೂ ಪದಾಧಿಕಾರಿಗಳು, ಪಕ್ಷದ ಮುಖಂಡರು, ಕಾರ್ಯಕರ್ತರು, ಸಹಸ್ರಾರು ಸಂಖ್ಯೆಯಲ್ಲಿ ಭಾಗವಹಿಸಿ ಬೆಂಬಲ ಸೂಚಿಸಿದರು. ನಾಮಪತ್ರ ಸಲ್ಲಿಕೆಗೂ ಮುನ್ನ ಅವರು ಗಿರಿನಗರದ ಶ್ರೀ ಗಣೇಶ ದೇವಸ್ಥಾನದಲ್ಲಿ ಕುಟುಂಬದೊಂದಿಗೆ ಪೂಜೆ ಸಲ್ಲಿಸಿದರು. ಗಿರಿನಗರದ ಭಾಗದಿಂದ ನಾಮಪತ್ರ ಸಲ್ಲಿಕೆ ಮೆರವಣಿಗೆಗೆ ಜೆಡಿಎಸ್ ಯುವ ಘಟಕದ ಅಧ್ಯಕ್ಷ ನಿಖಿಲ್ ಕುಮಾರಸ್ವಾಮಿ ಅವರು ಚಾಲನೆ ನೀಡಿ ಶುಭ ಹಾರೈಸಿದರು.

## ರೈತರಿಗೆ ಮಿಡಿಯುವ ಹೃದಯ ಕುಮಾರಸ್ವಾಮಿಯವ್ರದ್ದು

**ಮಂಡ್ಯ:** ರೈತರ ಕಣ್ಮಣಿ, ರೈತರಿಗೆ ಮಿಡಿಯುವ ಹೃದಯ ಕುಮಾರಸ್ವಾಮಿಯವರದ್ದಾಗಿದ್ದು, 30 ವರ್ಷದ ರಾಜಕೀಯ ಜೀವನದುದ್ದಕ್ಕೂ ಜನರಿಗಾಗಿ ಹೃದಯ ಮಿಡಿದಿದೆ ಎಂದು ಜೆಡಿಎಸ್



ಯುವ ಮುಖಂಡ ನಿಖಿಲ್ ಕುಮಾರಸ್ವಾಮಿ ಹೇಳಿದ್ದಾರೆ.

ಮಂಡ್ಯದಲ್ಲಿ ನಡೆಯುತ್ತಿರುವ ಸಮಾವೇಶದಲ್ಲಿ ಮಾತನಾಡಿದ ಅವರು, ತನ್ನ ರಾಜಕೀಯ ಜೀವನದುದ್ದಕ್ಕೂ ಜನರಿಗಾಗಿ ಹೆಚ್ ಡಿಕೆಯವರ ಹೃದಯ ಮಿಡಿದಿದೆ. ಈ ಕಾರಣದಿಂದಲೇ ಜನರು ಹೃದಯವಂತ ಅಂತ ಕರೆಯುತ್ತಾರೆ ಎಂದರು. ಎನ್.ಡಿ.ಎ ಮೈತ್ರಿಗೆ ಮುಖ್ಯ ಕಾರಣ ಪ್ರಮೋದ್ ಸಾವಂತ್. ಮಂಡ್ಯದ ಜನರ ಋಣ ತೀರಿಸುವ ಕೆಲಸ ಮಾಡುತ್ತೇವೆ. ಯಾವುದೇ ಭಿನ್ನಾಭಿಪ್ರಾಯಕ್ಕೆ ಅವಕಾಶ ಕೊಡುವುದಿಲ್ಲ. ಕಾವೇರಿ ಸಮಸ್ಯೆಯನ್ನ ಕುಮಾರಸ್ವಾಮಿ ಬಗೆಹರಿಸುತ್ತಾರೆ ಅಂತ ತಾವು ಅಂದುಕೊಂಡಿದ್ದೀರಿ. ಅದಕ್ಕಾಗಿ ಕುಮಾರಸ್ವಾಮಿ ಕೆಲಸ ಮಾಡುತ್ತಾರೆ ಎಂದು ಹೇಳಿದರು. ದೇಶವನ್ನ ಕಟ್ಟಲಿಕ್ಕೆ ಮೋದಿಯವರು 10 ವರ್ಷ ಕೆಲಸ ಮಾಡುತ್ತಿದ್ದಾರೆ. ವಿಶ್ರಾಂತಿಯನ್ನೇ ಪಡೆಯದೇ ಕೆಲಸ ಮಾಡುತ್ತಿದ್ದಾರೆ. ಅವರನ್ನ ಮತ್ತೊಮ್ಮೆ ಪ್ರಧಾನಿ ಮಾಡಲು ದೇವೇಗೌಡರು ಕೈಜೋಡಿಸಿದ್ದಾರೆ ಎಂದು ನಿಖಿಲ್ ತಿಳಿಸಿದರು.

## ಕ್ಯಾಪ್ಟನ್ ಬ್ರಿಜೇಶ್ ಚೌಟ ನಾಮಪತ್ರ ಸಲ್ಲಿಕೆ

ಬೆಂಗಳೂರು: ದಕ್ಷಿಣ ಕನ್ನಡ ಲೋಕಸಭಾ ಕ್ಷೇತ್ರದ ಚುನಾವಣೆಗೆ ಸಂಬಂಧಿಸಿ ಬಿಜೆಪಿ ಅಭ್ಯರ್ಥಿ ಕ್ಯಾಪ್ಟನ್ ಬ್ರಿಜೇಶ್ ಚೌಟ ಅವರೊಂದಿಗೆ ಇಂದು ಸಂಸದ ನಳಿನ್ ಕುಮಾರ್ ಕಟೀಲ್ ಅವರು ಭಾರತಮಾತೆಗೆ ಪುಷ್ಪಾರ್ಚನೆ ಮಾಡುವ ಮೂಲಕ ಬೃಹತ್ ರೋಡ್ ಶೋದಲ್ಲಿ ಭಾಗವಹಿಸಿದ್ದರು. ಈ ವೇಳೆ ಪಕ್ಷದ ಸಾವಿರಾರು ಕಾರ್ಯಕರ್ತರು, ಹಿತೈಷಿಗಳು ಮೆರವಣಿಗೆಯುದ್ದಕ್ಕೂ ಸಾಗರೋಪಾದಿಯಲ್ಲಿ ಸೇರಿದ್ದರು. ಕಾರ್ಯಕರ್ತರು 'ಮತ್ತೊಮ್ಮೆ ಮೋದಿ, ಮತ್ತೊಮ್ಮೆ ಬಿಜೆಪಿ' ಘೋಷಣೆಗಳನ್ನು ಕೂಗಿದರು. ಈ ಸಂದರ್ಭದಲ್ಲಿ ನಿಕಟಪೂರ್ವ ರಾಷ್ಟ್ರೀಯ ಪ್ರಧಾನ ಕಾರ್ಯದರ್ಶಿ ಸಿ.ಟಿ.ರವಿ, ಶಾಸಕರಾದ ಸುನಿಲ್ ಕುಮಾರ್ ಕಾರ್ಕಳ, ಹರೀಶ್ ಪೂಂಜಾ, ವೇದವ್ಯಾಸ ಕಾಮತ್, ರಾಜೇಶ್ ನಾಯಕ್ ಯು, ಉಮಾನಾಥ್ ಕೋಟ್ಯಾನ್, ಕು. ಭಾಗೀರಥಿ ಮುರುಳ್ಯ, ಪ್ರತಾಪ್ ಸಿಂಹ ನಾಯಕ್, ಭರತ್ ಶೆಟ್ಟಿ ವೈ, ಜಿಲ್ಲಾಧ್ಯಕ್ಷ ಸತೀಶ್ ಕುಂಪಲ, ಪ್ರಮುಖರಾದ ಪ್ರಮೋದ್ ಮಧ್ವರಾಜ್ ಹಾಗೂ ಜೆಡಿಎಸ್ ಪಕ್ಷದ ಪ್ರಮುಖರು, ಸಾವಿರಾರು ಕಾರ್ಯಕರ್ತ ಬಂಧುಗಳು ಉಪಸ್ಥಿತರಿದ್ದರು.




## ಪುಲ್ವಾಮಾ ದಾಳಿ ಮಾಡಿಸಿದ್ದು ಬಿಜೆಪಿ, ಸರ್ಜಿಕಲ್ ಸ್ಟ್ರೈಕ್ ನಾಟಕ

ತುಮಕೂರು: ಪುಲ್ವಾಮಾ ದಾಳಿಯನ್ನು ಬೇರೆ ಯಾರೂ ಮಾಡಿಲ್ಲ, ಬಿಜೆಪಿಯವರೇ ಮಾಡಿಸಿದ್ದು. ಬಳಿಕ ಇವರೇ ಸರ್ಜಿಕಲ್ ಸ್ಟ್ರೈಕ್ ನಾಟಕ ಮಾಡಿದ್ದಾರೆ ಎಂದು ಗುಬ್ಬಿ ಶಾಸಕ ಎಸ್.ಆರ್ ಶ್ರೀನಿವಾಸ್ ವಿವಾದಾತ್ಮಕ ಹೇಳಿಕೆ ನೀಡಿದ್ದಾರೆ.

ಕಾಂಗ್ರೆಸ್ ರೋಡ್ ಶೋ ವೇಳೆ ಮಾತನಾಡಿದ ಅವರು, ಕಳೆದ ಬಾರಿ ಪುಲ್ವಾಮಾ ದಾಳಿ ಮಾಡಿ ಚುನಾವಣೆಯಲ್ಲಿ ಗೆದ್ದರು. ಈ ಬಾರಿ ರಾಮ ಮಂದಿರ ತೋರಿಸುತ್ತಿದ್ದಾರೆ. ಬರೀ ಹಿಂದೂ ಮುಸ್ಲಿಂ ಗಲಾಟೆ ಮಾಡೋದೇ ಇವರ ಕೆಲಸ. ಮೋದಿ



ಬಂದು 10 ವರ್ಷ ಆಯ್ತು, ಒಬ್ಬ ಮುಸ್ಲಿಂ ವ್ಯಕ್ತಿಯನ್ನು ದೇಶದಿಂದ ಓಡಿಸಲು ಆಗಿಲ್ಲ ಎಂದಿದ್ದಾರೆ. ತುಮಕೂರಿನ ಜನ ಸ್ವಾಭಿಮಾನ ಮಾರಾಟ ಮಾಡಿದ ಪ್ರಕರಣ ಇಲ್ಲ. ಈ ಬಾರಿಯೂ ಯಾರೂ ಸ್ವಾಭಿಮಾನ ಮಾರಿಕೊಳ್ಳಲ್ಲ ಎಂಬ ಭರವಸೆ ಇದೆ. ಬಿಜೆಪಿ ಸಂಸದರು ಯಾರೂ ಒಬ್ಬ ಮೋದಿ ಮುಂದೆ ಗಂಡಸಾಗಿ ನಿಂತಿಲ್ಲ, ಲೋಕಸಭೆಯಲ್ಲಿ ಸಮರ್ಥವಾಗಿ ಎದುರಿಸುವ ಮುದ್ದುಹನುಮೇಗೌಡರಿಗೆ ಮತ ಹಾಕಬೇಕು ಎಂದಿದ್ದಾರೆ. ಇದೇ ವೇಳೆ, ಟಿಕೆಟ್ ಸಿಗುವ ಮುನ್ನ ಮುದ್ದುಹನುಮೇಗೌಡ ಸುಟ್ಟ ಬದನೆಕಾಯಿ ಥರ ಇದ್ದರು. ಈಗ ಪರವಾಗಿಲ್ಲ ಸ್ವಲ್ಪ ನೆಟ್ಟಗಾಗಿದ್ದಾರೆ ಎಂದು ಹಾಸ್ಯ ಚಟಾಕಿ ಸಿಡಿಸಿದ್ದಾರೆ.



## ಹಾಸನದಲ್ಲಿ ಜೆಡಿಎಸ್‌ಗೆ ಒಳ ಏಟಿನ ಭಯ

ಬಿಜೆಪಿ ರಾಜ್ಯಾಧ್ಯಕ್ಷ ಬಿವೈ ವಿಜಯೇಂದ್ರ, ಬಂದರೂ ರಾಜ್ಯ ಬಿಜೆಪಿ ಪ್ರಧಾನ ಕಾರ್ಯದರ್ಶಿ ಪ್ರೀತಂಗೌಡ ಗೈರಾಗಿದ್ದು ಮೈತ್ರಿಗೆ ಬೆಂಬಲ ಸಿಗುವುದು ಬಹುತೇಕ ಅನುಮಾನವಾಗಿದೆ. ಇದರಿಂದಾಗಿ ಜೆಡಿಎಸ್‌ಗೆ ಒಳಏಟಿನ ಭಯ ಶುರುವಾಗಿದೆ.

ಮಾಜಿ ಪ್ರಧಾನಿ ಎಚ್.ಡಿ.ದೇವೇಗೌಡರು, ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ, ಹೆಚ್.ಡಿ ರೇವಣ್ಣ ನೇತೃತ್ವದಲ್ಲಿ ಪ್ರಜ್ವಲ್ ನಾಮಪತ್ರ ಸಲ್ಲಿಸಿ ನಗರದ ಜಿಲ್ಲಾ ಕ್ರೀಡಾಂಗಣದಿಂದ ಹೇಮಾವತಿ ಪ್ರತಿಮೆವರೆಗೂ ಬೃಹತ್ ಶೋ ನಡೆಸಿದರು. ಆದರೆ ಮಾಜಿ ಶಾಸಕ ಪ್ರೀತಂಗೌಡ ದೂರ ಉಳಿದಿದ್ದು ಮೈತ್ರಿಗೆ ಇನ್ನೂ ವಿರೋಧ ಇದೆ ಎಂಬುದನ್ನು ಮತ್ತೊಮ್ಮೆ ಸಾಬೀತುಪಡಿಸಿದರು.

ಹಾಸನ ನಗರದ ಅಶೋಕ ಹೋಟೆಲ್‌ನಲ್ಲಿ ಮೊದಲ ಜೆಡಿಎಸ್-ಬಿಜೆಪಿ ಸಮನ್ವಯ ಸಭೆ ನಡೆಸಲಾಯಿತು. ಈ ಸಭೆಗೂ ಪ್ರೀತಂಗೌಡ ಗೈರಾಗಿದ್ದರು. ಮಾಜಿ ಸಚಿವ ಸಿ.ಟಿ.ರವಿ, ಬಿಜೆಪಿ ಶಾಸಕರಾದ ಸಿಮೆಂಟ್ ಮಂಜು ಸೇರಿ ಎರಡು ಪಕ್ಷದ ಮುಖಂಡರು ಭಾಗಿಯಾಗಿದ್ದರು. ಸಭೆಯಲ್ಲಿ ಮೈತ್ರಿ ಧರ್ಮ ಪಾಲಿಸುವಂತೆ ಬಿಜೆಪಿ ನಾಯಕರು ಕರೆ ನೀಡಿದರಲ್ಲದೇ, ಪ್ರೀತಂಗೌಡ ಬೆಂಬಲಿಗರ ಮನವೊಲಿಸಿದರು. ಸಭೆ ಬಳಿಕ ಮಾತನಾಡಿದ ಸಿ.ಟಿ ರವಿ ಹಾಗೂ ಹೆಚ್.ಡಿ ರೇವಣ್ಣ ಯಾವುದೇ ಅಪಸ್ವರ ಇಲ್ಲ ಎಂದು ಮತ್ತೆ ಉಲ್ಲೇಖಿಸಿದರು.

ಒಟ್ಟಿನಲ್ಲಿ ಹಾಸನ ಲೋಕಸಭಾ ಕ್ಷೇತ್ರದ ಚುನಾವಣೆ ಅಖಾಡ ರಂಗೇರಿದ್ದು ಮೈತ್ರಿ ಅಭ್ಯರ್ಥಿ ಹಾಗೂ ಕಾಂಗ್ರೆಸ್ ನಡುವೆ ನೇರ ಹಣಾಹಣಿ ಏರ್ಪಟ್ಟಿದೆ. ಇದರ ನಡುವೆ ಪ್ರೀತಂಗೌಡ ನಡೆಯಿಂದ ಜೆಡಿಎಸ್‌ಗೆ ಹಿನ್ನಡೆಯಾಗುವ ಸಾಧ್ಯತೆ ಇದ್ದರೆ, ಕಾಂಗ್ರೆಸ್ ಅದರ ಲಾಭ ಪಡೆಯಲು ಹವಣಿಸುತ್ತಿದೆ. ಆದರೆ ಡ್ಯಾಮೇಜ್ ಕಂಟ್ರೋಲ್‌ಗೆ ಜೆಡಿಎಸ್-ಬಿಜೆಪಿ ನಾಯಕರು ಮುಂದಾಗಿದ್ದು ಇದು ಎ?ಟರಮಟ್ಟಿಗೆ ವರ್ಕೌಟ್ ಆಗಲಿದೆ ಎಂಬುದನ್ನು ಮುಂದಿನ ದಿನಗಳಲ್ಲಿ ಕಾದುನೋಡಬೇಕಿದೆ.

## ಕ್ರಿಮಿನಲ್‌ಗಳು ಜೈಲಿಗೆ ಹೋಗಲು ಭಯ ಪಡುತ್ತಿದ್ದಾರೆ

ಕುಟುಂಬಸ್ಥರು ವಿಷ ಪ್ರಾಶನ ಮಾಡಿ ಅನ್ಸಾರಿಯನ್ನು ಹತ್ಯೆ ಮಾಡಲಾಗಿದೆ ಎಂದು ಆರೋಪಿಸಿದ್ದರೆ ಹೃದಯಾಘಾತದಿಂದ ಸಾವಾಗಿದೆ ಎಂದು ಮರಣೋತ್ತರ ಪರೀಕ್ಷೆ ವರದಿ ನೀಡಿದೆ.

2017ರ ಮೊದಲು ಪೊಲೀಸ್ ಠಾಣೆಗಳು ಸೂರ್ಯಾಸ್ತದ ನಂತರ ಬೀಗ ಹಾಕುತ್ತಿದ್ದವು. ಸಾಮಾನ್ಯ ಜನರು ಭಯಭೀತರಾಗಿದ್ದರು. ಉತ್ತರ ಪ್ರದೇಶದಲ್ಲಿ ಸರ್ಕಾರ ಬದಲಾಯಿತು ಆದರೆ ಅಪರಾಧಿಗಳು ಮೊದಲಿನಂತೆಯೇ ಇರುತ್ತದೆ ಎಂದು ಭಾವಿಸಿದ್ದರು. ನಾವು ನಮ್ಮ ರಾಜ್ಯದಲ್ಲಿ ಅಪರಾಧದ ಬಗ್ಗೆ 'ಶೂನ್ಯ ಸಹಿಷ್ಣುತೆ' ನೀತಿಯನ್ನು ತಂದಿದ್ದೇವೆ. ಕ್ರಿಮಿನಲ್‌ಗಳು ಸುಧಾರಣೆಯಾಗಬೇಕು ಅಥವಾ ಅವರು ಬೆಲೆ ತೆರುವ ಆಯ್ಕೆಯನ್ನು ನೀಡಲಾಗಿದೆ ಎಂದು ಯೋಗಿ ಹೇಳಿದರು.

ಜಾಮೀನು ಸಿಕ್ಕಿ ಪರಾರಿಯಾಗುತ್ತಿದ್ದವರು ಈಗ ತಾವಾಗಿಯೇ ಶರಣಾಗುತ್ತಿದ್ದಾರೆ. ಅಪರಾಧಿಗಳು ನಮ್ಮನ್ನು ಜೈಲಿಗೆ ಕಳುಹಿಸಬೇಡಿ ಎಂದು ಬೇಡಿಕೊಳ್ಳುತ್ತಿದ್ದಾರೆ. ಈಗ ಅವರಿಗೆ ಜೈಲಿಗೆ ಹೋಗುವ ಭಯವಿದೆ. ಇನ್ನು ಮುಂದೆ ಯಾವುದೇ ಅಪರಾಧ ಮಾಡುವುದಿಲ್ಲ. ನಮ್ಮ ಪ್ರಾಣ ಉಳಿದರೆ ನಾವು ಉತ್ಪನ್ನಗಳನ್ನು ಮಾರಾಟ ಮಾಡುತ್ತೇವೆ ಎಂಬ ಸಂದೇಶ ಇರುವ ಪ್ಲೇ ಕಾರ್ಡ್ ಹಿಡಿದು ಬರುತ್ತಿದ್ದಾರೆ ಎಂದರು. ಈ ಹಿಂದೆ ಉತ್ತರ ಪ್ರದೇಶದಲ್ಲಿ ಆಗಾಗ ಗಲಭೆ, ಕರ್ಫ್ಯೂ ನಡೆಯುತ್ತಿತ್ತು ಆದರೆ ರಾಜ್ಯದಲ್ಲಿ ಬಿಜೆಪಿ ಆಡಳಿತ ಬಂದ ಮೇಲೆ ಇದೆಲ್ಲವನ್ನೂ ಬದಲಾವಣೆ ಮಾಡಲಾಗಿದೆ. ಈಗ ಯಾವುದೇ ಗಲಭೆಗಳಿಲ್ಲ ಮತ್ತು ಕರ್ಫ್ಯೂ ಇಲ್ಲ. ಹಬ್ಬಗಳ ಉತ್ಸವ ನಡೆಯುತ್ತಿದೆ. ಉತ್ಸವ ಪ್ರದೇಶ ಇದು ಮೋದಿಯ ಗ್ಯಾರಂಟಿ ಎಂದು ಬಣ್ಣಿಸಿದರು.

## ಅಹಿಂದ'ದತ್ತ ಎಚ್‌ಡಿಕೆ ಚಿತ್ತ

ಬಳಿಕ ಬಿಜೆಪಿಯೊಂದಿಗಿನ ಮೈತ್ರಿಯನ್ನು ಮಾಜಿ ಮುಖ್ಯಮಂತ್ರಿಗಳು ಸಮರ್ಥಿಸಿಕೊಂಡರು. ಇದಕ್ಕಾಗಿ ಗೋವಾ ಮುಖ್ಯಮಂತ್ರಿ ಪ್ರಮೋದ್ ಸಾವಂತ್ ಅವರಿಗೆ ಧನ್ಯವಾದ ಅರ್ಪಿಸಿದರು,

ನಂತರ ರಾಜ್ಯದ ನೀರಾವರಿ ಯೋಜನೆಗಳಿಗೆ ಕೇಂದ್ರ

### ಮೊದಲನೇ ಪುಟದಿಂದ...

ಸರ್ಕಾರದಿಂದ ಹಣ ತರದಿದ್ದರೆ ರಾಜಕೀಯ ನಿವೃತ್ತಿ ಘೋಷಿಸುವುದಾಗಿ ಹೇಳಿದರು.

ನಾಡಿನ ನೀರಾವರಿ ಯೋಜನೆಗಳಿಗೆ ಆಗಿರುವ ಅನ್ಯಾಯದ ವಿರುದ್ಧ ಸಮರ್ಥವಾಗಿ ದನಿಯೆತ್ತಬೇಕಿದೆ. ಕಾವೇರಿ ನೀರು ಹಂಚಿಕೆಯಲ್ಲಿ ರಾಜ್ಯದ ಕಾವೇರಿ ಕಣಿವೆ ಜನರಿಗೆ ಶಾಶ್ವತ ಪರಿಹಾರ ದೊರಕಿಸಬೇಕಿದೆ. ಅದಕ್ಕಾಗಿ ದೇವೇಗೌಡರ ಮಾದರಿಯಲ್ಲಿ ರೈತರಿಗೆ ಧ್ವನಿಯಾಗಿ ಕೆಲಸ ಮಾಡುವುದಕ್ಕೆ ಅವಕಾಶ ನೀಡುವಂತ ಕೋರಲು ನಿಮ್ಮ ಮುಂದೆ ನಿಂತಿರುವುದಾಗಿ ಹೇಳಿದರು.

ಲೋಕಸಭಾ ಚುನಾವಣೆ: ಮಂಡ್ಯದಿಂದ ಜೆಡಿಎಸ್ ಅಭ್ಯರ್ಥಿ ಹೆಚ್.ಡಿ. ಕುಮಾರಸ್ವಾಮಿ ನಾಮಪತ್ರ ಸಲ್ಲಿಕೆ

ನಂತರ ತಮ್ಮ ತಂದೆ ಎಚ್.ಡಿ.ದೇವೇಗೌಡರ ನಾಯಕತ್ವವನ್ನು ದಶಕಗಳಿಂದ ಬೆಂಬಲಿಸಿದ್ದಕ್ಕಾಗಿ ಮಂಡ್ಯ ಜನತೆಗೆ ಕೃತಜ್ಞತೆ ಸಲ್ಲಿಸಿದರು. ಬಳಿಕ ದೇವೇಗೌಡ ಅವರು ಜಿಲ್ಲೆಗೆ ನೀಡಿದ ಕೊಡುಗೆಗಳನ್ನು ವಿವರಿಸಿ, 1977 ವರೆಗೂ ಎಲ್ಲಾ ಲೋಕಸಭಾ ಸ್ಥಾನಗಳನ್ನು ಗೆದ್ದಿದ್ದ ಕಾಂಗ್ರೆಸ್‌ನ ಕೊಡುಗೆ ಏನು ಎಂದು ಪ್ರಶ್ನಿಸಿದರು. ಇದೇ ವೇಳೆ ಕನಕಪುರಕ್ಕೆ ಉಪಮುಖ್ಯಮಂತ್ರಿ ಡಿ ಕೆ ಶಿವಕುಮಾರ್ ಅವರ ಕೊಡುಗೆಯನ್ನು ಪ್ರಶ್ನಿಸಿದ ಅವರು, ಈ ಬಾರಿ ಎಂಟು ಒಕ್ಕಲಿಗ ಅಭ್ಯರ್ಥಿಗಳನ್ನು ಕಣಕ್ಕಿಳಿಸಿರುವ ಕುರಿತು ಕಾಂಗ್ರೆಸ್ ವಿರುದ್ಧ ವಾಗ್ದಾಳಿ ನಡೆಸಿದರು.

ಮಂಡ್ಯದ ಜನರು ರೈತರ ಮತ್ತು ಬಡವರ ಧ್ವನಿಯಾಗಿರುವ ನಮ್ಮ ಪಕ್ಷದ ಮೇಲೆ ವಿಶ್ವಾಸವಿಡುತ್ತಾರೆಯ ಚುನಾವಣಾ ಹೋರಾಟಕ್ಕೆ ಧಾರಾಳವಾಗಿ ಖರ್ಚು ಮಾಡುತ್ತಿರುವ ಕಾಂಗ್ರೆಸ್ ಅನ್ನು ನಂಬುವುದಿಲ್ಲ ಎಂದು ಹೇಳಿದರು.

## ರೆಪೋ ದರದಲ್ಲಿ ಬದಲಾವಣೆ ಇಲ್ಲ; ಶೇ. 6.5ರ ಬಡ್ಡಿದರ ಮುಂದುವರಿಕೆ

ಸತತ ಏಳನೇ ಬಾರಿ ರೆಪೋ ದರ ಬದಲಾವಣೆ ಆಗಿಲ್ಲ. ಹಾಗೆಯೇ, ಹಣದ ಹರಿವು ಸಂಕುಚಿತಗೊಳಿಸುವ ಕ್ರಮವನ್ನೂ ಆರ್‌ಬಿಐ ಮುಂದುವರಿಸುತ್ತಿರುವುದನ್ನು ದಾಸ್ ತಿಳಿಸಿದ್ದಾರೆ.

ವಿವಿಧ ಆರ್ಥಿಕ ತಜ್ಞರು ಮತ್ತು ರೇಟಿಂಗ್ ಏಜೆನ್ಸಿಗಳು ಆರ್ ?ಬಿಐ ಈ ಬಾರಿಯೂ ರೆಪೋ ದರದಲ್ಲಿ ಬದಲಾವಣೆ ಮಾಡದೇ ಹೋಗಬಹುದು ಎಂದು ನಿರೀಕ್ಷಿಸಿದ್ದವು. ಎಂಪಿಸಿ ಸಭೆಯಲ್ಲಿ ಗವರ್ನರ್ ಶಕ್ತಿಕಾಂತ್ ದಾಸ್ ಅವರನ್ನೂ ಸೇರಿ ಭಾಗವಹಿಸಿದ್ದ 6 ಮಂದಿ ಪೈಕಿ ಐವರು ರೆಪೋ ದರ ಯಥಾಸ್ಥಿತಿ ಮುಂದುವರಿಸಲು ಒಲವು ತೋರಿದರೆನ್ನಲಾಗಿದೆ. 5:1 ಮತಗಳು ಈ ನಿರ್ಧಾರದ ಪರವಾಗಿ ಬಂದಿದೆ.

## 2275 ವಿಶೇಷ ಬಸ್ ವ್ಯವಸ್ಥೆ

ಸಾಲು ಸಾಲು ರಜೆ:ಏ.7 ಭಾನುವಾರ, 9 ಮಂಗಳವಾರ ಯುಗಾದಿ ಹಬ್ಬ, ಗುರುವಾರ ರಂಜಾನ್ ಇದೆ. ಏ. 13 ಎರಡನೇ ಶನಿವಾರ ರಜೆ ಹಾಗೂ 14 ರಂದು ಭಾನುವಾರದ ರಜೆ ಇದೆ. ಕೆಲವರು ರಜೆ ಹಾಕಿ ಊರಿಗೆ ತೆರಳಲು ತಯಾರಿ ನಡೆಸಿದ್ದಾರೆ. ಏ.7ರಿಂದ 14ರ ವರೆಗೆ ಒಟ್ಟು 5 ರಜೆಗಳು ಸಿಗಲಿದೆ. ವಿದ್ಯಾರ್ಥಿಗಳಿಗೆ ರಜೆ ಶುರುವಾದ ಕಾರಣ ಮಕ್ಕಳ ಜೊತೆ ಪ್ರವಾಸಕ್ಕೆ ತೆರಳಲು ತಯಾರಿ ನಡೆಸಿರುವ ಪೋಷಕರಿಗೆ ಇದು ಅನುಕೂಲವಾಗಲಿದೆ.

## ಬಿಜೆಪಿ ಹೈಕಮಾಂಡ್‌ನಿಂದ ಅಖಾಡದಲ್ಲಿ ಗುಪ್ತ್ ರಿಪೋರ್ಟ್ ಟೀಂ!

ಪ್ರತಿದಿನ ಬಿಜೆಪಿ ರಾಜ್ಯ ಚುನಾವಣಾ ಉಸ್ತುವಾರಿ ರಾಧಾ ಮೋಹನದಾಸ್ ಅಗರವಾಲ್ ಅವರಿಗೆ ಈ ವರದಿಯನ್ನ ನೀಡಲಾಗುತ್ತದೆ. ಈ ವರದಿಯನ್ನು ರಾಧಾ ಮೋಹನ್ ದಾಸ್ ಅವರು ಹೈಕಮಾಂಡ್‌ಗೆ ನೀಡಲಿದ್ದಾರೆ. ವೈಯುಕ್ತಿಕ ದ್ವೇಷ, ಪ್ರತಿಷ್ಟೆಗಳ ಬಡಿದಾಟ ಜಾಸ್ತಿಯದರೆ ಹೈಕಮಾಂಡ್ ನಾಯಕರೇ ನೇರವಾಗಿ ಎಚ್ಚರಿಕೆ ನೀಡಲಿದ್ದಾರೆ.

ಎಲ್ಲೆಲ್ಲಿ ನಿಗಾ?: ಮೈಸೂರು, ಮಂಡ್ಯ, ಬೆಂಗಳೂರು ಗ್ರಾಮಾಂತರ, ಹಾಸನ, ತುಮಕೂರು, ಚಿಕ್ಕಬಳ್ಳಾಪುರ, ಬೆಂಗಳೂರು ಉತ್ತರ, ಕೋಲಾರ, ಚಿತ್ರದುರ್ಗ, ಶಿವಮೊಗ್ಗ, ಹಾವೇರಿ, ದಾವಣಗೆರೆ, ಬೆಳಗಾವಿ, ಕೊಪ್ಪಳ.

# ಕಡ್ಡಾಯ ಮತ್ತು ನೈತಿಕ ಮತದಾನ ಬೆಂಬಲಿಸಿ : ಜಿ.ಪಂ ಸಿ.ಇ.ಓ ಆನಂದ್ ಪ್ರಕಾಶ್ ಮೀನಾ

**ಚಾಮರಾಜನಗರ:** ಲೋಕಸಭಾ ಚುನಾವಣೆ ಮೊದಲ ಹಂತದ ಮತದಾನ ಏಪ್ರಿಲ್ 26 ರಂದು ಜಿಲ್ಲೆಯಲ್ಲಿಯೂ ನಡೆಯಲಿದ್ದು, ಎಲ್ಲರೂ ತಪ್ಪದೇ ಕಡ್ಡಾಯವಾಗಿ ಮತದಾನ ಮಾಡಿ ಹಾಗೂ ನೈತಿಕ ಮತದಾನ ಬೆಂಬಲಿಸಿ ಎಂದು ಮಾದರಿ ನೀತಿ ಸಂಹಿತೆ ನೋಡಲ್ ಅಧಿಕಾರಿ ಹಾಗೂ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಆನಂದ್ ಪ್ರಕಾಶ್ ಮೀನಾ ಅವರು ತಿಳಿಸಿದರು.



ಚಾಮರಾಜನಗರ ಜಿಲ್ಲೆಯ ಗುಂಡ್ಲುಪೇಟೆ ತಾಲೂಕಿನ ಕಣ್ಣೇಗಾಲ ಗ್ರಾಮ ಪಂಚಾಯತಿ ವ್ಯಾಪ್ತಿಯ ಹಿಮವದ್ ವೇಣುಗೋಪಾಲಸ್ವಾಮಿ ದೇವಸ್ಥಾನದ ಮುಂಭಾಗ ಇಂದು ತಾಲ್ಲೂಕ ಆಡಳಿತ, ತಾಲ್ಲೂಕು ಪಂಚಾಯಿತಿ ಮತ್ತು ತಾಲೂಕು ಸ್ವೀಪ್ ಸಮಿತಿಯಿಂದ ಆಯೋಜಿಸಿದ್ದ ಮತದಾನದ ಜಾಗೃತಿ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಪ್ರತಿಯೊಬ್ಬರೂ ಯಾವುದೇ ಆಮಿಷಗಳಿಗೆ ಒಳಗಾಗದೆ ನಿಷ್ಪಕ್ಷಪಾತ ಹಾಗೂ ನಿರ್ಭಯವಾಗಿ ಮತಚಲಾಯಿಸಬೇಕು ಹಾಗೂ ಮತದಾನ ಪ್ರತಿಯೊಬ್ಬರ ಹಕ್ಕಾಗಿದ್ದು, ದೇಶದ ಮುಂದಿನ ಪೀಳಿಗೆಯ ಭವಿಷ್ಯ ರೂಪಿಸುವಲ್ಲಿ ತನ್ನದೇ ಆದ ಮಹತ್ವದ ಪಾತ್ರ ವಹಿಸುತ್ತದೆ ಎಂದರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪದ್ಮಿನಿ ಸಾಹು ಅವರು ಮಾತನಾಡಿ ದೇಶವನ್ನು ನಡೆಸಲು ನಿಮ್ಮ ಒಂದು ಮತ ಬಹಳ ಅಮೂಲ್ಯವಾದದ್ದು, ಮತವನ್ನು ಹಣದ ಆಸೆಗೆ ಮತ ಮಾರಿಕೊಳ್ಳಬೇಡಿ. ನಿಮಗೆ ಮೂಲಸೌಕರ್ಯ ಒದಗಿಸಲು ಅರ್ಹ ವ್ಯಕ್ತಿಯನ್ನು ಆಯ್ಕೆ ಮಾಡಿ ಎಂದರು.

ಈ ಸಂಧರ್ಭದಲ್ಲಿ ಮತದಾನ ಜಾಗೃತಿಯ ಜಿಂಗಲ್ಸ್‌ಗಳ ಮೂಲಕ ಸಾರ್ವಜನಿಕರಲ್ಲಿ ಮತ ಚಲಾವಣೆಯ ಮಹತ್ವದ ತಿಳುವಳಿಕೆ ನೀಡಲಾಯಿತು.

ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ರಾಮಲಿಂಗಯ್ಯ ಅವರು ದೇವಸ್ಥಾನ ಆವರಣದಲ್ಲಿ ಸಾರ್ವಜನಿಕರಿಗೆ ಕಡ್ಡಾಯ ಮತದಾನದ ಪ್ರತಿಜ್ಞಾ ವಿಧಿ ಭೋದಿಸಿದರು.

ತಹಶೀಲ್ದಾರ್ ಮಂಜುನಾಥ, ಮಲೆಮಹದೇಶ್ವರ ವನ್ಯಜೀವಿ ವಿಭಾಗದ ಹುಲಿ ಯೋಜನೆ ಉಪ ಅರಣ್ಯ ಸಂರಕ್ಷಣಾಧಿಕಾರಿ ಸಂತೋಷ್ ಕುಮಾರ್, ಬಂಡೀಪುರ ಹುಲಿಯೋಜನೆ ನಿರ್ದೇಶಕರಾದ ಪ್ರಭಾಕರನ್, ತಾಲ್ಲೂಕು ವ್ಯಾಪ್ತಿಯ ಎಲ್ಲಾ ಪಂಚಾಯಿತಿ ಅಭಿವೃದ್ದಿ ಅಧಿಕಾರಿಗಳು, ಕಾರ್ಯದರ್ಶಿಗಳು, ಇತರರು ಇದ್ದರು.

## ಪ್ರಜಾಪ್ರಭುತ್ವ ಬಲಿಷ್ಠತೆಗೆ ಎಲ್ಲರೂ ತಪ್ಪದೆ ಮತದಾನ ಮಾಡಿ : ಸೆಲ್ವರಾಜ್

**ಚಾಮರಾಜನಗರ:** ಭಾರತವು ಬೃಹತ್ ಪ್ರಜಾಪ್ರಭುತ್ವ ದೇಶವಾಗಿದ್ದು, ಮತದಾನ ದೇಶದ ಭದ್ರ ಬುನಾದಿಗೆ ಅಡಿಪಾಯವಾಗುತ್ತದೆ. ಪ್ರಜಾಪ್ರಭುತ್ವದ ಬಲಿಷ್ಠತೆಗೆ ಎಲ್ಲರೂ ತಪ್ಪದೇ ಮತದಾನ ಮಾಡಿ ಎಂದು ಹನೂರು ತಾಲೂಕಿನ ದೊಡ್ಡಾಲತ್ತೂರು ಗ್ರಾಮ ಪಂಚಾಯತಿ ಅಭಿವೃದ್ಧಿ ಅಧಿಕಾರಿ ಸೆಲ್ವರಾಜ್ ಅವರು ಹೇಳಿದರು.

ದೊಡ್ಡಾಲತ್ತೂರು ಗ್ರಾಮ ಪಂಚಾಯತಿ ಕಚೇರಿಯಲ್ಲಿ ಇಂದು ಜಿಲ್ಲಾ ಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಸ್ವೀಪ್ ಸಮಿತಿ ಹಾಗೂ ಹನೂರು ತಾಲೂಕು ಸ್ವೀಪ್ ಸಮಿತಿಯಿಂದ ಆಯೋಜಿಸಿದ್ದ ಮತದಾನ ಜಾಗೃತಿ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು. ಚಾಮರಾಜನಗರ ಲೋಕಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಏಪ್ರಿಲ್ 26ರಂದು ಮತದಾನ ನಡೆಯಲಿದೆ. ಅಂದು ಅರ್ಹರೆಲ್ಲರೂ ಕಡ್ಡಾಯವಾಗಿ ಮತಚಲಾಯಿಸುವ ಮೂಲಕ ನಿಮಗೆ ನೆರವಾಗುವ ವ್ಯಕ್ತಿಯನ್ನು ಆಯ್ಕೆ ಮಾಡಬೇಕು. ಯಾವುದೇ ಆಮಿ?ಗಳಿಗೆ ಒಳಗಾಗದೆ ನಿ?ಕ್ಷಪಾತವಾಗಿ ಮತಚಲಾಯಿಸಬೇಕು. ಮತದಾನ ನಿಮ್ಮ ಮುಂದಿನ ಪೀಳಿಗೆಯ ಭವಿ?ಯ ರೂಪಿಸುವಲ್ಲಿ ಪ್ರಮುಖ ಪಾತ್ರ ವಹಿಸುತ್ತದೆ ಎಂದರು.

ಕೆಂಪಯ್ಯನಹಟ್ಟಿ ಗ್ರಾಮದ ಶಾಲೆಯ ಮಕ್ಕಳು ಕಡ್ಡಾಯವಾಗಿ ಮತದಾನ ಮಾಡುವಂತೆ ಅವರ ತಂದೆ ತಾಯಿಗಳಿಗೆ ಮತದಾನದ ಮಮತೆಯ ಕರೆಯೋಲೆ ಪತ್ರ ಗಮನ ಸೆಳೆಯಿತು. ಇದೇ ಸಂಧರ್ಭದಲ್ಲಿ ಮತದಾನ ಜಾಗೃತಿಯ ಬಗ್ಗೆ ವಿಡಿಯೋ ಮತ್ತು ಜಿಂಗಲ್ಸ್‌ಗಳ ಮೂಲಕ ಸಾರ್ವಜನಿಕರಿಗೆ ಮತ ಚಲಾವಣೆಯ ಮಹತ್ವದ ತಿಳುವಳಿಕೆ ನೀಡಲಾಯಿತು. ಈ ಸಂಧರ್ಭದಲ್ಲಿ ಗ್ರಾಮ ಪಂಚಾಯತಿಯ ಆನಂದ, ಕುಮಾರ, ಬಿ.ಎಫ್.ಟಿ ಕೃಷ್ಣಸ್ವಾಮಿ ಶಾಲಾ ಶಿಕ್ಷಕರು, ಮಹಿಳಾ ಸ್ವಸಹಾಯ ಸಂಘದ ಸದಸ್ಯರು ಹಾಜರಿದ್ದರು.




## ಪ್ರತಿಯೊಬ್ಬರೂ ಕಡ್ಡಾಯವಾಗಿ ಮತದಾನ ಮಾಡಿ: ನಗರಸಭೆ ಪೌರಾಯುಕ್ತ ರಾಮದಾಸ್

**ಚಾಮರಾಜನಗರ:** ಲೋಕಸಭಾ ಚುನಾವಣೆಯಲ್ಲಿ ಪ್ರತಿಯೊಬ್ಬರು ತಪ್ಪದೇ ಕಡ್ಡಾಯವಾಗಿ ಮತದಾನ ಮಾಡುವ ಮೂಲಕ ತಮ್ಮ ಹಕ್ಕನ್ನು ಚಲಾಯಿಸಿ ಎಂದು ನಗರಸಭೆ ಪೌರಾಯುಕ್ತ ರಾಮದಾಸ್ ಅವರು ಸಾರ್ವಜನಿಕರಿಗೆ ತಿಳಿಸಿದರು.

ನಗರದ ಕೆಎಸ್‌ಆರ್‌ಟಿಸಿ ಬಸ್ ನಿಲ್ದಾಣದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ನಗರಸಭೆ, ಮತ್ತು ಜಿಲ್ಲಾ ಸ್ವೀಪ್ ಸಮಿತಿ ವತಿಯಿಂದ ಆಯೋಜಿಸಲಾಗಿದ್ದ ಮತದಾನ ಜಾಗೃತಿ, ಅರಿವು ಕಾರ್ಯಕ್ರಮದಲ್ಲಿ



ನಗರಸಭೆ ಪೌರಾಯುಕ್ತ ರಾಮದಾಸ್ ಮಾತನಾಡಿ,

ಕರ್ನಾಟಕ ರಾಜ್ಯದಲ್ಲಿ ಎರಡು ಹಂತದಲ್ಲಿ ಮತದಾನ ನಡೆಯಲಿದೆ. ಏಪ್ರಿಲ್ 26ಕ್ಕೆ ಮೊದಲ ಹಂತ, ಮೇ 7ಕ್ಕೆ 2ನೇ ಹಂತದ ಮತದಾನ ನಡೆಯಲಿದ್ದು, ಪ್ರತಿಯೊಬ್ಬರೂ ಕೂಡಾ ತಮ್ಮ ಮತದಾನದ ಹಕ್ಕನ್ನು ಚಲಾಯಿಸಬೇಕು ಎಂದು ಅರಿವು ಮೂಡಿಸಿದರು.

ಚುನಾವಣಾ ಪರ್ವ ದೇಶದ ಗರ್ವ ಎಂಬ ಘೋಷವಾಕ್ಯದ ಮೂಲಕ ಕಾರ್ಯಕ್ರಮವನ್ನು ಆಯೋಜಿಸಲಾಗಿದ್ದು, ಮತದಾನದ ಹಬ್ಬ ಇದೇ ತಿಂಗಳು 26ರಂದು ನಡೆಯಲಿದೆ. ಎಲ್ಲರೂ ಕೂಡಾ ತಪ್ಪದೇ ತಮ್ಮ ಬೂತ್‌ಗಳಲ್ಲಿ ಮತವನ್ನು ಚಲಾಯಿಸುವ ಮೂಲಕ ತಮ್ಮ ಜನಪ್ರತಿನಿಧಿಗಳನ್ನು ತಾವೇ ಆಯ್ಕೆಮಾಡಿಕೊಳ್ಳಬೇಕು ಎಂದು ತಿಳಿಸಿದರು.

ಯೋಜನಾಧಿಕಾರಿ ವೆಂಕಟನಾಯಕ್ ಮಾತನಾಡಿ, ಸಂವಿಧಾನದಲ್ಲಿ ಪ್ರತಿಯೊಬ್ಬರಿಗೂ ಕೂಡಾ ಮತದಾನ ನೀಡುವ ಸಮಾನ ಹಕ್ಕನ್ನು ಕೊಟ್ಟಿದೆ. ಸಾಕಷ್ಟು ಮಂದಿ ಚುನಾವಣೆ ಸಂದರ್ಭದಲ್ಲಿ ಮತದಾನದ ದಿನದಂದು ತಮ್ಮ ಹಕ್ಕನ್ನು ಚಲಾಯಿಸದೆ, ಮನೆಯಲ್ಲೆ ಉಳಿದುಕೊಳ್ಳುತ್ತಿದ್ದಾರೆ. ಚುನಾವಣಾ ಆಯೋಗ ಸಂವಿಧಾನದ ಮೂಲಕ ನೀಡಿರುವ ಮತದಾನದ ಹಕ್ಕನ್ನು ಯಾರೂ ಕೂಡಾ ಕಳೆದುಕೊಳ್ಳಬಾರದು. ಎಲ್ಲರೂ ಕೂಡಾ ತಪ್ಪದೇ ಮತದಾನ ಮಾಡುವ ಮೂಲಕ ತಮ್ಮ ಹಕ್ಕನ್ನು ಚಲಾಯಿಸಬೇಕು ಎಂದು ಮನವಿ ಮಾಡಿದರು. ಈ ಸಂದರ್ಭದಲ್ಲಿ ಪ್ರಯಾಣಿಕರಾದ ಜಗದಾಂಬ ಹಾಗೂ ಮೊದಲ ಬಾರಿಗೆ ಚುನಾವಣೆ ಹಕ್ಕನ್ನು ಚಲಾಯಿಸಲಿರುವ ವಿದ್ಯಾರ್ಥಿ ಲಕ್ಷ್ಮಿ ಹಾಗೂ ಅವರು ಮತದಾನದ ಬಗ್ಗೆ ತಮ್ಮ ಅನಿಸಿಕೆ ಅಭಿಪ್ರಾಯಗಳನ್ನು ಹಂಚಿಕೊಂಡರು. ಈ ಸಂದರ್ಭದಲ್ಲಿ ತಾಲೂಕು ಪಂಚಾಯಿತಿ ಇ ಓ ಕೃಷ್ಣಪ್ಪ, ಜಿಲ್ಲಾ ನಗರಾಭಿವೃದ್ಧಿ ಕೋಶ ಯೋಜನಾ ನಿರ್ದೇಶಕರಾದ ರಾಮಚಂದ್ರು, ಪರಿಸರ ವಿಭಾಗದ ಕಾರ್ಯಪಾಲಕ ಅಭಿಯಂತರರಾದ ಗಿರಿಜಮ್ಮ, ನಗರಸಭಾ ಸಿಬ್ಬಂದಿಗಳಾದ ಜ್ಯೋತಿ, ರೂಪಾ, ನವೀನ್, ಸುರೇಶ್, ಶ್ರೀನಿವಾಸ್, ಸುಗುಣ, ನಿವೇದಿತಾ ಸೇರಿದಂತೆ ಸಾರ್ವಜನಿಕರು, ಪ್ರಯಾಣಿಕರು ಇದ್ದರು.

# ಗೋಪೂಜೆ ಮೆರುಗು, ಸುಮಂಗಲಿಯರಿಂದ ಆರತಿ ಬೆಳಗಿ ಶುಭ ಹಾರೈಕೆ

**ಕೋಲಾರ:** ಬಿಜೆಪಿ-ಜೆಡಿಎಸ್ ಮೈತ್ರಿಕೂಟದ ಅಭ್ಯರ್ಥಿ ಮಲ್ಲೇಶ್ ಬಾಬು ಅವರು ಗೋಪೂಜೆ ಮಾಡಿದ ನಂತರ ನಾಮಪತ್ರ ಸಲ್ಲಿಸಿದರು.

ಸಂಸದ ಎಸ್.ಮುನಿಸ್ವಾಮಿ, ದಳಪತಿ ಜಿ.ಟಿ.ದೇವೇಗೌಡ, ಶಾಸಕ ಅರವಿಂದ ನಿಂಬಾವಳಿ, ಶಾಸಕ ಸಮೃದ್ಧಿ ಮಂಜುನಾಥ್, ಜೆಡಿಎಸ್ ಮುಖಂಡ ಸಿಎಂಆರ್ ಶ್ರೀನಾಥ್, ಶಬರೀಶ್ ಯಾದವ್, ನರಸಾಪುರ ಪೆಟ್ರೋಲ್ ಬಂಕ್ ಮಂಜುನಾಥ್, ಜಿಪಂ ಮಾಜಿ ಸದಸ್ಯೆ ರೂಪಶ್ರೀ ಮಂಜುನಾಥ್,ಟಿಎಪಿಸಿಎಂಎಸ್ ಅಧ್ಯಕ್ಷ ವಡಗೂರು ರಾಮು ಹಾಜರಿದ್ದರು.

ಈ ಸಂದರ್ಭದಲ್ಲಿ ಮಾತನಾಡಿದ ಅಭ್ಯರ್ಥಿ ಮಲ್ಲೇಶ್ ಬಾಬು, ಗೋಪೂಜೆ ಹಿಂದೂ ಧರ್ಮದ ಪಾರಂಪರಿಕ ಪೂಜೆಯಾಗಿದ್ದು ಗೋನಲ್ಲಿ 10 ಸಾವಿರ ದೇವತೆಗಳು ಇರುತ್ತಾರೆಂಬ ಪ್ರತೀತಿ ಇದೆ. ಹೀಗಾಗಿ ಗೋಪೂಜೆ ಮೂಲಕ ನಾಮಪತ್ರ ಸಲ್ಲಿಕೆಗೆ ಚಾಲನೆ ನೀಡಲಾಗುತ್ತಿದೆ ಎಂದರು. ಕೋಲಾರ ಲೋಕಸಭಾ ಕ್ಷೇತ್ರದಲ್ಲಿ ಬಿಜೆಪಿ-ಜೆಡಿಎಸ್ ಮೈತ್ರಿಕೂಟದ ಪರವಾದ ಅಲೆಯಿದ್ದು ಚುನಾವಣೆಯಲ್ಲಿ ಜಯಭೇರಿ ಸಾಧಿಸುವ ವಿಶ್ವಾಸವಿದೆ. ಎರಡು ಬಾರಿ ಸೋತಿರುವ ನನ್ನ ಮೇಲೆ ಅನುಕಂಪವಿದ್ದು ಮತದಾರರು ಈ ಬಾರಿ ಗೆಲ್ಲಿಸಲಿದ್ದಾರೆಂದು ನುಡಿದರು.

ಜೆಡಿಎಸ್ ಮುಖಂಡ ಶಬರೀಶ್ ಯಾದವ್ ಮಾತನಾಡಿ, ಮೈತ್ರಿಯಿಂದಾಗಿ ಮತಗಳ ಸಮೀಕರಣವಾಗುವ ಮೂಲಕ ಮಲ್ಲೇಶ್ ಬಾಬು ಗೆಲ್ಲಲಿದ್ದು ಪ್ರಧಾನಿ ಮೋದಿ ಅವರ ಅಭಿವೃದ್ಧಿ ಮಂತ್ರ ಹಾಗೂ ಸಂಸದ ಮುನಿಸ್ವಾಮಿ ಅವರ 5 ವರ್ಷದ ಸಾಧನೆ ಮೈತ್ರಿಕೂಟದ ಕೈ ಹಿಡಿಯಲಿದೆ. ಮೋದಿ ಅಕ್ಕಿ,ಬೇಳೆ, ಕಡಲೆಬೇಳೆ, ಕಡಲೇಕಾಯಿ ಎಣ್ಣೆ ಬಡವರ ಬದುಕನ್ನು ಹಸನು ಮಾಡಿದ್ದು ಎಲ್ಲ ಶೋಷಿತರು ಮೈತ್ರಿಕೂಟದ ಪರವಾಗಿ ಮತ ಹಾಕಲಿದ್ದಾರೆ ಎಂದು ನುಡಿದರು. ನಗರಸಭೆ ಮಾಜಿ ಅಧ್ಯಕ್ಷೆ ಶ್ವೇತಾ ತಂಡದವರು ಅಭ್ಯರ್ಥಿ ಮಲ್ಲೇಶ್ ಬಾಬು ಅವರಿಗೆ ಆರತಿ ಬೆಳಗಿ ನಾಮಪತ್ರ ಸಲ್ಲಿಕೆಗೆ ಶುಭ ಹಾರೈಸಿದರು.



ಫೋಟೋ ಕ್ಯಾಪ್ಷನ್: ಮೈತ್ರಿಕೂಟದ ಅಭ್ಯರ್ಥಿ ಮಲ್ಲೇಶ್ ಬಾಬು ಗೋಪೂಜೆ ಮಾಡಿ ನಾಮಪತ್ರ ಸಲ್ಲಿಸಿದರು

**ಮೈತ್ರಿ ಅಭ್ಯರ್ಥಿಯಾಗಿ ಎಂ.ಮಲ್ಲೇಶ್ ಬಾಬು ನಾಮಪತ್ರ ಸಲ್ಲಿಕೆ:** ಬಿಜೆಪಿ-ಜೆಡಿಎಸ್ ನಾಯಕರು ಇಂದು ಕೋಲಾರ ನಗರದಲ್ಲಿ ಬೃಹತ್ ಮೆರವಣಿಗೆ ನಡೆಸಿ ಶಕ್ತಿ ಪ್ರದರ್ಶನ ನಡೆಸಿ ಮೈತ್ರಿ ಅಭ್ಯರ್ಥಿಯಾಗಿ ಎಂ.ಮಲ್ಲೇಶ್ ಬಾಬು ನಾಮಪತ್ರ ಸಲ್ಲಿಸಿದರು.

ನಗರದ ಬಂಗಾರಪೇಟೆ ವೃತ್ತದಲ್ಲಿರುವ ಅಂಬೇಡ್ಕರ್ ಪುತ್ಥಳಿಗೆ ಪುಷ್ಪಾರ್ಚನೆ ಮಾಡಿದ ಮೈತ್ರಿ ನಾಯಕರು ಸಾವಿರಾರು ಬಿಜೆಪಿ ಮತ್ತು ಜೆಡಿಎಸ್ ಕಾರ್ಯಕರ್ತರ ಸಮ್ಮುಖದಲ್ಲಿ ಬಂಗಾರಪೇಟೆ ವೃತ್ತದಿಂದ ಮೆಕ್ಕೆ ವೃತ್ತದವರೆಗೂ ರಾಜ್ಯ ನಾಯಕರು ಮತ್ತು ಜಿಲ್ಲಾ ನಾಯಕರು ತೆರೆದ ವಾಹನದಲ್ಲಿ ಮೆರವಣಿಗೆ ನಡೆಸಿ ರಾಜ್ಯ ಸರ್ಕಾರದ ವಿರುದ್ದ ತೀವ್ರ ಹರಿಹಾಯ್ದರು. ಜೆಡಿಎಸ್ ನ ಕೋರ್ ಕಮಿಟಿ ಅಧ್ಯಕ್ಷ ಜಿ.ಟಿ ದೇವೇಗೌಡ ಮಾತನಾಡಿ ಸದೃಢ ಭಾರತ ಕಟ್ಟಲು ಪ್ರಧಾನ ಮಂತ್ರಿ ನರೇಂದ್ರ ಮೋದಿಯವರು ಹಗಲಿರುಳು ಶ್ರಮಿಸುತ್ತಿದ್ದಾರೆ ಅಂತಹ ಪ್ರಧಾನ ಮಂತ್ರಿಯವರನ್ನು ಕೇವಲ ದೇಶ ಮಾತ್ರವಲ್ಲದೆ ವಿಶ್ವದ ಎಲ್ಲಾ ನಾಯಕರು ಗೌರವದಿಂದ ಕಾಣುತ್ತಾರೆ ಆದರೆ ನಮ್ಮ ಮುಖ್ಯಮಂತ್ರಿ ಸಿದ್ದರಾಮಯ್ಯ ಪ್ರಧಾನಮಂತ್ರಿ ನರೇಂದ್ರ ಮೋದಿಯವರನ್ನು ಏಕವಚನದಲ್ಲಿ ಮಾತನಾಡುತ್ತಾರೆ, ರಾಜ್ಯದ ಖಜಾನೆಯನ್ನು ಲೂಟಿ ಹೊಡೆಯಲು ಕಾಂಗ್ರೆಸ್ ನಾಯಕರು ಶಪಥ ಮಾಡಿದ್ದಾರೆ, ರಾಜ್ಯದಲ್ಲಿ ಯಾವುದೇ ಅಭಿವೃದ್ಧಿ ಕಾರ್ಯಗಳು ನಡೆಯುತ್ತಿಲ್ಲ, ರಾಜ್ಯದ ಜನರಿಗೆ ಕುಡಿಯುವ ನೀರನ್ನು ಒದಗಿಸುವಲ್ಲಿಯೂ ರಾಜ್ಯ ಸರ್ಕಾರ ವಿಫಲವಾಗಿದೆ, ಜೆಡಿಎಸ್ ಪಕ್ಷ ಎಲ್ಲಿದೆ ಅಂತ ಲೇವಡಿ ಮಾಡುವ ಕಾಂಗ್ರೆಸ್ ಪಕ್ಷದ ಬಹುತೇಕ ನಾಯಕರು ಜೆಡಿಎಸ್ ಪಕ್ಷದಲ್ಲಿ ಜನ್ಮ ಪಡೆದು ಜೆಡಿಎಸ್ ಪಕ್ಷದಲ್ಲಿಯೇ ಬೆಳೆದು ಇದೀಗ ಕಾಂಗ್ರೆಸ್ ಪಕ್ಷದಲ್ಲಿ ಸೇರಿಕೊಂಡಿದ್ದಾರೆ ಅಂತಹ ನಾಯಕರೆಲ್ಲಾ ಜೆಡಿಎಸ್ ಪಕ್ಷದ ಅಸ್ತಿತ್ವದ ಬಗ್ಗೆ ಮಾತನಾಡುತ್ತಾರೆ ಎಂದು ಕಾಂಗ್ರೆಸ್ ಸರ್ಕಾರದ ವಿರುದ್ದ ಹರಿಹಾಯ್ದರು.ಮಾಜಿ ಸಚಿವ ಅರವಿಂದ ಲಿಂಬಾವಳಿ ಮಾತನಾಡಿ ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದಿದ್ದೇ ರಾಜ್ಯಕ್ಕೆ ಭೀಕರ ಬರ ಆವರಿಸಿತು, ರಾಜ್ಯದಲ್ಲಿರುವ ಬರ ಪರಿಸ್ಥಿತಿಯನ್ನು ಸಮರ್ಪಕವಾಗಿ ನಿಭಾಯಿಸಲು ಆಗದ ಕಾಂಗ್ರೆಸ್ ಸರ್ಕಾರ ರಾಜ್ಯದಲ್ಲಿ ಅಧಿಕಾರದಲ್ಲಿರಲು ನೈತಿಕತೆ ಇಲ್ಲ, ಲೋಕಸಭಾ ಚುನಾವಣೆಯಲ್ಲಿ ರಾಜ್ಯದಲ್ಲಿ ಕಾಂಗ್ರೆಸ್ ಪಕ್ಷಕ್ಕೆ ಜನ ತಕ್ಕ ಪಾಠ ಕಲಿಸ್ತಾರೆ ಆಗ ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಅದಷ್ಟಕ್ಕೇ ಅದೇ ಪತನವಾಗುತ್ತದೆ ಎಂದು ಭವಿಷ್ಯ ನುಡಿದರು.

ಸಂಸದ ಎಸ್.ಮುನಿಸ್ವಾಮಿ ಮಾತನಾಡಿ, ಕೋಲಾರ ಜಿಲ್ಲೆಗೆ ನೀರಾವರಿ ಯೋಜನೆಗಳಿಗೆ ಅನುದಾನಗಳು ಕೊಟ್ಟಿದ್ದು ಜೆಡಿಎಸ್ ಮತ್ತು ಬಿಜೆಪಿ ಪಕ್ಷಗಳು, ಜಿಲ್ಲೆಗೆ ಮೊದಲ ನೀರಾವರಿ ಯೋಜನೆ ಯರಗೋಳ್ ಯೋಜನೆಗೆ ಕುಮಾರಸ್ವಾಮಿಯವರು ಅನುದಾನ ಕೊಟ್ಟರೆ ಎತ್ತಿನಹೊಳೆ ಯೋಜನೆಗೆ ಸದಾನಂದಗೌಡರು ಅನುದಾನಗಳು ಕೊಟ್ಟರು, ಆದರೆ ಕಾಂಗ್ರೆಸ್ ನವರು ಎಲ್ಲವನ್ನೂ ನಾವೇ ಮಾಡಿದ್ದು ಅಂತ ತಮ್ಮ ಭುಜ ತಾವೇ ತಟ್ಟಿಕೊಳ್ಳುತ್ತಿದ್ದಾರೆ...ಆದ್ದರಿಂದ ಜಿಲ್ಲೆಯ ಜನ ಬಿಜೆಪಿ ಬೆಂಬಲಿತ ಜೆಡಿಎಸ್ ಅಭ್ಯರ್ಥಿಗೆ ಮತ ನೀಡುವ ಮೂಲಕ ನರೇಂದ್ರ ಮೋದಿಯವರನ್ನು ಮತ್ತೊಮ್ಮೆ ಪ್ರಧಾನಿ ಮಾಡಲು ಪಣ ತೊಡಬೇಕು ಎಂದು ಮನವಿ ಮಾಡಿದರು ಬೃಹತ್ ಮೆರವಣಿಗೆಯಲ್ಲಿ ಶಾಸಕರಾದ ಜಿ.ಕೆ ವೆಂಕಟಶಿವಾರೆಡ್ಡಿ, ಸಮೃದ್ದಿ ಮಂಜುನಾಥ್, ಎಂ.ರವಿಕುಮಾರ್, ಮಾಜಿ ಶಾಸಕರಾದ ಜೆ.ಕೆ ಕೃಷ್ಣಾರೆಡ್ಡಿ, ವರ್ತೂರು ಆರ್.ಪ್ರಕಾಶ್ ಇದ್ದರು.

# ಕಾಂಗ್ರೆಸ್ ಅಭ್ಯರ್ಥಿ ಗೌತಮ್ ಪರವಾಗಿ ಡಿಸಿಎಂ ಶಿವಕುಮಾರ್ ರೋಡ್ ಶೋ

**ಕೋಲಾರ:** ಲೋಕಸಭಾ ಮೀಸಲು ಕ್ಷೇತ್ರದಲ್ಲಿ ಕಾಂಗ್ರೆಸ್ ಅಭ್ಯರ್ಥಿ ಗುರುವಾರ ಕೆ.ವಿ.ಗೌತಮ್ ನಾಮಪತ್ರ ಸಲ್ಲಿಕೆ ಬಳಿಕ ಉಪಮುಖ್ಯಮಂತ್ರಿ ಹಾಗೂ ಕೆಪಿಸಿಸಿ ಅಧ್ಯಕ್ಷ ಡಿ.ಕೆ.ಶಿವಕುಮಾರ್ ನೇತೃತ್ವದಲ್ಲಿ ನಗರದಲ್ಲಿ ರೋಡ್ ಶೋ ನಡೆಸಿದರು

ಈ ಸಂದರ್ಭದಲ್ಲಿ ಅವರೊಂದಿಗೆ ಅಭ್ಯರ್ಥಿ, ಸಚಿವರು, ಶಾಸಕರು, ಮುಖಂಡರು ಜೊತೆ ಡಿ.ಕೆ.ಶಿವಕುಮಾರ್ ನಗರದ ಬಂಗಾರಪೇಟೆ ವೃತ್ತದಲ್ಲಿ ಅಂಬೇಡ್ಕರ್ ಪ್ರತಿಮೆಗೆ ಮಾಲಾರ್ಪಣೆ ಮಾಡಿ ನಂತರ ತೆರೆದ ವಾಹನದಲ್ಲಿ ಮುಖಂಡರು ಕೆ.ವಿ.ಗೌತಮ್ ಅವರಿಗೆ ಮತಯಾಚಿಸಿದರು. ಸಾವಿರಾರು ಕಾರ್ಯಕರ್ತರು ಬೃಹತ್ ಮೆರವಣಿಗೆಯಲ್ಲಿ ಭಾಗವಹಿಸಿದ್ದರು.

ಬಂಗಾರಪೇಟೆ ವೃತ್ತದಿಂದ ಎಸ್ಎನ್ಆರ್ ಜಿಲ್ಲಾಸ್ಪತ್ರೆ ಮಾರ್ಗವಾಗಿ ಗಾಂಧಿವನಕ್ಕೆ ವಾಹನ ಸಾಗಿತು. ಗಾಂಧಿ ಪ್ರತಿಮೆಗೆ ಮಾಲಾರ್ಪಣೆ ಮಾಡಿದ ಡಿ.ಕೆ.ಶಿವಕುಮಾರ್ ಕಾರ್ಯಕರ್ತರು ಹಾಗೂ ಸಾರ್ವಜನಿಕರನ್ನು ಉದ್ದೇಶಿಸಿ ಮಾತನಾಡಿ ಕೋಲಾರ ಜಿಲ್ಲೆಯ ಜನರು ಒಂದು ಕಾಲದಲ್ಲಿ ಚಿನ್ನ ಕೊಟ್ಟಿದ್ದೀರಿ. ಈಗ ತರಕಾರಿ, ಹಾಲು ಕೊಡುತ್ತಿದ್ದೀರಿ. ಈ ಬಾರಿ ನನ್ನ ಮನವಿ ಎಂದರೆ ನಮ್ಮ ಹೊಸ ಅಭ್ಯರ್ಥಿಯನ್ನು ಸಂಸದರನ್ನಾಗಿ ಆಯ್ಕೆ ಮಾಡಿ. ನಾನು ಹಾಗೂ ಮುಖ್ಯಮಂತ್ರಿ, ಕೆ.ಎಚ್.ಮುನಿಯಪ್ಪ, ಜಿಲ್ಲೆಯ ಶಾಸಕರೊಂದಿಗೆ ಮಾತನಾಡಿ ಗೌತಮ್ ಅವರನ್ನು ಕಣಕ್ಕಿಳಿಸಿದ್ದೇವೆ ಎಂದರು. ರಾಜ್ಯದ ಐದು ಪರಿಶಿಷ್ಟ ಜಾತಿ ಕ್ಷೇತ್ರಗಳಲ್ಲಿ ಮೂವರು ಬಲಗೈ ಅಭ್ಯರ್ಥಿಗಳನ್ನು ಹಾಗೂ ಇಬ್ಬರು ಎಡಗೈ ಅಭ್ಯರ್ಥಿಗಳನ್ನು ಕಣಕ್ಕಿಳಿಸಿದ್ದೇವೆ. ಈ ಮೂಲಕ ಸಾಮಾಜಿಕ ನ್ಯಾಯದ ಸಮತೋಲನ ಕಾಯ್ದುಕೊಂಡಿದ್ದೇವೆ ಸಂವಿಧಾನ, ಪ್ರಜಾಪ್ರಭುತ್ವ ಉಳಿಸಲು ಹಾಗೂ ಸರ್ವಾಧಿಕಾರ ತೊಲಗಿಸಲು ಕಾಂಗ್ರೆಸ್ ಪಕ್ಷಕ್ಕೆ ವೋಟು ಹಾಕಿ ಎಂದು ಮನವಿ ಮಾಡಿದರು.

ನಾನು ಮಾಲೂರಿಗೆ ಬಂದು ತರಕಾರಿ ಖರೀದಿಸಿ ರೈತರಿಗೆ ನೆರವಾದೆ. ಕೋವಿಡ್‌ನಿಂದ ಮೃತರಾದ ಬಿಜೆಪಿ ಸಂಸದರಾಗಿದ್ದ ಸುರೇಶ್ ಅಂಗಡಿ ಹೆಣವನ್ನು ದೆಹಲಿಯಿಂದ ತರಲೂ ಸಾಧ್ಯವಾಗಲಿಲ್ಲ. ನನ್ನ ತಮ್ಮ ಡಿ.ಕೆ.ಸುರೇಶ್ ತನ್ನ ಜೀವ ಲೆಕ್ಕಿಸದೆ ಕೋವಿಡ್‌ನಿಂದ ಮೃತರಾದವರನ್ನು ಹೊತ್ತುಕೊಂಡು ಹೋಗಿ ಅಂತ್ಯಕ್ರಿಯೆ ನಡೆಸಲು ನೆರವಾದ ಎಂದರು.

ವಿಧಾನಸಭೆ ಚುನಾವಣೆಯಲ್ಲಿ ವೇಳೆ ನೀಡಿದ್ದ ಗ್ಯಾರಂಟಿ ಯೋಜನೆಗಳ ಭರವಸೆಯನ್ನು ನಾವು ಪೂರೈಸಿದ್ದೇವೆ. ಈ ಭಾಗದ ಜನರಿಗೆ ಕುಡಿಯುವ ನೀರು ಪೂರೈಸಲು ಎತ್ತಿನಹೊಳೆ ಯೋಜನೆ ಜಾರಿ ಮಾಡುತ್ತಿದ್ದೇವೆ. ಈಗಾಗಲೇ 15 ಸಾವಿರ ಕೋಟಿ ಖರ್ಚಾಗಿದೆ. ಕೆ.ಸಿ.ವ್ಯಾಲಿ ಮೂಲಕ ಅಂತರ್ಜಲ ಹೆಚ್ಚಿಸುವ ಕೆಲಸ ಮಾಡಿದ್ದೇವೆ. ಬಿಜೆಪಿಯಿಂದ ಏನಾದರೂ ಲಾಭವಾಗಿದೆಯೇ ತಮ್ಮ ಆದಾಯ ದ್ವಿಗುಣಗೊಂಡಿದೆಯಾ ನಿಮ್ಮ ಖಾತೆಗೆ ಹಣ ಬಂತಾ ಮೋದಿ ಗಾಳಿ ಇದೆಯಾ' ಎಂದು ಅವರು ಪ್ರಶ್ನಿಸಿದರು. 'ಕೋಲಾರದಲ್ಲಿ ತಮ್ಮ ಅಭ್ಯರ್ಥಿ ಗೌತಮ್ ಅಲ್ಲ. ಸಿದ್ದರಾಮಯ್ಯ, ನಾನು, ಖರ್ಗೆ ಅಭ್ಯರ್ಥಿ ಎಂದು ಭಾವಿಸಿ. ಇಲ್ಲಿನ ಜನರ ಸ್ವಾಭಿಮಾನವನ್ನು ಉಳಿಸಬೇಕು ಎಂದರು. ಶಾಸಕ ಕೊತ್ತೂರು ಮಂಜುನಾಥ್ ಮಾತನಾಡಿ ನಾವೆಲ್ಲಾ ಸೇರಿ ಗೌತಮ್ ಅವರನ್ನು ಗೆಲ್ಲಿಸಲು ಶಪಥ ಮಾಡಿದ್ದೇವೆ. ಬಿಸಿಲು ಇದ್ದರೂ ಜನ ಬಹಳ ಸಂಖ್ಯೆಯಲ್ಲಿ ಬಂದಿದ್ದಾರೆ. ಆದರೆ, ಮುಂದಿನ ದಿನಗಳಲ್ಲಿ ನಾವೇ ನಿಮ್ಮ ಮನೆ ಬಾಗಿಲಿಗೆ ಬರುತ್ತೇವೆ' ಎಂದು ಹೇಳಿದರು. ಶಾಸಕ ಎಸ್.ಎನ್.ನಾರಾಯಣಸ್ವಾಮಿ ಮಾತನಾಡಿ, 'ಮಲ್ಲೇಶ್ ಬಾಬು ವಿರುದ್ಧ ಬಂಗಾರಪೇಟೆ ವಿಧಾನಸಭೆ ಕ್ಷೇತ್ರದಲ್ಲಿ ನಾನು ಎರಡು ಬಾರಿ ಗೆದ್ದಿದ್ದೇನೆ. ನೀವೆಲ್ಲಾ ಸೇರಿ ಮೂರನೇ ಬಾರಿ ಸೋಲಿಸಿ. ಶ್ರೀಮಂತ ಮಲ್ಲೇಶ್ ಬಾಬು ಬೇಕೋ, ಬಡವ ಗೌತಮ್ ಬೇಕೋ ನಿರ್ಧರಿಸಿ ಕ್ಷೇತ್ರದಲ್ಲಿ ಬಲಗೈ ಸಮುದಾಯದ ಮತಗಳು ಹೆಚ್ಚು ಇದೆ. ಹೀಗಾಗಿಯೇ, ಅಭ್ಯರ್ಥಿ ಕೊಡಿ ಎಂದು ಕೋರಿದ್ದೆವು. ಆದರೆ, ಸಾಮಾಜಿಕ ನ್ಯಾಯದ ಪ್ರಕಾರ ಈಗ ಟಿಕೆಟ್ ಹಂಚಲಾಗಿದೆ ಎಂದರು. ಶಾಸಕ ಕೆ.ವೈ.ನಂಜೇಗೌಡ ಮಾತನಾಡಿ, ಕಳೆದ ಬಾರಿ ನಾವು ಜೆಡಿಎಸ್ ಜೊತೆ ಸೇರಿ ಯಾಮಾರಿದೆವು. ಕೇವಲ 1 ಸ್ಥಾನ ಪಡೆದೆವು. ಇದೇ ಗತಿ ಈ ಬಾರಿ ಬಿಜೆಪಿಗೆ ಬರಲಿದೆ ಎಂದು ನುಡಿದರು ಬಳಿಕ ಡಿ.ಕೆ.ಶಿವಕುಮಾರ್ ಅವರು ಪ್ರಜಾಧ್ವನಿ ಬಸ್ ಏರಿ ಕಾಲೇಜು ವೃತ್ತ ತಲುಪಿದರು ವಾಲ್ಮೀಕಿಗೆ ಮಾಲಾರ್ಪಣೆ ಮಾಡಿ ಅಲ್ಲಿ ಯಾತ್ರೆ ಕೊನೆಗೊಂಡಿತು .



# ನಕಲಿ ಕಾವೇರಿ ಬಗ್ಗೆ ಎಚ್ಚರ: ಕರ್ನಾಟಕ ರಾಜ್ಯ ಕರಕುಶಲ ಅಭಿವೃದ್ಧಿ ನಿಗಮ

**ಬೆಂಗಳೂರು:** ಕರ್ನಾಟಕ ರಾಜ್ಯ ಕರಕುಶಲ ಅಭಿವೃದ್ಧಿ ನಿಗಮ ಕರ್ನಾಟಕ ಸರ್ಕಾರದ ಉದ್ದಿಮೆ, ರಾಜ್ಯದ ಸಾವಿರಾರು ಕುಶಲಕರ್ಮಿಗಳ ಬೆನ್ನೆಲುಬಾಗಿ ಕರಕುಶಲ ಕಲೆಗಳ ಮೇಲೆ ಅವಲಂಬಿತರಾಗಿರುವ ಕರಕುಶಲಕರ್ಮಿಗಳ ಹಾಗೂ ಅವರ ಕುಟುಂಬದ ಶ್ರೇಯೋಭಿವೃದ್ಧಿಗೆ ಶ್ರಮಿಸುತ್ತಿದೆ. ಕರಕುಶಲ ವಲಯಕ್ಕೆ ಪೂರಕ ವಾತಾವರಣ ಸೃಷ್ಟಿಸಿ ಕರಕುಶಲಕರ್ಮಿಗಳು ತಯಾರಿಸಿದ ಉತ್ಪನ್ನಗಳಿಗೆ ರಾಜ್ಯಾದ್ಯಂತ ತನ್ನ ವಿಶ್ವವಿಖ್ಯಾತ 12 'ಕಾವೇರಿ' ಆರ್ಟ್ಸ್ ಮತ್ತು ಕ್ರಾಫ್ಟ್ ಎಂಪೋರಿಯಂ ಮೂಲಕ ಮಾರುಕಟ್ಟೆ ವ್ಯವಸ್ಥೆ ಕಲ್ಪಿಸಿದೆ. ಸುಮಾರು 1 ಶತಮಾನದಿಂದ ಅಸ್ತಿತ್ವದಲ್ಲಿರುವ ನಿಗಮದ ಫ್ಲಾಗ್‌ಶಿಪ್ ಕಾವೇರಿ ಮಾರಾಟ ಮಳಿಗೆಯು ಬೆಂಗಳೂರಿನ ಮಹಾತ್ಮಗಾಂಧಿ ರಸ್ತೆಯಲ್ಲದೆ ಬೆಂಗಳೂರು ನಗರದ ಪ್ರಮುಖ ಸ್ಥಳದಲ್ಲಿ ಇದು ಕಾರ್ಯನಿರ್ವಹಿಸುತ್ತಿದೆ. ಬೆಂಗಳೂರಿಗೆ ಭೇಟಿ ನೀಡುವ ದೇಶ ವಿದೇಶದ ಪ್ರಮುಖರು, ಗಣ್ಯರು ಸದರಿ ಮಳಿಗೆಗೆ ಭೇಟಿ ನೀಡುತ್ತಾರೆ. ಇದಕ್ಕೆ ಪ್ರಮುಖ ಕಾರಣ ರಾಜ್ಯದ ಪಾರಂಪರಿಕೆ ಮತ್ತು ವಿವಿಧ ಕರಕುಶಲ ಕಲೆಗಳ ಉತ್ಕೃಷ್ಟ ಉತ್ಪನ್ನಗಳು ನ್ಯಾಯಯುತ ಬೆಲೆಗೆ ಕಾವೇರಿ ಮಳಿಗೆಯಲ್ಲಿ ದೊರೆಯುತ್ತವೆ. ಈ ಪ್ರತಿಷ್ಠಿತ ಬ್ರಾಂಡ್ ಲೋಗೊ ಮತ್ತು ಶೈಲಿಯನ್ನು ಸೂಕ್ಷ್ಮವಾಗಿ ಮಾರ್ಪಾಡು ಮಾಡಿ ಅನೇಕ ಖಾಸಗಿ ಮಳಿಗೆಗಳು ಜನಸಾಮಾನ್ಯರಿಗೆ ವಂಚಿಸುತ್ತಿರುವ ಪ್ರಕರಣಗಳು ಇತ್ತೀಚಿನ ದಿನಗಳಲ್ಲಿ ಹೆಚ್ಚಿದೆ. ಈ ಬ್ರಾಂಡ್ ಹೆಸರನ್ನು ದುರುಪಯೋಗಪಡಿಸಿಕೊಂಡು ಕಳಪೆ ಕರಕುಶಲ ಉತ್ಪನ್ನಗಳನ್ನು ಮಾರಾಟ ಮಾಡುತ್ತಿರುವ ಮಳಿಗೆಗಳಲ್ಲಿ ಉತ್ಪನ್ನ ಖರೀದಿಸಿರುವ ಗ್ರಾಹಕರಿಂದ ನಿಗಮಕ್ಕೆ ಹಲವಾರು ದೂರುಗಳು ಬರುತ್ತಿವೆ. ಹೆಚ್ಚುತ್ತಿರವ ಸ್ಪರ್ಧಾತ್ಮಕ ಮಾರುಕಟ್ಟೆಯಲ್ಲಿ ಕರಕುಶಲ ಸಬಲೀಕರಣ ಮತ್ತು ಸಂರಕ್ಷಣೆಗಾಗಿ ಹಾಗೂ ಪಾರಂಪರಿಕ ಕರಕುಶಲ ಕಲೆಗಳನ್ನು ಮುಂದಿನ ಪೀಳಿಗೆಗೆ ಪರಿಚಯಿಸಲು ಶ್ರಮಿಸುತ್ತಿರುವ ನಿಗಮದ ಬಗ್ಗೆ ಹಾಗೂ ಕಾವೇರಿ ಗ್ರಾಹಕರನ್ನು ದಾರಿ ತಪ್ಪಿಸುತ್ತಿರುವ ನಕಲಿ ಮಳಿಗೆಗಳ ಜನಸಮಾನ್ಯರ ಬಗ್ಗೆ ಅರಿವು ಮೂಡಿಸುವುದು ಅವಶ್ಯಕ ಎಂದು ನಿಗಮದ ವ್ಯವಸ್ಥಾಪಕ ನಿರ್ದೇಶಕರಾದ ಜಿ.ವಿಶ್ವನಾಥ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಲೋಕಸಭಾ ಚುನಾವಣೆ : 10 ನಾಮಪತ್ರಗಳ ಸಲ್ಲಿಕೆ

**ಚಾಮರಾಜನಗರ:** ಲೋಕಸಭಾ ಸಾರ್ವತ್ರಿಕ ಚುನಾವಣೆಗೆ ನಾಮಪತ್ರ ಸಲ್ಲಿಸಲು ಕೊನೆಯ ದಿನವಾದ ಇಂದು ಒಂಭತ್ತು ಅಭ್ಯರ್ಥಿಗಳಿಂದ 10 ನಾಮಪತ್ರಗಳು ಸಲ್ಲಿಕೆಯಾಗಿವೆ. 22-ಚಾಮರಾಜನಗರ (ಪ.ಜಾ) ಲೋಕಸಭಾ ಕ್ಷೇತ್ರದಿಂದ 2024ರ ಸಾರ್ವತ್ರಿಕ ಚುನಾವಣೆಗೆ ಬಹುಜನ ಸಮಾಜ ಪಾರ್ಟಿಯಿಂದ ಎಂ. ಕೃಷ್ಣಮೂರ್ತಿ, ಡಾ. ಅಂಬೇಡ್ಕರ್ ಪೀಪಲ್ಸ್ ಪಾರ್ಟಿಯಿಂದ ಸಿ.ಎಂ. ಕೃಷ್ಣ, ಕರ್ನಾಟಕ ಪ್ರಜಾ ಪಾರ್ಟಿ (ರೈತ ಪರ್ವ)ಯಿಂದ ಪ್ರಸನ್ನ ಕುಮಾರ್. ಬಿ ಹಾಗೂ ಪಕ್ಷೇತರ ಅಭ್ಯರ್ಥಿಗಳಾಗಿ ಸುಭಾಷ್ ಚಂದ್ರ. ಕೆ, ನಟರಾಜು, ನಿಂಗರಾಜು. ಜಿ, ಸಿ. ರಾಜು, ನಿಂಗರಾಜು. ಜೆ ಎಂಬುವವರು ತಲಾ ಒಂದು ನಾಮಪತ್ರ ಸಲ್ಲಿಸಿದ್ದಾರೆ. ಸಮಾಜವಾದಿ ಜನತಾ ಪಾರ್ಟಿ (ಕರ್ನಾಟಕ)ಯಿಂದ ಚಾಮುದಾಸಯ್ಯ ಅವರು ಎರಡು ನಾಮಪತ್ರಗಳನ್ನು ಸಲ್ಲಿಸಿದ್ದಾರೆ. ಒಟ್ಟಾರೆ ಇದುವರೆಗೆ 25 ಅಭ್ಯರ್ಥಿಗಳಿಂದ 36 ನಾಮಪತ್ರಗಳು ಸಲ್ಲಿಕೆಯಾಗಿವೆ. ನಾಮಪತ್ರದೊಂದಿಗೆ ಸಲ್ಲಿಸಿರುವ ಅಫಿಡವಿಟ್ ಪ್ರತಿಯನ್ನು ಭಾರತ ಚುನಾವಣಾ ಆಯೋಗದ ವೆಬ್‌ಸೈಟ್ ಪೋರ್ಟಲ್‌ನಲ್ಲಿ ಅಪ್ ಲೋಡ್ ಮಾಡಲಾಗಿದೆ ಮತ್ತು ಚುನಾವಣಾಧಿಕಾರಿಗಳ ಕಾರ್ಯಾಲಯದ ಸೂಚನಾ ಫಲಕದಲ್ಲಿ ನಾಮಪತ್ರದ ನಕಲು ಪ್ರತಿ ಮತ್ತು ಅಫಿಡವಿಟ್ ಅನ್ನು ಪ್ರಚುರ ಪಡಿಸಲಾಗಿದೆ ಎಂದು ಚುನಾವಣಾಧಿಕಾರಿಗಳು ಹಾಗೂ ಜಿಲ್ಲಾಧಿಕಾರಿ ಶಿಲ್ಪಾ ನಾಗ್ ಅವರು ತಿಳಿಸಿದ್ದಾರೆ.

# ಪ್ರಜಾಪ್ರಭುತ್ವ ಬಲಿಷ್ಠತೆಗೆ ಎಲ್ಲರೂ ತಪ್ಪದೆ ಮತದಾನ ಮಾಡಿ : ಸೆಲ್ವರಾಜ್

**ಚಾಮರಾಜನಗರ:** ಭಾರತವು ಬೃಹತ್ ಪ್ರಜಾಪ್ರಭುತ್ವ ದೇಶವಾಗಿದ್ದು, ಮತದಾನ ದೇಶದ ಭದ್ರ ಬುನಾದಿಗೆ ಅಡಿಪಾಯವಾಗುತ್ತದೆ. ಪ್ರಜಾಪ್ರಭುತ್ವದ ಬಲಿಷ್ಠತೆಗೆ ಎಲ್ಲರೂ ತಪ್ಪದೇ ಮತದಾನ ಮಾಡಿ ಎಂದು ಹನೂರು ತಾಲೂಕಿನ ದೊಡ್ಡಾಲತ್ತೂರು ಗ್ರಾಮ ಪಂಚಾಯತಿ ಅಭಿವೃದ್ಧಿ ಅಧಿಕಾರಿ ಸೆಲ್ವರಾಜ್ ಅವರು ಹೇಳಿದರು. ಚಾಮರಾಜನಗರ ಜಿಲ್ಲೆಯ ಹನೂರು ತಾಲ್ಲೂಕಿನ ದೊಡ್ಡಾಲತ್ತೂರು ಗ್ರಾಮ ಪಂಚಾಯತಿ ಕಚೇರಿಯಲ್ಲಿ ಇಂದು ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಸ್ವೀಪ್ ಸಮಿತಿ ಹಾಗೂ ಹನೂರು ತಾಲೂಕು ಸ್ವೀಪ್ ಸಮಿತಿಯಿಂದ ಆಯೋಜಿಸಿದ್ದ ಮತದಾನ ಜಾಗೃತಿ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು. ಚಾಮರಾಜನಗರ ಲೋಕಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಏಪ್ರಿಲ್ 26ರಂದು ಮತದಾನ ನಡೆಯಲಿದೆ. ಅಂದು ಅರ್ಹರೆಲ್ಲರೂ ಕಡ್ಡಾಯವಾಗಿ ಮತಚಲಾಯಿಸುವ ಮೂಲಕ ನಿಮಗೆ ನೆರವಾಗುವ ವ್ಯಕ್ತಿಯನ್ನು ಆಯ್ಕೆ ಮಾಡಬೇಕು. ಯಾವುದೇ ಆಮಿಷಗಳಿಗೆ ಒಳಗಾಗದೆ ನಿಷ್ಪಕ್ಷಪಾತವಾಗಿ ಮತಚಲಾಯಿಸಬೇಕು. ಮತದಾನ ನಿಮ್ಮ ಮುಂದಿನ ಪೀಳಿಗೆಯ ಭವಿಷ್ಯ ರೂಪಿಸುವಲ್ಲಿ ಪ್ರಮುಖ ಪಾತ್ರ ವಹಿಸುತ್ತದೆ ಎಂದರು. ಕೆಂಪಯ್ಯನಹಟ್ಟಿ ಗ್ರಾಮದ ಶಾಲೆಯ ಮಕ್ಕಳು ಕಡ್ಡಾಯವಾಗಿ ಮತದಾನ ಮಾಡುವಂತೆ ಅವರ ತಂದೆ ತಾಯಿಗಳಿಗೆ ಮತದಾನದ ಮಮತೆಯ ಕರೆಯೋಲೆ ಪತ್ರ ಗಮನ ಸೆಳೆಯಿತು. ಇದೇ ಸಂಧರ್ಭದಲ್ಲಿ ಮತದಾನ ಜಾಗೃತಿಯ ಬಗ್ಗೆ ವಿಡಿಯೋ ಮತ್ತು ಜಿಂಗಲ್ಸ್‌ಗಳ ಮೂಲಕ ಸಾರ್ವಜನಿಕರಿಗೆ ಮತ ಚಲಾವಣೆಯ ಮಹತ್ವದ ತಿಳುವಳಿಕೆ ನೀಡಲಾಯಿತು. ಈ ಸಂಧರ್ಭದಲ್ಲಿ ಗ್ರಾಮ ಪಂಚಾಯತಿಯ ಆನಂದ, ಕುಮಾರ, ಬಿ.ಎಫ್.ಟಿ ಕೃಷ್ಣಸ್ವಾಮಿ ಶಾಲಾ ಶಿಕ್ಷಕರು, ಮಹಿಳಾ ಸ್ವ ಸಹಾಯ ಸಂಘದ ಸದಸ್ಯರು ಹಾಜರಿದ್ದರು.

# ವಿಶೇಷ ಚೇತನರಿಂದ ಮತದಾನ ಜಾಗೃತಿಯ ವಿಶೇಷ ರ್‍ಯಾಲಿ

**ಮೈಸೂರು:** ಮತದಾನದ ಪ್ರಮಾಣವನ್ನು ಹೆಚ್ಚಿಸುವ ಹಾಗೂ ಸಮಾಜದ ವಿವಿಧ ವರ್ಗಗಳಲ್ಲಿ ವ್ಯಾಪಕವಾಗಿ ಮತದಾನ ಜಾಗೃತಿ ಮೂಡಿಸುವ ಸಲುವಾಗಿ ನಂಜನಗೂಡು ತಾಲ್ಲೂಕು ಪಂಚಾಯಿತಿ ಸ್ವೀಪ್ ಸಮಿತಿ ವತಿಯಿಂದ ವಿಶೇಷ ಚೇತನರಿಂದ ಮತದಾನ ಜಾಗೃತಿಯ ವಿಶೇಷ ರ್‍ಯಾಲಿ ಹಮ್ಮಿಕೊಳ್ಳಲಾಗಿತ್ತು.

ತಾಲ್ಲೂಕು ಸ್ವೀಪ್ ಸಮಿತಿ ಅಧ್ಯಕ್ಷರು ಹಾಗೂ ಕಾರ್ಯನಿರ್ವಾಹಕ ಅಧಿಕಾರಿ ಪೂರ್ಣಿಮಾ ಅವರು ಮಾತನಾಡಿ, ಪ್ರಜಾಪ್ರಭುತ್ವದಲ್ಲಿ ಮತದಾನಕ್ಕೆ ವಿಶೇಷವಾದ ಶಕ್ತಿಯಿದೆ. ಸಂವಿಧಾನವು 18 ವರ್ಷ ಮೇಲ್ಪಟ್ಟ ಪ್ರತಿಯೊಬ್ಬರಿಗೂ ಮತದಾನ ಮಾಡುವ ಹಕ್ಕನ್ನು ನೀಡಿದೆ. ಪ್ರತಿಯೊಬ್ಬ ಅರ್ಹ ಮತದಾರರು ಮತ ಚಲಾವಣೆ ಮಾಡುವ ಮೂಲಕ ತಮ್ಮ ಕರ್ತವ್ಯವನ್ನು ಪಾಲನೆ ಮಾಡಬೇಕು ಎಂದು ಹೇಳಿದರು.

ವಿಶೇಷ ಚೇತನರು, ಹಿರಿಯ ನಾಗರಿಕರಿಗಾಗಿಯೇ ಮತಗಟ್ಟೆಗಳಲ್ಲಿ ರ?ಯಾಂಪ್, ವೀಲ್‌ಚೇರ್, ನೆರಳು, ನೀರಿನ ವ್ಯವಸ್ಥೆ ಸೇರಿ ಇತರೆ ಅನುಕೂಲಗಳು ಇರಲಿದ್ದು, ಪ್ರತಿಯೊಬ್ಬರು ತಪ್ಪದೇ ಮತದಾನ ಮಾಡುವಂತೆ ಕರೆ ನೀಡಿದರು.

ಇದೇ ವೇಳೆ ಎಲ್ಲಾ ವಿಶೇಷಚೇತನರಿಂದ ಕಡ್ಡಾಯ ಮತದಾನದ ಸಹಿ ಸಂಗ್ರಹಣೆ ಮಾಡಲಾಯಿತು. ಬಳಿಕ ತಾಲ್ಲೂಕು ಪಂಚಾಯಿತಿ ಕಚೇರಿಯಿಂದ ಹುಲ್ಲಹಳ್ಳಿ ಸರ್ಕಲ್ ಮಾರ್ಗದ ಪ್ರಮುಖ ರಸ್ತೆಗಳಲ್ಲಿ ಸಾಗಿ ಮತದಾನ ಜಾಗೃತಿ ಮೂಡಿಸಲಾಯಿತು.




# 13 ಅಭ್ಯರ್ಥಿಗಳಿಂದ ನಾಮಪತ್ರ ಸ್ವೀಕಾರ

**ಮೈಸೂರು:** ಮೈಸೂರು-ಕೊಡಗು ಲೋಕಸಭಾ ಸಾರ್ವತ್ರಿಕ ಚುನಾವಣೆಯಲ್ಲಿ ನಾಮಪತ್ರ ಸಲ್ಲಿಸಲು ಕೊನೆಯ ದಿನವಾದ ಇಂದು (04-04-2024) 13 ಅಭ್ಯರ್ಥಿಗಳಿಂದ ನಾಮಪತ್ರ ಸಲ್ಲಿಕೆಯಗಿರುತ್ತದೆ. ಪಕ್ಷೇತರ ಅಭ್ಯರ್ಥಿಯಾಗಳಾಗಿ ಪಿ ಕೆ ದರ್ಶನ್ ಶೌರಿ, ರಾಜು, ಸಣ್ಣ ನಾಯಕ, ಅಂಬೇಡ್ಕರ್ ಸಿ ಜೆ, ರಾಜಣ್ಣ, ರಾಮಯ್ಯ ಡಿ, ಆರ್ ಮಹೇಶ್, ಡಿ.ಎನ್ ನವೀನ್ ಕುಮಾರ್, ಶಿವಕುಮಾರ್ ಅವರು ನಾಮಪತ್ರ ಸಲ್ಲಿಸಿರುತ್ತಾರೆ. ಸಮಾಜವಾದಿ ಜನತಾ ಪಾರ್ಟಿ (ಕರ್ನಾಟಕ)ಯ ಅಭ್ಯರ್ಥಿಯಾಗಿ ಹೆಚ್.ಎಂ ನಂಜುಂಡಸ್ವಾಮಿ, ಕರ್ನಾಟಕ ಜನತಾ ಪಕ್ಷದ ಅಭ್ಯರ್ಥಿಯಾಗಿ ಎನ್.ಅಂಬರೀಷ್, ಜಾತ್ಯತೀತ ಪ್ರಜಾಪ್ರಭುತ್ವ ಕಾಂಗ್ರೆಸ್ ಪಕ್ಷದ ಅಭ್ಯರ್ಥಿಯಾಗಿ ಎ.ಜಿ.ರಾಮಚಂದ್ರರಾವ್ ಹಾಗೂ ಬಹುಜನ ಸಮಾಜ ಪಕ್ಷದ ಅಭ್ಯರ್ಥಿಯಾಗಿ ರೇವತಿ ರಾಜ್ ಅವರು ನಾಮಪತ್ರ ಸಲ್ಲಿಸಿರುತ್ತಾರೆ. ಇದರೊಂದಿಗೆ ಇಲ್ಲಿಯವರೆಗೆ 28 ಅಭ್ಯರ್ಥಿಗಳು ನಾಮಪತ್ರ ಸಲ್ಲಿಸಿದ್ದಾರೆ.




# ಹೆಚ್.ವಿಶ್ವನಾಥ್ ಗೆ ತನ್ವೀರ್ ಸೇಠ್ ತಿರುಗೇಟು

**ಮೈಸೂರು:** ಮೈಸೂರು-ಕೊಡಗು ಬಿಜೆಪಿ ಅಭ್ಯರ್ಥಿ ಯದುವೀರ್ ಅವರನ್ನು ಅವಿರೋಧವಾಗಿ ಆಯ್ಕೆ ಮಾಡಬೇಕು ಎಂದು ಹೇಳಿಕೆ ನೀಡಿದ್ದ ವಿಧಾನ ಪರಿಷತ್ ವಿಪಕ್ಷ ನಾಯಕ ಹೆಚ್. ವಿಶ್ವನಾಥ್ ಗೆ ಕೆಪಿಸಿಸಿ ಕಾರ್ಯಾಧ್ಯಕ್ಷ ತನ್ವೀರ್ ಸೇಠ್ ತಿರುಗೇಟು ನೀಡಿದ್ದಾರೆ. ಈ ಕುರಿತು ಇಂದು ಮಾತನಾಡಿದ ಶಾಸಕ ತನ್ವೀರ್ ಸೇಠ್, ವಿಶ್ವನಾಥ್ ಅವರಿಗೆ ವಯಸ್ಸಿನ ಸಮಸ್ಯೆ ಹಾಗಾಗಿ ಏನೇನೋ ಮಾತಾಡುತ್ತಾರೆ. ಅವರ ಮಾತಿನ ಮೇಲೆ ಅವರಿಗೆ ಗಮನ ಇರಲ್ಲ. ಅವಿರೋಧವಾಗಿ ಹೇಗೆ ಆಯ್ಕೆ ಮಾಡೋಕೆ ಆಗುತ್ತೆ.? ಈಗಾಗಲೇ 15 ಕ್ಕೂ ಹೆಚ್ಚು ಅಭ್ಯರ್ಥಿಗಳು ಕಣದಲ್ಲಿದ್ದಾರೆ. ಲಕ್ಷ್ಮಣ್ ಉಮೇದುವಾರಿಕೆ ವಾಪಸ್ ಪಡೆದರೆ ಅವಿರೋಧವಾಗಿ ಆಯ್ಕೆ ಮಾಡಿದಾಗೆ ಆಗುತ್ತಾ.? ಎಂದು ಪ್ರಶ್ನಿಸಿದರು. ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಚುನಾವಣೆ ಅನ್ನೋದು ಒಂದು ಪ್ರಕ್ರಿಯೆ ನಡೆಯಬೇಕು. ಅವರು ಆಲ್ ಇಂಡಿಯಾ ಟೂರ್ ಹೊಡೆದು ಬಂದ್ರೂ ಇನ್ನೂ ಬುದ್ದಿ ಬಂದಿಲ್ಲ ಅನ್ಸುತ್ತೆ. ಅವರು ಮೊದಲು ಯಾವ ಪಕ್ಷದಲ್ಲಿದ್ದಾರೆ ಎನ್ನುವುದನ್ನು ಸ್ಪಷ್ಟಪಡಿಸಲಿ. ಇವರ ಹೇಳಿಕೆಯಿಂದ ನಮಗೆ ಏನು ಹಿನ್ನಡೆ ಆಗಲ್ಲ. ಕ್ಷೇತ್ರದಲ್ಲಿ ಕಾಂಗ್ರೆಸ್ ಗೆ ಎಲ್ಲಾ ಗೆಲುವಿನ ವಾತಾವರಣ ಇದೆ ಎಂದು ಕೆಪಿಸಿಸಿ ಕಾರ್ಯಾಧ್ಯಕ್ಷ ತನ್ವೀರ್ ಸೇಠ್ ಹೇಳಿದರು.

# ಶ್ರೀಬೆಟ್ಟಳ್ಳಿ ಮಾರಮ್ಮನ ಜಾತ್ರಾ ಮಹೋತ್ಸವ



**ಚಾಮರಾಜನಗರ:** ಜಿಲ್ಲೆಯ ಹನೂರು ಪಟ್ಟಣದ ಶ್ರೀ ಬೆಟ್ಟಳ್ಳಿ ಮಾರಮ್ಮನ ಜಾತ್ರಾ ಮಹೋತ್ಸವದ ಅಂಗವಾಗಿ ಹರಕೆ ಹೊತ್ತ ಅಂದಾಜು 104 ಮಂದಿ ಭಕ್ತರು ದೊಡ್ಡ ಭಾಯಿ ಭೀಗ ಹಾಕಿಸಿಕೊಂಡು ತಮ್ಮ ಹರಕೆಯನ್ನಯ ಅರ್ಪಿಸಿದರು ಮೆರೆದರು.

ಜಾತ್ರಾ ಮಹೋತ್ಸವದಲ್ಲಿ ಭಾಯಿಬೀಗ ಕಾರ್ಯಕ್ರಮ ಹೆಚ್ಚು ಹೆಸರುವಾಸಿ ಪಡೆದಿದ್ದು, ಹಲವು ವರ್ಷಗಳಿಂದ ನಡೆದುಕೊಂಡು ಬಂದಿದೆ. ಈ ಹಿನ್ನೆಲೆಯಲ್ಲಿ ಕಳೆದ 15 ದಿನದ ಹಿಂದೆಯೇ ಹರಕೆ ಹೊತ್ತಿದ್ದ ಅಂದಾಜು 104 ಭಕ್ತರುಮಾಲೆ ಧರಿಸಿ ದಿನನಿತ್ಯ ಪೂಜೆ ಪುನಸ್ಕಾರಗಳಲ್ಲಿ ತೊಡಗಿದ್ದರು. ಬೆಟ್ಟಳ್ಳಿ ಮಾರಮ್ಮನ ದೇಗುಲದಲ್ಲಿ ಬುಧವಾರ ಬೆಳ್ಳಿಗ್ಗೆಯಿಂದಲೆ ಹರಕೆ ಹೊತ್ತ 3200 ಮಂದಿ ಭಕ್ತರು ಸಣ್ಣ ಭಾಯಿ ಭೀಗ ಹಾಕಿಸಿಕೊಂಡು ತಮ್ಮ ಹರಕೆಯನ್ನು ದೇವಿಗೆ ಅರ್ಪಿಸಿದರು ತಮ್ಮ ಹರಕೆ ಅರ್ಪಿಸಿದರು ಈ ವೇಳೆ ನೆರೆದಿದ್ದ ಭಕ್ತ ಸಮೂಹ ಕುತೂಹಲದಿಂದ ವೀಕ್ಷಿಸಿ ಕಣ್ತುಂಬಿಕೊಂಡರು.ಮಹಿಳೆಯರು ಹೆಚ್ಚಿನ ಸಂಖ್ಯೆಯಲ್ಲಿ ಸಣ್ಣ ಬಾಯಿಬೀಗವನ್ನು ಆಂಜನೇಯಸ್ವಾಮಿ ದೇವಾಲಯದ ಬಳಿ ಹಾಕಿಸಿಕೊಂಡು ಗಮನಸೆಳೆದಿದ್ದಾರೆ.'ೂಡ್ಡ ಭಾಯಿಭೀಗವನ್ನು ಹಾಕಿಸಿಕೊಂಡ ಹರಕೆ ಹೊತ್ತ ಭಕ್ತರನ್ನು ವಾದ್ಯಮೇಳದೊಂದಿಗೆ ಪಟ್ಟಣದ ಆಂಜನೇಯಸ್ವಾಮಿ ದೇಗುಲದಿಂದ ಹಳೇ ಎಂಡಿಸಿಸಿ ರಸ್ತೆ ಹಾಗೂ ಪಟ್ಟಣದ ಬಸ್ ನಿಲ್ದಾಣದ ಮೂಲಕ ಬೆಟ್ಟಳ್ಳಿ ಮಾರಮ್ಮನ ದೇಗುಲಕ್ಕೆ ಕಾಲ್ನಡಿಗೆಯಲ್ಲಿ ಕರೆತರಲಾಯಿತು.ಮಾಂಸದ ವ್ಯಾಪಾರ ಬಲು ಜೋರು:ಜಾತ್ರೆಗೆ ಚಾಲನೆ ಕೊಟ್ಟ ದಿನದಿಂದ ಪಟ್ಟಣದಲ್ಲಿ ಮಾಂಸಾಹಾರ ನಿಷೇಧಿಸಲಾಗಿತ್ತು. ಹಾಗಾಗಿ ಹೋಟೆಲ್ ಸೇರಿದಂತೆ ಮಾಂಸದ ಅಂಗಡಿಗಳು ಬಂದ್ ಆಗಿದ್ದವು. ಆದರೆ, ಬುಧವಾರ ಪಟ್ಟಣದ ಪ್ರತಿ ಮನೆಯಲ್ಲೂ ಬಾಡೂಟದ ಹಿನ್ನೆಲೆಯಲ್ಲಿ ಜನರು ಮಾಂಸದ ಅಂಗಡಿಗಳಿಗೆ ಮುಗಿಬಿದ್ದ ದೃಶ್ಯ ಸಾಮಾನ್ಯವಾಗಿತ್ತು.

# ಜಿಲ್ಲೆಯ ಗ್ರಾಮಾಂತರ ಪ್ರದೇಶಗಳಲ್ಲಿ ಸಮರ್ಪಕ ಕುಡಿಯುವ ನೀರಿನ ಪೂರೈಕೆಗೆ ಕ್ರಮವಹಿಸಿ: ಗಾಯತ್ರಿ

**ಮೈಸೂರು:** ಮೈಸೂರು ಜಿಲ್ಲೆಯ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಕುಡಿಯುವ ನೀರಿಗೆ ಸಮಸ್ಯೆಯಾಗದಂತೆ ಅಗತ್ಯ ಮುಂಜಾಗ್ರತಾ ಕ್ರಮ ಕೈಗೊಳ್ಳುವಂತೆ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರಾದ ಶ್ರೀಮತಿ ಕೆ.ಎಂ.ಗಾಯಿತ್ರಿ ಅವರು ವೀಡಿಯೋ ಸಂವಾದದ ಮೂಲಕ ತಾಲ್ಲೂಕು ಪಂಚಾಯತಿ ಕಾರ್ಯನಿರ್ವಾಹಕ ಅಧಿಕಾರಿಗಳು, ಗ್ರಾಮಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಉಪವಿಭಾಗದ ಸಹಾಯಕ ಕಾರ್ಯಪಾಲಕ ಅಭಿಯಂತರರುಗಳಿಗೆ ಸೂಚಿಸಿದರು.

ಜಿಲ್ಲಾ ಪಂಚಾಯಿತಿಯ ಮಿನಿ ಸಭಾಂಗಣದಲ್ಲಿ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಅಧ್ಯಕ್ಷತೆಯಲ್ಲಿ ಕುಡಿಯುವ ನೀರಿನ ಸಮಸ್ಯೆ ಕುರಿತು ನಡೆಸಿದ ವೀಡಿಯೋ ಸಂವಾದದಲ್ಲಿ ಮಾತನಾಡಿದ ಅವರು, ಮುಂದಿನ ಹದಿನೈದು ದಿನಗಳಲ್ಲಿ ಗ್ರಾಮಾಂತರ ಪ್ರದೇಶದಲ್ಲಿ ಕುಡಿಯುವ ನೀರಿನ ಸಮಸ್ಯೆ ಉಂಟಾಗಬಹುದಾದ ಗ್ರಾಮಗಳ ವಿವರ ಪಡೆದು, ಸಮಸ್ಯೆ ಎದುರಿಸಲು ಕೈಗೊಳ್ಳಬೇಕಾದ ಕ್ರಮಗಳ ಕುರಿತು ನಿರ್ದೇಶನ ನೀಡಿದರು.

ಕೊಳವೆಬಾವಿಗಳ ನೀರಿನ ಇಳುವರಿಯ ಮಾಹಿತಿ ಪಡೆಯಲಾಯಿತು. ಸಮರ್ಪಕವಾಗಿ ಶುದ್ಧ ಕುಡಿಯುವ ನೀರಿನ ಪೂರೈಕೆಗೆ ಸೂಚಿಸಲಾಯಿತು. ನೀರಿನ ಮೂಲದ ಪರೀಕ್ಷೆಯನ್ನು ನಿಯಮಿತವಾಗಿ ನಡೆಸುವುದರ ಜೊತೆಗೆ, ಕುಡಿಯಲು ಯೋಗ್ಯವಲ್ಲದ ನೀರನ್ನು ಬಳಕೆ ಮಾಡದಂತೆ ಸಾರ್ವಜನಿಕರಲ್ಲಿ ಅರಿವು ಮೂಡಿಸಲು ಸೂಚಿಸಿದರು. ಗ್ರಾಮೀಣ ಭಾಗದಲ್ಲಿರುವ ಕೊಳವೆಬಾವಿಗಳ ಇಳುವರಿಯನ್ನು ಪರೀಕ್ಷೆ ಮಾಡಿಸಿ ಹಾಗೂ ಸಾರ್ವಜನಿಕರಿಗೆ ಪೂರೈಕೆ ಮಾಡುವ ಕುಡಿಯುವ ನೀರಿನ ಗುಣಮಟ್ಟವನ್ನು ಎಫ್.ಟಿ.ಕೆ ಕಿಟ್ ಮೂಲಕ ಪರಿಶೀಲಿಸಿ ವರದಿಯನ್ನು ಸಂಗ್ರಹಿಸಿಟ್ಟುಕೊಳ್ಳುವಂತೆ ನಿರ್ದೇಶನ ನೀಡಿದರು. ಬೇಸಿಗೆ ಪ್ರಾರಂಭವಾಗಿರುವುದರಿಂದ ಜನ-ಜಾನುವಾರುಗಳಿಗೆ ಕುಡಿಯುವ ನೀರಿನ ಸಮಸ್ಯೆಯಾಗದಂತೆ ಅಗತ್ಯ ಕ್ರಮ ವಹಿಸಬೇಕೆಂದು ತಿಳಿಸಿದರು. ಗ್ರಾಮಾಂತರ ಪ್ರದೇಶದ ಕುಡಿಯುವ ನೀರಿನ ಸಮಸ್ಯೆ ಕುರಿತು ದೂರು ಸ್ವೀಕರಿಸಲು ಜಿಲ್ಲಾ ಪಂಚಾಯತಿ ಕಚೇರಿಯಲ್ಲಿ 24/7 ಕಂಟ್ರೋಲ್ ರೂಮ್ ಕಾರ್ಯ ನಿರ್ವಹಿಸುತ್ತಿದ್ದು, ದೂರು ದಾಖಲಿಸಲು ಕರೆ ಮಾಡಬೇಕಾದ ದೂರವಾಣಿ ಸಂ:0821-2526355 ಆಗಿರುತ್ತದೆ. ಇದರ ಸದ್ಬಳಕೆ ಮಾಡಿಕೊಳ್ಳುವ ಕುರಿತು ಸಾರ್ವಜನಿಕರಿಗೆ ಅರಿವು ಮೂಡಿಸುವ ನಿಟ್ಟಿನಲ್ಲಿ ತಾ.ಪಂ., ಗ್ರಾ.ಪಂ.ಗಳಲ್ಲಿ ವ್ಯಾಪಕ ಪ್ರಚಾರಮಾಡಲು ಕ್ರಮವಹಿಸುವಂತೆ ಎಲ್ಲಾ ಇಓ ಮತ್ತು ಪಿಡಿಓಗಳಿಗೆ ಸೂಚಿಸಿದರು.



ಗ್ರಾಮೀಣ ಭಾಗದಲ್ಲಿ ಮ.ನರೇಗಾ ಯೋಜನೆ ಕುರಿತು ವಲಸೆ ಯಾಕ್ರಿ, ನಿಮ್ಮೂರಲ್ಲೇ ಉದ್ಯೋಗ ಖಾತ್ರಿ' ಅಭಿಯಾನದಡಿ ಅರಿವು ಮೂಡಿಸಲು ಕ್ರಮವಹಿಸಬೇಕು. ಮ.ನರೇಗಾ ಯೋಜನೆಯಡಿ ಉದ್ಯೋಗ ಸೃಜನೆ ಮಾಡುವ ಮೂಲಕ ಗುಳೆ ಹೋಗುವುದನ್ನು ತಪ್ಪಿಸುವಂತೆ ಸೂಚನೆ ನೀಡಿದರು.

# ಕಡ್ಡಾಯ ಮತದಾನ ಮಾಡಿ : ಸಹಾಯಕ ಚುನಾವಣಾಧಿಕಾರಿ ಜಿ.ಡಿ.ಶೇಖರ್ ಸಲಹೆ

**ಮೈಸೂರು:** ಯುವ ಮತದಾರರು ಕಡ್ಡಾಯವಾಗಿ ಮತದಾನ ಮಾಡುವ ಮೂಲಕ ದೇಶ ಕಟ್ಟುವ ಕಾರ್ಯ ಮಾಡಬೇಕು ಎಂದು ಸಹಾಯಕ ಚುನಾವಣಾಧಿಕಾರಿಗಳಾದ ಜಿ.ಡಿ.ಶೇಖರ್ ಅವರು ಸಲಹೆ ನೀಡಿದರು.

ತಾಲ್ಲೂಕಿನ ಅರಸು ಭವನದಲ್ಲಿ ತಾಲ್ಲೂಕು ಸ್ವೀಪ್ ಸಮಿತಿ, ಪುರಸಭೆ ಹಾಗೂ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ವತಿಯಿಂದ ಆಯೋಜಿಸಿದ್ದ ?ಮತದಾನ ಜಾಗೃತಿ ಕಾರ್ಯಕ್ರಮ?ದ ಅಧ್ಯಕ್ಷತೆವಹಿಸಿ ಅವರು ಮಾತನಾಡಿದರು.

ಯುವಕರು ಪ್ರಜಾಪ್ರಭುತ್ವದಲ್ಲಿ ಮತದಾನದ ಮೌಲ್ಯವನ್ನು ಅರಿತುಕೊಳ್ಳಬೇಕು. ಒಂದೊಂದು ಮತಕ್ಕೂ ಬೆಲೆಯಿದೆ. ಒಂದು ಸದೃಢ ದೇಶವನ್ನು ಕಟ್ಟುವ ನಿಟ್ಟಿನಲ್ಲಿ ಮತದಾನವು ಪ್ರಮುಖ ಪಾತ್ರವಾಗಿದೆ. ಹೀಗಾಗಿ, ಪ್ರತಿಯೊಬ್ಬರು ಕಡ್ಡಾಯವಾಗಿ ಮತದಾನ ಮಾಡಬೇಕು ಎಂದರು.

ಯುವಕರು ತಪ್ಪದೇ ಮತದಾನ ಮಾಡಬೇಕು ಅದರ ಜೊತೆಗೆ ತಮ್ಮ ಕುಟುಂಬದ ಹಾಗೂ ಸುತ್ತಮುತ್ತಲಿನ ಜನರನ್ನು ಕೂಡ ಕಡ್ಡಾಯವಾಗಿ ಮತದಾನ ಮಾಡುವಂತೆ ಜಾಗೃತಿ ಮೂಡಿಸಬೇಕು ಎಂದು ತಿಳಿಸಿದರು.ತಾಲ್ಲೂಕು ಸ್ವೀಪ್ ಸಮಿತಿ ಅಧ್ಯಕ್ಷರು, ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ಡಿ.ಬಿ.ಸುನೀಲ್ ಕುಮಾರ್ ಅವರು ಮಾತನಾಡಿ, ಮತದಾನ ಮಾಡುವುದು ನಮ್ಮ ಹಕ್ಕು. ಅದನ್ನು ಚಲಾಯಿಸಿದಾಗ ಮಾತ್ರ ಆ ಹಕ್ಕಿಗೆ ಅರ್ಥ ಬರುವುದು ಎಂದರು.



ವಿಎಚ್ಎ(ವೋಟರ್ ಹೆಲ್ಪ್ ಲೈನ್) ಆಪ್ ಡೌನ್ಲೋಡ್ ಮಾಡಿಕೊಳ್ಳುವ ಮೂಲಕ ಹೊಸದಾಗಿ ಗುರುತಿನ ಚೀಟಿಗೆ ಅರ್ಜಿ ಸಲ್ಲಿಸಬಹುದು. ಗುರುತಿನ ಚೀಟಿಯಲ್ಲಿ ತಪ್ಪಿದ್ದಲ್ಲಿ ತಿದ್ದುಪಡಿಗೂ ಅವಕಾಶವಿದೆ. ಅದಲ್ಲದೇ, ಅಭ್ಯರ್ಥಿಗಳ ಮಾಹಿತಿಯು ಕೂಡ ಲಭ್ಯವಿದ್ದು, ಈ ಆಪ್ ಡೌನ್ಲೋಡ್ ಮಾಡಿಕೊಳ್ಳುವ ಮೂಲಕ ಸದುಪಯೋಗಪಡಿಸಿಕೊಳ್ಳಬೇಕು ಎಂದು ಮಾಹಿತಿ ನೀಡಿದರು.

ಪ್ರತಿಯೊಬ್ಬರು ಮತದಾನ ಮಾಡಲಿ ಎಂಬ ಉದ್ದೇಶದಿಂದ ಆ ದಿನ ರಜೆ ನೀಡಲಾಗುತ್ತದೆ. ಆದರೆ, ಕೆಲವರು ರಜೆಯನ್ನು ಮೋಜಿನಲ್ಲಿ ಕಳೆಯಲು ಪ್ರಯತ್ನಿಸುತ್ತಾರೆ ಇದು ತಪ್ಪು. ಇದರಿಂದ ಭವಿಷ್ಯದಲ್ಲಿ ಕೊರಗುವ ಪರಿಸ್ಥಿತಿ ನಿರ್ಮಾಣವಾಗಬಹುದು ಎಂದು ಹೇಳಿದರು.

ವ್ಯವಸ್ಥೆಯನ್ನು ದೂರುವ ಮೊದಲು ನಾವು ನಮ್ಮ ಹಕ್ಕು, ಕರ್ತವ್ಯಗಳನ್ನು ಪ್ರಮಾಣಿಕವಾಗಿ ಪೂರೈಸಬೇಕು. ಈ ನಿಟ್ಟಿನಲ್ಲಿ ವಿದ್ಯಾರ್ಥಿಗಳು ಯಾವುದೇ ಆಮಿಷಗಳಿಗೆ ಒಳಗಾಗದೇ ಕಡ್ಡಾಯವಾಗಿ ಮತದಾನ ಮಾಡಬೇಕು ಹಾಗೂ ಇತರರಿಗೂ ಮತದಾನ ಮಾಡುವಂತೆ ಜಾಗೃತಿ ಮೂಡಿಸಬೇಕು ಎಂದು ತಿಳಿಸಿದರು.

ತಹಶೀಲ್ದಾರ್ ಸುರೇಂದ್ರಕುಮಾರ್ ಅವರು ಮಾತನಾಡಿ, ವಿದ್ಯಾರ್ಥಿಗಳು ಮತದಾನದ ಮಹತ್ವವನ್ನು ತಮ್ಮ ಕುಟುಂಬದ ಸದಸ್ಯರಿಗೆ ತಿಳಿಸುವುದರ ಜೊತೆಗೆ ಯಾವುದೇ ಆಮಿಷಕ್ಕೆ ಒಳಗಾಗದೇ ಮತದಾನ ಮಾಡುವಂತೆ ಮನವಿ ಮಾಡಬೇಕು ಎಂದರು.

# ಸಂಜೆ ಟಿಪ್ಸ್

## PhonePe ಸ್ಟಾರ್ ಹೆಲ್ತ್ ಇನ್ಶೂರೆನ್ಸ್ ಜೊತೆಗೆ ಪಾಲುದಾರಿಕೆ

ಮಾಸಿಕ ಮತ್ತು ವಾರ್ಷಿಕ ಪಾವತಿ ಆಯ್ಕೆಯೊಂದಿಗೆ ಗ್ರಾಹಕರಿಗೆ ಹೆಲ್ತ್ ಇನ್ಶೂರೆನ್ಸ್ ಅನ್ನು ನೀಡಲು ಭಾರತದ ಅತಿದೊಡ್ಡ ರಿಟೇಲ್ ಹೆಲ್ತ್ ಇನ್ಶೂರೆನ್ಸ್ ಕಂಪನಿಯಾದ ಸ್ಟಾರ್ ಹೆಲ್ತ್ ಆ=ಂಡ್ ಅಲೈಡ್ ಇನ್ಶೂರೆನ್ಸ್ ಕಂಪನಿ ಲಿಮಿಟೆಡ್ (ಸ್ಟಾರ್ ಹೆಲ್ತ್ ಇನ್ಶೂರೆನ್ಸ್) ಜೊತೆಗಿನ ಪಾಲುದಾರಿಕೆಯನ್ನು PhonePe ಇಂದು ಪ್ರಕಟಿಸಿದೆ. ಈ ಪಾಲುದಾರಿಕೆಯೊಂದಿಗೆ, PhonePe ಬಳಕೆದಾರರು ಈಗ PhonePe ಆಪ್ನಲ್ಲಿ ರೂ.1 ಕೋಟಿವರೆಗಿನ ಕವರೇಜ್ನೊಂದಿಗೆ 'ಸ್ಟಾರ್ ಕಾಂಪ್ರಹೆನ್ಸಿವ್ ಇನ್ಶೂರೆನ್ಸ್ ಪಾಲಿಸಿ'ಯನ್ನು ಪಡೆಯಲು ಸಾಧ್ಯವಾಗುತ್ತದೆ. ಈ ಹಿಂದೆ ತನ್ನ ಮೋಟಾರು ಇನ್ಶೂರೆನ್ಸ್ ಉತ್ಪನ್ನಗಳೊಂದಿಗೆ ಮಾರುಕಟ್ಟೆಯಲ್ಲಿ ಸಂಚಲನ ಮೂಡಿಸಿದ ನಂತರ, ಈಗ ಈ ಬಿಡುಗಡೆಯೊಂದಿಗೆ, ಕ್ಬುಠಟಿಜಕಜ ಹೆಲ್ತ್ ಇನ್ಶೂರೆನ್ಸ್ ವಿಭಾಗದಲ್ಲಿ ತನ್ನ ಬಳಕೆದಾರರಿಗೆ ಲಭ್ಯವಿರುವ ಆಯ್ಕೆಗಳನ್ನು ಮತ್ತಷ್ಟು ವಿಸ್ತರಿಸುತ್ತಿದೆ. ಈ ಪಾಲುದಾರಿಕೆಯ ಮೂಲಕ, ಮೊದಲ ಬಾರಿಗೆ, ಸ್ಟಾರ್ ಹೆಲ್ತ್ ಇನ್ಶೂರೆನ್ಸ್ನ ಕಾಂಪ್ರಹೆನ್ಸಿವ್ ಹೆಲ್ತ್ ಇನ್ಶೂರೆನ್ಸ್ ಅನ್ನು ಗ್ರಾಹಕರಿಗೆ ಮಾಸಿಕ ಪ್ರೀಮಿಯಂ ಪಾವತಿ ಯೋಜನೆಯೊಂದಿಗೆ ನೀಡಲಾಗುತ್ತದೆ. ಈ ಮೂಲಕ ಈ ಹೆಜ್ಜೆಯನ್ನು ಪ್ರಾರಂಭಿಸಿದ ಮೊದಲಿಗ ಎಂಬ ಹೆಸರನ್ನು PhonePe ಪಡೆದುಕೊಂಡಿದೆ. ಇದು ಉದ್ಯಮದಲ್ಲೇ ಮೊದಲ-ರೀತಿಯ ಉಪಕ್ರಮವಾಗಿದೆ. ಬಳಕೆದಾರರು ತಮ್ಮ ಪ್ರೀಮಿಯಂ ಅನ್ನು ಗಕಿಖ ಆಟೋಪೇ ಮ್ಯಾಂಡೇಟ್ನೊಂದಿಗೆ ಪಾವತಿಸಲು ಆಯ್ಕೆ ಮಾಡಬಹುದು ಮತ್ತು ಹೆಚ್ಚಿನ ಅನುಕೂಲತೆಯನ್ನು ಪಡೆಯಬಹುದು. ಕ್ಬುಠಟಿಜಕಜ ನ ಹೆಲ್ತ್ ಇನ್ಶೂರೆನ್ಸ್ನ ಈ ವಿಸ್ತರಣೆಯು ಸಣ್ಣ ಮಾಸಿಕ ಪಾವತಿಗಳು ಬಳಕೆದಾರರಿಗೆ ಆರ್ಥಿಕ ಒತ್ತಡವನ್ನು ನಿವಾರಿಸುತ್ತದೆ ಎಂಬ ತಿಳುವಳಿಕೆಯಿಂದ ಪ್ರೇರೇಪಿಸಲ್ಪಟ್ಟಿದೆ. ಈ ವಿಧಾನವು ಅವರ ಹಣಕಾಸಿನ ಮೇಲೆ ಹೊರೆಯಾಗದಂತೆ ಕಾಂಪ್ರಹೆನ್ಸಿವ್ ಹೆಲ್ತ್ ಇನ್ಶೂರೆನ್ಸ್ ಅನ್ನು ಪಡೆಯಲು ಅವರಿಗೆ ಸಹಕಾರಿಯಾಗುತ್ತದೆ. ಸ್ಟಾರ್ ಕಾಂಪ್ರಹೆನ್ಸಿವ್ ಇನ್ಶೂರೆನ್ಸ್ ಪಾಲಿಸಿಯು ಅತ್ಯಂತ ಜನಪ್ರಿಯ ಮತ್ತು ಹೆರಿಗೆ ಕವರೇಜ್ ಸೇರಿದಂತೆ ಪ್ರಯೋಜನಗಳನ್ನು ಹೊಂದಿರುವ ಪವರ್-ಪ್ಯಾಕ್ಡ್ ಇನ್ಶೂರೆನ್ಸ್ ಪ್ಲ್ಯಾನ್ ಆಗಿದೆ.

## ಬೇಬಿಕಾರ್ನ್ ಪಲಾವ್

### ಪಾಕ ಶಾಲೆ



### ಬೇಕಾಗಿರುವ ಪದಾರ್ಥ

ಎಣ್ಣೆ- ಸ್ವಲ್ಪ, ಬಾಸುಮತಿ ಅಕ್ಕಿ- 1ಕಪ್, ಈರುಳ್ಳಿ-2, ಬೇಬಿಕಾರ್ನ್ -6, ಬಟಾಣಿ-1ಚಿಕ್ಕ ಕಪ್, ಮೆಣಸಿನ ಕಾಯಿ- 5, ಖಾರದಪುಡಿ-1ಚಮಚ, ಬೆಳ್ಳುಳ್ಳಿ ಶುಂಠಿಪೇಸ್ಟ್- 1ಚಮಚ, ಚಕ್ಕೆ-1, ಲವಂಗ-3, ಏಲಕ್ಕಿ ಪುಡಿ- ಚಿಟಿಕೆ, ಪಲಾವ್ ಎಲೆ- ಸ್ವಲ್ಪ, ದನಿಯಾಪುಡಿ- 1ಚಮಚ, ಜೀರಿಗೆಪುಡಿ-1ಚಮಚ, ಗರಂಮಸಾಲೆ-1ಚಮಚ, ಪುದಿನಾ- ಸ್ವಲ್ಪ, ಕೊತ್ತಂಬರಿ- ಸ್ವಲ್ಪ.

### ಮಾಡುವ ವಿಧಾನ

ಮೊದಲಿಗೆ ಅಕ್ಕಿಯನ್ನು ತೊಳೆದಿಟ್ಟುಕೊಳ್ಳಿ. ಈರುಳ್ಳಿಯನ್ನು ಉದ್ದುದ್ದವಾಗಿ ಕತ್ತರಿಸಿಕೊಳ್ಳಿ. ಆ ನಂತರ ಬಾಣಲೆಯಲ್ಲಿ ಎಣ್ಣೆ ಹಾಕಿ ಅದರಲ್ಲಿ ಬೇಬಿ ಕಾರ್ನ್ ಕೆಂಪಗೆಯಾಗುವರೆಗೆ ಹುರಿದು ಬಳಿಕ ಬೇರೆ ಪಾತ್ರೆಯಲ್ಲಿ ಹಾಕಿಟ್ಟುಕೊಳ್ಳಿ. ಕುಕ್ಕರ್ನಲ್ಲಿ ಎಣ್ಣೆ ಹಾಕಿ ಅದರಲ್ಲಿ ಈರುಳ್ಳಿ ಹಾಕಿ ಕೆಂಬಣ್ಣ ಬರುವ ತನಕ ಹುರಿಯಿರಿ ಅದಕ್ಕೆ ಬೆಳ್ಳುಳ್ಳಿ ಶುಂಠಿಪೇಸ್ಟ್, ಹಸಿ ಮೆಣಸಿನಕಾಯಿ, ಬಟಾಣಿ ಹಾಕಿ ಹುರಿಯಿರಿ, ಬಳಿಕ ಖಾರದ ಪುಡಿ, ಜೀರಿಗೆಪುಡಿ, ಗರಂಮಸಾಲೆ, ದನಿಯಾ ಪುಡಿಗಳನ್ನು ಹಾಕಬೇಕು. ನಂತರ ಬೇಬಿಕಾರ್ನ್ ಹಾಗೂ ಅಕ್ಕಿಯನ್ನು ಹಾಕಿ ಅಗತ್ಯವಿದ್ದಷ್ಟು ನೀರು ಹಾಕಿ ಎರಡು ವಿಶಲ್ ಬೇಯಿಸಿ. ಇದಾದ ಬಳಿಕ ಚೆನ್ನಾಗಿ ಮಿಕ್ಸ್ ಮಾಡಿ ಅದರ ಮೇಲೆ ಚಿಕ್ಕದಾಗಿ ಕತ್ತರಿಸಿದ ಪುದಿನಾ ಮತ್ತು ಕೊತ್ತಂಬರಿ ಸೊಪ್ಪನ್ನು ಉದುರಿಸಿ ಬಿಡಿ. ಸೇವಿಸಲು ಬೇಬಿ ಕಾರ್ನ್ ಪಲಾವ್ ರೆಡಿ.

## ಇಟ್ಸ್ ಕಲರ್ ಫುಲ್. ಇಟ್ಸ್ ಪವರ್ ಫುಲ್ ಅಭಿಯಾನಕ್ಕೆ ನಟ ಯಶ್ ಚಾಲನೆ



ಮುಂಚೂಣಿಯ ಪೇಂಟ್ಸ್ ಮತ್ತು ಕೋಟಿಂಗ್ಸ್ ಕಂಪನಿ ಹಾಗೂ ಡುಲಕ್ಸ್ ಪೇಂಟ್ಸ್ ಉತ್ಪಾದಕರಾದ ಅಕ್ಜೊನೊಬೆಲ್ ಇಂಡಿಯಾ ಖ್ಯಾತ ನಟ ಯಶ್ ಅವರನ್ನು ಭಾರತದಲ್ಲಿ ಡುಲಕ್ಸ್ ವೆದರ್ ಶೀಲ್ಡ್ ಎಕ್ಸ್ಟೀರಿಯರ್ ಎಮಲ್ಷನ್ ಗಳಿಗೆ ಹೊಸ ಬ್ರಾಂಡ್ ರಾಯಭಾರಿಯಾಗಿ ಸ್ವಾಗತಿಸಿತು. ಅಕ್ಜೊನೊಬೆಲ್ ಇಂಡಿಯಾದ ಅಧ್ಯಕ್ಷ ಹಾಗೂ ವ್ಯವಸ್ಥಾಪಕ ನಿರ್ದೇಶಕ ರಾಜೀವ್ ರಾಜ್ ಗೋಪಾಲ್, ''ನಮ್ಮ ಕುಟುಂಬಕ್ಕೆ ರಾಕಿಂಗ್ ಸ್ಟಾರ್ ಯಶ್ ಅವರನ್ನು ಸ್ವಾಗತಿಸಲು ಬಹಳ ರೋಮಾಂಚನ ಹೊಂದಿದ್ದೇವೆ. ಅವರ ಡುಲಕ್ಸ್ ವೆದರ್ ಶೀಲ್ಡ್ ನ ಆವಿಷ್ಕಾರದ ವಿಶ್ವಾಸದಿಂದ ಹುಟ್ಟಿದ ಸರಿಸಾಟಿ ಇರದ ಕಾರ್ಯಕ್ಷಮತೆ ಮತ್ತು ಸ್ವಂತಿಕೆಯನ್ನು ಪರಿಪೂರ್ಣವಾಗಿ ಹೊಂದಿದ್ದಾರೆ. ನಿಜವಾದ ಸೂಪರ್ ಸ್ಟಾರ್ ಯಶ್ ಭಾರತದಾದ್ಯಂತ ಕೋಟ್ಯಂತರ ಅಭಿಮಾನಿಗಳ ಪ್ರೀತಿ ಸಂಪಾದಿಸಿದ್ದುಅದು ನಮ್ಮ ಪ್ರತಿಮಾತ್ಮಕ ಡುಲಕ್ಸ್ ವೆದರ್ ಶೀಲ್ಡ್ ಎಕ್ಸ್ ಟೀರಿಯರ್ ಎಮಲ್ಷನ್ ನಂತೆಯೇ ಇದೆ'' ಎಂದರು. ಯಶ್ ಸೇರ್ಪಡೆಯಿಂದ ಅಕ್ಜೊನೊಬೆಲ್ ದಿಟ್ಟ ಸೌಂದರ್ಯಪ್ರಜ್ಞೆಯೊಂದಿಗೆ ಉನ್ನತ ಕಾರ್ಯಕ್ಷಮತೆ ನಿರೀಕ್ಷಿಸುವ ತನ್ನ ಮುಂಚೂಣಿಯ ವೆದರ್ ಶೀಲ್ಡ್ ಎಕ್ಸ್ಟೀರಿಯರ್ ಎಮಲ್ಷನ್ ಗಳೊಂದಿಗೆ ಭಾರತೀಯ ಗ್ರಾಹಕರ ಬಾಂಧವ್ಯ ಮತ್ತಷ್ಟು ಸದೃಢಗೊಳಿಸುವ ಗುರಿ ಹೊಂದಿದೆ. ಸೂಪರ್ ಸ್ಟಾರ್ ಯಶ್, ''ಪ್ರತಿಯೊಂದು ಪಾತ್ರವೂ ಅದರಲ್ಲಿ ಸ್ಫೂರ್ತಿ ತುಂಬುವ, ಗಮನ ಸೆಳೆಯುವ ಮತ್ತು ಮನರಂಜಿಸುವ ಸಾಮರ್ಥ್ಯ ಹೊಂದಿರುತ್ತದೆ. ನನ್ನ ಮಹತ್ತರ ಶಕ್ತಿ ಇರುವುದು ಪ್ರೇಕ್ಷಕರ ನಿರೀಕ್ಷೆಗಳಿಗೆ ಹುಸಿಯಾಗದಂತೆ ಶ್ರಮಿಸುವುದರಲ್ಲಿ. ಡುಲಕ್ಸ್ ವೆದರ್ ಶೀಲ್ಡ್ ಎಕ್ಸ್ಟೀರಿಯರ್ ಎಮಲ್ಷನ್ ಗಳಂತೆಯೇ ನಾನು ನನ್ನ ಮೌಲ್ಯಗಳಿಗೆ ಬದ್ಧವಾಗಿದ್ದು ಹಲವರ ಜೀವನಗಳಿಗೆ ಶಕ್ತಿ ಮತ್ತು ಬಣ್ಣಗಳನ್ನು ಸೇರ್ಪಡೆ ಮಾಡುವುದರಲ್ಲಿ ನಂಬಿಕೆ ಇರಿಸಿದ್ದೇನೆ. ಡುಲಕ್ಸ್ ವೆದರ್ ಶೀಲ್ಡ್ ನೊಂದಿಗೆ ಅದರ 'ಇಟ್ಸ್ ಕಲರ್ ಫುಲ್. ಇಟ್ಸ್ ಪವರ್ ಫುಲ್' ಕಥೆಯೊಂದಿಗೆ ಬರಲು ಬಹಳ ಸಂತೋಷ ಹೊಂದಿದ್ದೇನೆ. ಜೀವನವನ್ನು ಒಂದೇ ಬಣ್ಣದಲ್ಲಿ ಜೀವಿಸದೇ ಇರುವಾಗ ನಮ್ಮ ಮನೆಗಳೇಕೆ ಒಂದೇ ಬಣ್ಣದಲ್ಲಿರಬೇಕು'' ಎನ್ನುತ್ತಾರೆ. ಮುಲ್ಲೆನ್ ಲಿಂಟಾಸ್ ದೆಹಲಿ ರೂಪಿಸಿದ ಈ ಅಭಿಯಾನವು ವರದಿಗಾರರು ಯಶ್ ಅವರನ್ನು ಹೇಗೆ ಕಲರ್ ಫುಲ್ ಹಾಗೂ ಪವರ್ ಫುಲ್ ಆಗಬಹುದು ಎಂದು ಕೇಳುವುದರಿಂದ ಪ್ರಾರಂಭವಾಗುತ್ತದೆ. ತನ್ನ ನೈಜ ಜೀವನಕ್ಕಿಂತ ದೊಡ್ಡ ರೀತಿಯ ಸ್ಟೈಲ್ ನಲ್ಲಿ ಯಶ್ ತಡೆಯಿರದ ಬಿಸಿಲು, ಅಪಾರ ಮಳೆ ಮತ್ತು ವಿಪರೀತ ಬಿರುಗಾಳಿಯ ಎಲ್ಲ ಮಾನದಂಡಗಳಲ್ಲೂ ಡುಲಕ್ಸ್ ವೆದರ್ ಶೀಲ್ಡ್ ಪವರ್ ಫ್ಲೆಕ್ಸ್ ಅನ್ನು ಪರೀಕ್ಷಿಸುತ್ತಾರೆ. ಟ್ರಿಪಲ್ ಡಿಫೆನ್ಸ್ ಟೆಕ್ನಾಲಜಿಯನ್ನು ಹೊಂದಿರುವ ಡುಲಕ್ಸ್ ವೆದರ್ ಶೀಲ್ಡ್ ಪವರ್ ಫ್ಲೆಕ್ಸ್ ಪ್ರತಿ ಛಾಯೆಯೂ ಮನೆಯ ಹೊರಾಂಗಣಗಳು ಉಜ್ವಲ ಮತ್ತು ದೀರ್ಘಕಾಲ ಸಂರಕ್ಷಿತವಾಗಿರುವುದನ್ನು ದೃಢೀಕರಿಸುತ್ತವೆ. ಆದ್ದರಿಂದಲೇ ಅದು ''ಇಟ್ಸ್ ಕಲರ್ ಫುಲ್.ಇಟ್ಸ್ ಪವರ್ ಫುಲ್'ಎನ್ನಲಾಗುತ್ತದೆ'' ಎಂದರು. ಉದ್ಯಮದ ಒಳನೋಟಗಳನ್ನು ಹಂಚಿಕೊಂಡ ಅಕ್ಜೊನೊಬೆಲ್ ಇಂಡಿಯಾದ ಮಾರ್ಕೆಟಿಂಗ್ ಅಂಡ್ ಸೇಲ್ಸ್ ಡೈರೆಕ್ಟರ್ ರೋಹಿತ್ ತೋಟ್ಲಾ, ''ಕಳೆದ 25 ವರ್ಷಗಳಿಗೂ ಮೇಲ್ಪಟ್ಟು ಡುಲಕ್ಸ್ ವೆದರ್ ಶೀಲ್ಡ್ ಗೃಹ ಹೊರಾಂಗಣಕ್ಕೆ ಮುಂಚೂಣಿಯ ತಂತ್ರಜ್ಞಾನಗಳಿಗೆ ಮತ್ತೊಂದು ಹೆಸರಾಗಿದೆ. ಹೊರಾಂಗಣ ಎಮಲ್ಷನ್ ಗಳು ಭಾರತದಲ್ಲಿ ಅಕ್ಜೊನೊಬೆಲ್ ನ ಅಲಂಕಾರಿಕ ಪೇಂಟ್ ಉದ್ಯಮದ ಅತ್ಯಂತ ದೊಡ್ಡ ಕೊಡುಗೆ ನೀಡುವವರಲ್ಲಿ ಒಂದಾಗಿದ್ದು ನಾವು ನಮ್ಮ ಗ್ರಾಹಕರ ಸಂಪರ್ಕವನ್ನು ಯಶ್ ಅವರ ಶಕ್ತಿಯೊಂದಿಗೆ ಮತ್ತಷ್ಟು ಹೆಚ್ಚಿಸುವ ಉದ್ದೇಶ ಹೊಂದಿದ್ದು ಇದು ನಮ್ಮ ಬ್ರಾಂಡ್ ವ್ಯಾಪ್ತಿ ವಿಸ್ತರಣೆಗೆ ಪೂರಕವಾಗಿರುತ್ತದೆ'' ಎಂದರು. ಇಟ್ಸ್ ಕಲರ್ ಫುಲ್. ಇಟ್ಸ್ ಪವರ್ ಫುಲ್' ನಿರೂಪಣೆ ಕುರಿತು ಒಳನೋಟಗಳನ್ನು ಹಂಚಿಕೊಂಡ ಅಕ್ಜೊನೊಬೆಲ್ ಡೆಕೋರೇಟಿವ್ ಪೇಂಟ್ಸ್-ದಕ್ಷಿಣ ಏಷ್ಯಾದ ಮಾರ್ಕೆಟಿಂಗ್ ನಿರ್ದೇಶಕಿ ವಂದನಾ ಕೃಷ್ಣಿಯಾ, ''ಹಬ್ಬಗಳು, ಸಂಭ್ರಮಾಚರಣೆಗಳು, ಬ್ಲೂ ಸಿಟಿ ಎಂದು ಗುರುತಿಸುವ ಶತಮಾನದ ಹಳೆಯ ನಗರ, ನಮ್ಮ ಮನೆಗಳು ಅಥವಾ ನಮ್ಮ ಜೀವನಗಳಲ್ಲಿ ಬಣ್ಣಗಳು ಭಾರತದಲ್ಲಿ ಮತ್ತು ಪ್ರತಿ ಭಾರತೀಯನ ಗುರುತಿನ ಸಂವೇದನೆಯಲ್ಲಿ ಬೆರೆತು ಹೋಗಿವೆ. ಡುಲಕ್ಸ್ ವೆದರ್ ಶೀಲ್ಡ್ ಪವರ್ ಫ್ಲೆಕ್ಸ್ ನ ಶಕ್ತಿಯುತ ರುಜುವಾತುಗಳ ಮೂಲಕ ಈ ಅಭಿಯಾನವು ಬಣ್ಣಗಳೊಂದಿಗೆ ಭಾರತದ ಪ್ರೀತಿಯನ್ನು ಸಂಭ್ರಮಿಸುತ್ತದೆ ಮತ್ತು ಅದನ್ನು ಯಶ್ ಅವರಿಗಿಂತ ಚೆನ್ನಾಗಿ ಎತ್ತಿ ತೋರಿಸುವವರು ಯಾರಿದ್ದಾರೆ ಎನ್ನುತ್ತಾರೆ.

## ಮೈಗ್ರೇನ್ ನೋವಿನಿಂದ ಬಳಲುತ್ತಿದ್ದೀರಾ?



ಹೆಲ್ತ್ ಟಿಪ್ಸ್

ನಿರಂತರ ಕೆಲಸ ಮತ್ತು ಒತ್ತಡದ ಜೊತೆಗೆ ಅನೇಕ ಸಮಸ್ಯೆಗಳಿಂದ ಅನೇಕರು ಬಳಲುತ್ತಿರುತ್ತಾರೆ. ಅಂತಹವರಿಗೆ ತಲೆನೋವು ಕೂಡ ಸಾಮಾನ್ಯ ಸಮಸ್ಯೆಯಾಗಿರುತ್ತದೆ. ಆದರೆ ನೋವು ಮುಂದುವರಿದರೆ, ಅದು ಗಂಭೀರ ಪರಿಣಾಮಗಳನ್ನು ಉಂಟುಮಾಡಬಹುದು. ಕೆಲವೊಮ್ಮೆ ಕೆಟ್ಟ ಜೀವನಶೈಲಿ, ಅನಾರೋಗ್ಯಕರ ಆಹಾರ, ಮೊಬೈಲ್-ಲ್ಯಾಪ್ ಟಾಪ್ ನಿರಂತರ ಬಳಕೆಯಿಂದ ಕೂಡ ಈ ಸಮಸ್ಯೆ ಎದುರಾಗಬಹುದು. ಸಾಮಾನ್ಯವಾಗಿ ಕೆಲವರು ಮೈಗ್ರೇನ್ ನೋವಿಗೆ ನೋವು ನಿವಾರಕಗಳನ್ನು ತೆಗೆದುಕೊಳ್ಳುತ್ತಾರೆ, ಆದರೆ ಔಷಧಿಗಳಿಗಿಂತ ಹೆಚ್ಚಾಗಿ ಕೆಲವು ಮನೆಮದ್ದುಗಳ ಸಹಾಯದಿಂದ ನೋವಿನಿಂದ ಪರಿಹಾರವನ್ನು ಪಡೆಯಬಹುದು. ಮೈಗ್ರೇನ್ ನೋವಿನಿಂದ ಪರಿಹಾರ ಪಡೆಯಲು ಕೆಲವು ಮನೆಮದ್ದುಗಳಿವೆ. ಚಿಟಿಕೆಯಲ್ಲಿ ಉಪಶಮನ ನೀಡುವ ಐದು ಪ್ರಮುಖ ಮನೆಮದ್ದುಗಳ ಬಗ್ಗೆ ಮಾಹಿತಿ ಇಲ್ಲಿವೆ:

**ಶುಂಠಿ:** ಶುಂಠಿಯಲ್ಲಿರುವ ಅಗತ್ಯ ಅಂಶಗಳು ಇತರ ವಸ್ತುಗಳಿಗಿಂತ ಹೆಚ್ಚು, ಇದು ಮೈಗ್ರೇನ್ ನೋವಿನಿಂದ ಪರಿಹಾರವನ್ನು ನೀಡುತ್ತದೆ. ಶುಂಠಿಯ ರಸವನ್ನು ಹೊರತೆಗೆದು ಬಿಸಿನೀರಿನೊಂದಿಗೆ ಬೆರೆಸಿ ಕುಡಿಯಬಹುದು. ಇದು ನೋವಿನಿಂದ ಪರಿಹಾರವನ್ನೂ ನೀಡುತ್ತದೆ.

**ಬೆಳ್ಳುಳ್ಳಿ:** ಬೆಳ್ಳುಳ್ಳಿ ಉರಿಯೂತದ ಗುಣಲಕ್ಷಣಗಳನ್ನು ಹೊಂದಿದೆ, ಇದು ನೋವನ್ನು ಕಡಿಮೆ ಮಾಡಲು ಸಹಾಯ ಮಾಡುತ್ತದೆ. ಬೆಳ್ಳುಳ್ಳಿ ರಸವನ್ನು ಜೇನುತುಪ್ಪದೊಂದಿಗೆ ಬೆರೆಸಿ ಸೇವಿಸುವುದರಿಂದ ಪ್ರಯೋಜನಕಾರಿಯಾಗಿದೆ.

**ಜೇನುತುಪ್ಪ:** ಜೇನುತುಪ್ಪವು ಮೈಗ್ರೇನ್ ನೋವನ್ನು ಕಡಿಮೆ ಮಾಡಲು ಸಹಾಯ ಮಾಡುವ ಉತ್ಕರ್ಷಣ ನಿರೋಧಕ ಮತ್ತು ಉರಿಯೂತದ ಗುಣಲಕ್ಷಣಗಳನ್ನು ಹೊಂದಿದೆ. ನೀವು ಬೆಳಿಗ್ಗೆ ಮತ್ತು ಸಂಜೆ ಒಂದು ಚಮಚ ಜೇನುತುಪ್ಪವನ್ನು ಸೇವಿಸಿದರೆ ಸಾಕು.

**ತೆಂಗಿನ ಎಣ್ಣೆ:** ತೆಂಗಿನ ಎಣ್ಣೆ ಮಸಾಜ್'ಗೆ ಉತ್ತಮ ಆಯ್ಕೆಯಾಗಿದೆ. ಇದರಿಂದ ತಲೆಗೆ ಮಸಾಜ್ ಮಾಡಿದರೆ ನೋವಿನಿಂದ ಮುಕ್ತಿ ಪಡೆಯಬಹುದು.

## ಐಪಿಎಲ್ ಜೊತೆ ತನ್ನ ಅಧಿಕೃತ ಪಾಲುದಾರಿಕೆ ಘೋಷಿಸಿದ ಏಂಜೆಲ್ ಒನ್




ತಂತ್ರಜ್ಞಾನ- ನೇತೃತ್ವದ ಹಣಕಾಸು ಸೇವಾ ಸಂಸ್ಥೆ ಏಂಜೆಲ್ ಒನ್ ಲಿಮಿಟೆಡ್ (ಏಂಜೆಲ್ ಒನ್), ಇಂಡಿಯನ್ ಪ್ರೀಮಿಯರ್ ಲೀಗ್(ಐಪಿಎಲ್) ನೊಂದಿಗೆ ತನ್ನ ಪಾಲುದಾರಿಕೆಯನ್ನು ಘೋಷಿಸಿದೆ. 2024 ರಿಂದ 2028 ರವರೆಗೆ ಐದು ವರ್ಷಗಳ ಅವಧಿಯ ಕಾಲ ಹಣಕಾಸು ಸೇವೆಗಳ ವಿಭಾಗದಲ್ಲಿ ಐಪಿಎಲ್ನ ಅಸೋಸಿಯೇಟ್ ಪಾರ್ಟ್ನರ್ ಆಗಿ ಕಂಪನಿಯು ಕಾರ್ಯ ನಿರ್ವಹಿಸುತ್ತದೆ. ಈ ಸಹಯೋಗದ ಮೂಲಕ, ಏಂಜೆಲ್ ಒನ್ ಐಪಿಎಲ್ ವೇದಿಕೆಯ ಮೂಲಕ ವೈವಿಧ್ಯಮಯ ಕ್ರೀಡಾ ಪ್ರೇಕ್ಷಕರಲ್ಲಿ ವಿಶೇಷವಾಗಿ ಯುವ ಭಾರತೀಯ ಕ್ರಿಕೆಟ್ ಪ್ರೇಕ್ಷಕರಲ್ಲಿ ಆರ್ಥಿಕ ಜಾಗೃತಿ ಮತ್ತು ಸಬಲೀಕರಣ ಕುರಿತು ಅರಿವು ಮೂಡಿಸುವ ಗುರಿಯನ್ನು ಹೊಂದಿದೆ.

ಐಪಿಎಲ್ ಪ್ರಾಯೋಜಕತ್ವವು ಏಂಜೆಲ್ ಒನ್ಗೆ ತನ್ನ ಬ್ಯಾಂಡ್ ಅನ್ನು ದೊಡ್ಡ ಪ್ರಮಾಣದಲ್ಲಿ ಪ್ರದರ್ಶಿಸಲು ಮತ್ತು ತಲುಪಿಸಲು ಬಲವಾದ ಅವಕಾಶವನ್ನು ಒದಗಿಸುತ್ತದೆ. ಈ ಕ್ರೀಡಾವಳಿಯನ್ನು ದೂರದರ್ಶನ ಮತ್ತು ಡಿಜಿಟಲ್ ಪ್ಲಾಟ್ಫಾರ್ಮ್ಗಳ ಮೂಲಕ ವೀಕ್ಷಿಸುವ 800 ಮಿಲಿಯನ್★ ವೀಕ್ಷಕರನ್ನು ತಲುಪುವ ಉದ್ದೇಶ ಹೊಂದಲಾಗಿದೆ. ಬಿಸಿಸಿಐ ಜೊತೆಗಿನ ಈ ಪಾಲುದಾರಿಕೆಯು ಏಂಜೆಲ್ ಒನ್ನ ದೀರ್ಘಾವಧಿಯ ದೂರದೃಷ್ಟಿ ಹೊಂದಿದ್ದು, ಬೆಳವಣಿಗೆ ಮತ್ತು ವಿಸ್ತರಣೆಗಾಗಿ ಹೊಸ ಮಾರ್ಗಗಳನ್ನು ತೆರೆಯುವ ಬದ್ಧತೆಯನ್ನು ಸೂಚಿಸುತ್ತದೆ. ನಾವು ಜೆನ್ ಝಡ್ ಮತ್ತು ಯಂಗ್ ಮಿಲೇನಿಯಲ್ಸ್‌ಗಳ ಮೇಲೆ ಗಮನ ಕೇಂದ್ರೀಕರಿಸಲು ಉದ್ದೇಶಿಸುವ ಸಲುವಾಗಿ ಮಾಡಿಕೊಂಡ ಈ ಸಹಯೋಗವು ನಮ್ಮ ಪ್ರೇಕ್ಷಕರೊಂದಿಗೆ ಸಂಪರ್ಕ ಸಾಧಿಸುವ ನಿಟ್ಟಿನಲ್ಲಿನ ಮಹತ್ವದ ಮೈಲಿಗಲ್ಲಾಗಿ ಗುರುತಿಸಬಹುದಾಗಿದೆ. ಏಂಜೆಲ್ ಒನ್ ನ ಪಾಲುದಾರಿಕೆಯು ಐಪಿಎಲ್ನ ವಿಸ್ತಾರವಾದ ವ್ಯಾಪ್ತಿಯಲ್ಲಿ ಬ್ಯಾಂಡ್ ಬಾಂಧವ್ಯವನ್ನು ಬೆಳೆಸುವ, ಬ್ರಾಂಡ್ ನಲ್ಲಿ ತೊಡಗಿಸಿಕೊಳ್ಳುವಿಕೆಯನ್ನು ಹೆಚ್ಚಿಸುವ ಮತ್ತು ಜನಸಂಖ್ಯೆಯ ನಡುವೆ ತನ್ನ ಸ್ಥಾನವನ್ನು ಗಟ್ಟಿಗೊಳಿಸುವ ಗುರಿಯನ್ನು ಹೊಂದಿದೆ.

ಐಪಿಎಲ್ 2024ರ ಆರು ಅಧಿಕೃತ ಅಸೋಸಿಯೇಟ್ ಪಾರ್ಟ್ನರ್ ಗಳಲ್ಲಿ ಒಬ್ಬರಾದ ಏಂಜೆಲ್ ಒನ್, ತನ್ನ ನವೀನ ಸೂಪರ್ ಆಪ್ ಪ್ಲಾಟ್ ಫಾರ್ಮ್ ಅನ್ನು ಉತ್ತೇಜಿಸುವ ಮೂಲಕ ಹಣಕಾಸು ಹೂಡಿಕೆ ಮತ್ತು ಟ್ರೇಡಿಂಗ್ ಅನ್ನು ಸರಳಗೊಳಿಸುವ ತನ್ನ ಸಮರ್ಪಣೆಯನ್ನು ಮುಂದುವರೆಸಿದೆ. ಏಂಜೆಲ್ ಒನ್ ಖಚುಠಊಚಿಟಜುಚಿಖಊಡಿಜಡಿ (ರಹೋ ಹಮೇಶಾ ಸೂಪರ್) ಎಂಬ ಅಭಿಯಾನವನ್ನು ಇತ್ತೀಚೆಗೆ ಆರಂಭಿಸಿದ್ದು, ಹೂಡಿಕೆ ಮತ್ತು ಟ್ರೇಡಿಂಗ್ ಕ್ಷೇತ್ರದಲ್ಲಿ ಕ್ರಾಂತಿಕಾರಕ ಬದಲಾವಣೆ ತರುವ ಉದ್ದೇಶ ಹೊಂದಿದೆ. ಏಂಜೆಲ್ ಒನ್ ಉನ್ನತ ದರ್ಜೆಯ ವೇಗ, ಭದ್ರತೆ ಮತ್ತು ವಿಶ್ವಾಸಾರ್ಹತೆಯನ್ನು ಒದಗಿಸುವ ಮೂಲಕ ಬಳಕೆದಾರರ ಅನುಭವವನ್ನು ಹೆಚ್ಚಿಸುವ ಉದ್ದೇಶ ಹೊಂದಿದೆ. ಈ ಮೂಲಕ ತಮ್ಮ ನೆಚ್ಚಿನ ಕ್ರಿಕೆಟಿಗರ ಸ್ಥಿರ ಪ್ರದರ್ಶನದಲ್ಲಿ ಕ್ರಿಕೆಟ್ ಅಭಿಮಾನಿಗಳು ಹೊಂದಿರುವ ನಂಬಿಕೆ ಮತ್ತು ಭರವಸೆಯನ್ನು ಪ್ರತಿಬಿಂಬಿಸುತ್ತದೆ. ಏಂಜೆಲ್ ಒನ್ ಲಿಮಿಟೆಡ್ನ ಅಧ್ಯಕ್ಷ ಮತ್ತು ವ್ಯವಸ್ಥಾಪಕ ನಿರ್ದೇಶಕರಾದ ಶ್ರೀ. ದಿನೇಶ್ ಡಿ. ಠಕ್ಕರ್ ಅವರು ಮಾತನಾಡಿ, ''ಐಪಿಎಲ್ ಒಂದು ಗೌರವಾನ್ವಿತ ಪಂದ್ಯಾವಳಿಯಾಗಿದ್ದು, ಇದು ಇತ್ತೀಚಿನ ವರ್ಷಗಳಲ್ಲಿ ಅಪಾರವಾದ ಖ್ಯಾತಿ ಮತ್ತು ಅಗಾಧವಾದ ಭಾಗವಹಿಸುವಿಕೆ ಈ ಎರಡಕ್ಕೂ ಸಾಕ್ಷಿಯಾಗಿದೆ. ಈ ಬೆಳವಣಿಗೆಯು ಭಾರತದಲ್ಲಿನ ಪ್ರಮುಖ ಫಿನ್ಟೆಕ್ ಸಂಸ್ಥೆಗಳಲ್ಲಿ ಒಬ್ಬರಾಗಿರುವ ಏಂಜೆಲ್ ಒನ್ ಬೆಳವಣಿಗೆಗೆ ಸಮಾನವಾಗಿ ಕಾಣುತ್ತದೆ. ನಮ್ಮ ಎಲ್ಲಾ ಗ್ರಾಹಕರ ಆರ್ಥಿಕ ಅಗತ್ಯಗಳನ್ನು ಪೂರೈಸುವ ಬಹು-ಸೇವಾ ವಲಯಕ್ಕೆ ಬೆಳವಣಿಗೆ ಹೊಂದುವುದರ ಕಡೆಗೆ ನಮ್ಮ ಪ್ರಾಥಮಿಕ ಗಮನವಿದೆ. ಈ ಪಾಲುದಾರಿಕೆಯು ಲಕ್ಷಾಂತರ ಭಾರತೀಯರನ್ನು ತಲುಪುವ ನಮ್ಮ ಪ್ರಯತ್ನಗಳನ್ನು ಬಲಪಡಿಸುತ್ತದೆ ಮತ್ತು ಬುದ್ಧಿವಂತ ಕ್ರಿಕೆಟ್ ಉತ್ಸಾಹಿಗಳ ಪೀಳಿಗೆಯಲ್ಲಿ ಆರ್ಥಿಕ ಸಬಲೀಕರಣವನ್ನು ಪ್ರೇರೇಪಿಸಲು ನಾವು ಉತ್ಸುಕರಾಗಿದ್ದೇವೆ ಎಂದು ಹೇಳಿದರು.

## ಮೊಡವೆ ಕಾಟಕ್ಕೆ ಪರಿಹಾರ

### ಬ್ಯೂಟಿ ಟಿಪ್ಸ್



ಹರೆಯ ಬಂದಾಗ ಮೊಡವೆ ಬರುವುದು ಸಹಜ. ಇದರಿಂದ ಆಗುವ ಮಾನಸಿಕ ಕಿರಿಕಿರಿ ಕಡಿಮೆಯೇನಲ್ಲ. ಕನ್ನಡಿಯಲ್ಲಿ ಮುಖ ನೋಡಿಕೊಂಡಾಗ ಮೊಡವೆ ಕಂಡರೆ ಮನಸ್ಸಿಗೆ ಏನೋ ಒಂಥರ, ಅದನ್ನು ಹೇಳಲಾಗದು. ಹೆಚ್ಚಿನ ಜನರಲ್ಲಿ ಮೊಡವೆ ಕಾಟ ಬಹಳವಾಗಿ ಕಾಡಿರುತ್ತವೆ. ಹರೆಯದವರಂತೂ ಮೊಡವೆ ಯಾಕಾದರೂ ಬಂತಪ್ಪ ಎಂದು ನಿಟ್ಟುಸಿರು ಬಿಡುತ್ತಾರೆ. ವಯಸ್ಕರಲ್ಲಿಯೂ ಮೊಡವೆ ಬರುವುದರಿಂದ ಕಿರಿಕಿರಿ ಅನುಭವಿಸುತ್ತಾ ಹಿಡಿಶಾಪ ಹಾಕುವವರೇ ಹೆಚ್ಚು. ಮೊಡವೆ ಬರಲು ಮುಖ್ಯ ಕಾರಣ ಟೆಸ್ಟೋಸ್ಟೆರಾನ್ ಎಂಬ ಹಾರ್ಮೋನು ಎನ್ನುತ್ತಾರೆ ತಜ್ಞರು. ವಿಭಿನ್ನವಾದ ತ್ವಚೆ ಬಳಕೆ ಉತ್ಪನ್ನಗಳನ್ನು ಬಳಸುವುದರಿಂದ, ಫೇಷಿಯಲ್ಸ್, ಬ್ಲಾಕ್ ಹೆಡ್ಸ್, ವೈಟ್ ಹೆಡ್ಸ್, ಕ್ರೀಮ್ ಗಳು, ಜಿಡ್ಡಿನ ಚರ್ಮ, ಯುವತಿಯರಲ್ಲಿ ಋತುಚಕ್ರ ಮೊದಲಾದ ಕಾರಣಗಳಿಂದ ಮೊಡವೆ ಬರುತ್ತವೆ. ಸೂಕ್ತವಿಲ್ಲದ ತ್ವಚೆ ಉತ್ಪನ್ನಗಳ ಬಳಸಬೇಡಿ. ಮೊಡವೆಯಿಂದ ದೂರವಾಗಲು ಆದಷ್ಟು ಸೂರ್ಯನ ಕಿರಣಗಳಿಂದ ದೂರವಿರಿ. ಜೊತೆಗೆ ಶುಷ್ಕ ತ್ವಚೆ, ಜಿಡ್ಡು ತ್ವಚೆ ಇರುವವರು ನಿಗದಿತ ಬೇಸ್ಡ್ ಉತ್ಪನ್ನಗಳನ್ನು ಬಳಸಬಹುದಾಗಿದೆ. ಜಿಡ್ಡು ಕಂಡು ಬಂದಾಗ ಮುಖ ತೊಳೆಯಿರಿ. ಆದರೆ ಮುಖದಲ್ಲಿ ಮೊಡವೆ ಬಂದಿತೆಂದು ನೀವೇ ವೈದ್ಯರಾಗಿ ಕಂಡ ಕಂಡ ಯಾವುದೇ ಔಷಧಿ ಹಚ್ಚದೇ ವೈದ್ಯರನ್ನು ಭೇಟಿಯಾಗಿ ಸಲಹೆ ಪಡೆಯಿರಿ. ಮೊಡವೆಗಳಿಂದ ದೂರವಿರಿ.

## ರಾಶಿ ಭವಿಷ್ಯ



ಜಯಶ್ರೀ.ಬಿ.ಆರ್
ಖ್ಯಾತ ಜ್ಯೋತಿಷಿ
ದೂರವಾಣಿ-9964739507
www.jyotishyavaastu.com

**ಮೇಷ:** ಆರ್ಥಿಕ ಅನುಕೂಲ, ಉತ್ತಮ ಪ್ರಶಂಸೆ, ತಾಯಿಯಿಂದ ಸಹಕಾರ, ಕೃಷಿಕರಿಗೆ ಅನುಕೂಲ.

**ವೃಷಭ:** ದಾಂಪತ್ಯದಲ್ಲಿ ಕಿರಿಕಿರಿ, ಅಧಿಕ ಕೋಪ ತಾಪಗಳು, ಉದ್ಯೋಗ ಬದಲಾವಣೆಯಲ್ಲಿ ಹಿನ್ನಡೆ, ಪಾಲುದಾರಿಕೆಯಲ್ಲಿ ಉತ್ತಮ ಅವಕಾಶ.

**ಮಿಥುನ:** ಶತ್ರು ಕಾಟ, ಸಾಲಬಾಧೆ, ಆರೋಗ್ಯದಲ್ಲಿ ವ್ಯತ್ಯಾಸ, ಕುಟುಂಬದಿಂದ ದೂರ, ಪ್ರಯಾಣದಲ್ಲಿ ಒತ್ತಡ.

**ಕಟಕ:** ಅನಿರೀಕ್ಷಿತ ಲಾಭ, ಪ್ರಯಾಣದಲ್ಲಿ ಅವಘಡ, ಮಾನಸಿಕ ಒತ್ತಡ, ವ್ಯವಹಾರದಲ್ಲಿ ಸಮಸ್ಯೆ.

**ಸಿಂಹ:** ಭೂಮಿ ವ್ಯವಹಾರದಲ್ಲಿ ಅನುಕೂಲ, ದೂರ ಪ್ರದೇಶದಲ್ಲಿ ಅನುಕೂಲ, ಪಾಲುದಾರಿಕೆಯಿಂದ ಯೋಗ ಫಲಗಳು, ತಂದೆಯಿಂದ ಸಹಕಾರ.

**ಕನ್ಯಾ:** ಮಿತ್ರರಿಂದ ಸಹಕಾರ, ಆರೋಗ್ಯದಲ್ಲಿ ಸಮಸ್ಯೆ, ಪ್ರಯಾಣದಲ್ಲಿ ಕಿರಿಕಿರಿ, ಭವಿಷ್ಯದ ಚಿಂತೆ.

**ತುಲಾ:** ದಾಂಪತ್ಯ ಕಲಹ, ಅನಿರೀಕ್ಷಿತ ಧನಾಗಮನ, ಕುಟುಂಬದಿಂದ ಸಹಕಾರ, ಉದ್ಯೋಗದಲ್ಲಿ ಪ್ರಗತಿ.

**ವೃಶ್ಚಿಕ:** ವ್ಯಾಪಾರ ವ್ಯವಹಾರದಲ್ಲಿ ಪ್ರಗತಿ, ಪಾಲುದಾರಿಕೆಯಲ್ಲಿ ಉತ್ತಮ ಅವಕಾಶ, ಸಾಲ ತೀರಿಸುವ ಯೋಚನೆ, ವಿದ್ಯಾಭ್ಯಾಸದಲ್ಲಿ ಪ್ರಗತಿ.

**ಧನಸ್ಸು:** ಸಾಲ ಸಿಗುವುದು ಕಷ್ಟ ಸಾಧ್ಯ, ಸೇವಾ ವೃತ್ತಿ ಉದ್ಯೋಗ ಪ್ರಾಪ್ತಿ, ಆರೋಗ್ಯದಲ್ಲಿ ವ್ಯತ್ಯಾಸ, ಬಾಲಗ್ರಹ ದೋಷ.

**ಮಕರ:** ಪ್ರೀತಿ ಪ್ರೇಮದಿಂದ ನೋವು, ಅನಿರೀಕ್ಷಿತ ಲಾಭ, ಮಕ್ಕಳಿಂದ ಯೋಗ ಫಲ, ವ್ಯಾಪಾರ ವ್ಯವಹಾರದಲ್ಲಿ ಅನುಕೂಲ.

**ಕುಂಭ:** ಅಧಿಕ ಒತ್ತಡ, ವಾಹನದ ಮೇಲೆ ಸಾಲದ ಆಲೋಚನೆ, ತಾಯಿ ಆರೋಗ್ಯದಲ್ಲಿ ವ್ಯತ್ಯಾಸ, ಉದ್ಯೋಗ ಅವಕಾಶ.

**ಮೀನ:** ತಂದೆಯಿಂದ ಸಹಕಾರ, ಪ್ರಯಾಣದಲ್ಲಿ ಅಡೆತಡೆಗಳು, ನೆರೆಹೊರೆಯವರಿಂದ ಸಮಸ್ಯೆ, ದೂರ ಪ್ರಯಾಣದಲ್ಲಿ ಅನುಕೂಲ.

## ಅಂತರಾಷ್ಟ್ರೀಯ ಆತ್ಮಸಾಕ್ಷಿಯ ದಿನ

ನಾವು ಪ್ರತಿ ಏಪ್ರಿಲ್ 5 ರಂದು ಅಂತರಾಷ್ಟ್ರೀಯ ಆತ್ಮಸಾಕ್ಷಿಯ ದಿನವನ್ನು ಆಚರಿಸುತ್ತೇವೆ. ಇದು ವಿಶ್ವಸಂಸ್ಥೆಯ ಜನರಲ್ ಅಸೆಂಬ್ಲಿಯಿಂದ ಮಾನವ ಆತ್ಮಸಾಕ್ಷಿಯ ಮಹತ್ವವನ್ನು ಸ್ಮರಿಸುವ ದಿನವಾಗಿದೆ. ಮಾನವನ ಆತ್ಮಸಾಕ್ಷಿಯು ಇತರ ಪ್ರಾಣಿ ಸಾಮ್ರಾಜ್ಯದಿಂದ ನಮ್ಮನ್ನು ಪ್ರತ್ಯೇಕಿಸುವ ಪ್ರಮುಖ ಬೌದ್ಧಿಕ ಗುಣವಾಗಿದೆ. ಮಾನವ ಮನಸ್ಸು ಅದ್ಭುತ ಮತ್ತು ಸಂಕೀರ್ಣ ಘಟಕವಾಗಿದೆ, ಮತ್ತು ಮಾನವ ಆತ್ಮಸಾಕ್ಷಿಯು ಇನ್ನೂ ಹೆಚ್ಚು. ಆತ್ಮಾವಲೋಕನ ಮತ್ತು ಸರಿಯಾದ ಕೆಲಸವನ್ನು ಮಾಡುವ ಮಹತ್ವವನ್ನು ಉತ್ತೇಜಿಸುವ ದಿನವಿದು. ಈ ದಿನವು ಮಾಡಬೇಕಾದ ತಿದ್ದುಪಡಿಗಳನ್ನು ಗುರುತಿಸುವ ಮೂಲಕ ಸಮಾಜದ ಸಾಮೂಹಿಕ ಒಳಿತನ್ನು ಸುಧಾರಿಸಲು ಸಹಾಯ ಮಾಡುತ್ತದೆ. ಆತ್ಮಸಾಕ್ಷಿಯು ಒಂದು ಸವಾಲಿನ ಮತ್ತು ಸಂಕೀರ್ಣ ಪರಿಕಲ್ಪನೆಯಾಗಿದೆ. ಇದನ್ನು ಸಾಮಾನ್ಯವಾಗಿ ಸರಿ ಮತ್ತು ತಪ್ಪುಗಳ ವ್ಯಕ್ತಿಯ ನೈತಿಕ ಪ್ರಜ್ಞೆ ಎಂದು ವಿವರಿಸಬಹುದು. ಇದು ಒಬ್ಬರ ನಡವಳಿಕೆಗೆ ಮಾರ್ಗದರ್ಶಿಯೂ ಆಗಿದೆ. ಒಬ್ಬ ವ್ಯಕ್ತಿಯು ಇನ್ನೊಬ್ಬರಿಂದ ಕದಿಯಬಾರದು ಅಥವಾ ಪರೀಕ್ಷೆಯಲ್ಲಿ ಮೋಸ ಮಾಡಬಾರದು ಎಂಬ ವೈಯಕ್ತಿಕ ನೀತಿಗಳು ಆತ್ಮಸಾಕ್ಷಿಯ ಉತ್ತಮ ಉದಾಹರಣೆಯಾಗಿದೆ. ಬಹ್ರೇನ್ ಸಾಮ್ರಾಜ್ಯದ ಪ್ರಧಾನ ಮಂತ್ರಿಯಾದ ಅವರ ರಾಯಲ್ ಹೈನೆಸ್ ಪ್ರಿನ್ಸ್ ಖಲೀಫಾ ಬಿನ್ ಸಲ್ಮಾನ್ ಅಲ್ ಖಲೀಫಾ ಅವರು ವಿಶ್ವಸಂಸ್ಥೆಯ ಸಾಮಾನ್ಯ ಸಭೆಯ 73 ನೇ ಅಧಿವೇಶನದಲ್ಲಿ ಉಪಕ್ರಮವನ್ನು ಪ್ರಾಯೋಜಿಸಿದ್ದಾರೆ. ಏಪ್ರಿಲ್ 5 ಅನ್ನು ಅಂತರಾಷ್ಟ್ರೀಯ ಆತ್ಮಸಾಕ್ಷಿಯ ದಿನವೆಂದು ಗೊತ್ತುಪಡಿಸುವುದು ಉಪಕ್ರಮವಾಗಿತ್ತು. ಸಭೆಯು ನಿರ್ಣಯವನ್ನು ಅಂಗೀಕರಿಸಿತು ಮತ್ತು ಅದಕ್ಕೆ 'ಪ್ರೀತಿ ಮತ್ತು ಆತ್ಮಸಾಕ್ಷಿಯೊಂದಿಗೆ ಶಾಂತಿಯ ಸಂಸ್ಕೃತಿಯನ್ನು ಉತ್ತೇಜಿಸುವುದು' ಎಂದು ಶೀರ್ಷಿಕೆ ನೀಡಿದೆ. ಈ ನಿರ್ಣಯವು ತಮ್ಮ ವೈಯಕ್ತಿಕ ಪರಿಸ್ಥಿತಿ ಮತ್ತು ಸಂಸ್ಕೃತಿಗೆ ಅನುಗುಣವಾಗಿ ಪ್ರೀತಿ ಮತ್ತು ಆತ್ಮಸಾಕ್ಷಿಯೊಂದಿಗೆ ಶಾಂತಿಯ ಸಂಸ್ಕೃತಿಯನ್ನು ನಿರ್ಮಿಸಲು ಜನರನ್ನು ಆಹ್ವಾನಿಸುತ್ತದೆ. ಶಾಂತಿ ಮತ್ತು ಪ್ರೀತಿಯನ್ನು ಉತ್ತೇಜಿಸಲು ಪ್ರಪಂಚದಾದ್ಯಂತದ ಜನರಿಗೆ ಸ್ವೀಕಾರಾರ್ಹವಾದ ಮುಕ್ತ ಮನಸ್ಸಿನ ವಿಧಾನವನ್ನು ದಿನವು ಹೊಂದಿದೆ. ಶಾಂತಿ ಎಂದರೆ ಹಿಂಸೆ ಮತ್ತು ಸಂಘರ್ಷಗಳ ಅನುಪಸ್ಥಿತಿಯಲ್ಲ; ಇದು ನ್ಯಾಯ, ಅಭಿವೃದ್ಧಿ ಮತ್ತು ಉತ್ತಮ ಆಡಳಿತದ ತತ್ವಗಳನ್ನು ಸಂಯೋಜಿಸುವ ಮೂಲಕ ನಿರಂತರ ವಿಕಾಸದ ಸ್ಥಿತಿಯಾಗಿದೆ. ಆತ್ಮಸಾಕ್ಷಿಯು ಜನರು ಇದನ್ನು ಅರಿತುಕೊಳ್ಳಲು ಸಹಾಯ ಮಾಡುತ್ತದೆ ಮತ್ತು ಜನರು ಮತ್ತು ಅವರ ಸುತ್ತಲಿನ ಪರಿಸರದೊಂದಿಗೆ ಉತ್ತಮ ಬಾಂಧವ್ಯವನ್ನು ಸೃಷ್ಟಿಸುತ್ತದೆ. ಇದು ಸದಾಚಾರದ ಪ್ರಜ್ಞೆಯನ್ನು ಸೃಷ್ಟಿಸುತ್ತದೆ ಮತ್ತು ರಾಷ್ಟ್ರಗಳ ನಡುವೆ ಉತ್ತಮ ಸಂಪರ್ಕವನ್ನು ಸೃಷ್ಟಿಸಲು ಸಹಾಯ ಮಾಡುತ್ತದೆ.

# ಮತದಾನ ಜಾಗೃತಿಗೆ ಪಂಜಿನ ಮೆರವಣಿಗೆ

**ಮಂಡ್ಯ:** ಸ್ವೀಪ್ ಸಮಿತಿ ವತಿಯಿಂದ ಮತದಾನ ಜಾಗೃತಿ ಕುರಿತು ಹಮ್ಮಿಕೊಳ್ಳಲಾಗಿದ್ದ ಪಂಜಿನ ಮೆರವಣಿಗೆಗೆ ಜಿಲ್ಲಾಧಿಕಾರಿ ಡಾ. ಕುಮಾರ ಅವರು ಇಂದು ಜಿಲ್ಲಾ ಪಂಚಾಯತ್ ಸಭಾಂಗಣದ ಮುಂಭಾಗದಲ್ಲಿ ಚಾಲನೆ ನೀಡಿದರು.

ಮತದಾನ ಜಾಗೃತಿ ಕುರಿತ ಪಂಜಿನ ಮೆರವಣಿಗೆಯು ಜಿಲ್ಲಾ ಪಂಚಾಯತ್ ಆವರಣದಿಂದ ಹೊರಟು ಬನ್ನೂರು ರಸ್ತೆಯ ಕನ್ನಿಕಾ ಪರಮೇಶ್ವರಿ ದೇವಾಲಯ ರಸ್ತೆಯ ಮೂಲಕ ಸಂಚರಿಸಿ ಹೊಸಹಳ್ಳಿ ಸರ್ಕಲ್ ನಲ್ಲಿ ಕೊನೆಗೊಂಡಿತು.

ಪಂಜಿನ ಮೆರವಣಿಗೆಗೆ ಚಾಲನೆ ನೀಡಿದ ನಂತರ ಜಿಲ್ಲಾಧಿಕಾರಿಗಳು ಮಾತನಾಡಿ 18ನೇ ಲೋಕಸಭಾ ಚುನಾವಣೆಗೆ ಸಂಬಂಧಿಸಿದಂತೆ ಮಂಡ್ಯ ಲೋಕಸಭಾ ಕ್ಷೇತ್ರಕ್ಕೆ ಏಪ್ರಿಲ್ 26 ರಂದು ಪ್ರಜಾಪ್ರಭುತ್ವದ ಬಹುದೊಡ್ಡ ಹಬ್ಬ ನಡೆಯಲಿದೆ. ಜಿಲ್ಲೆಯ ಸಾರ್ವಜನಿಕರು ತಪ್ಪದೇ ಮತದಾನ ಮಾಡುವಂತೆ ತಿಳಿಸಿದರು.

ಪ್ರತಿಯೊಬ್ಬರು ಜವಾಬ್ದಾರಿಯುತ ಮತದಾರರಾಗಿ, ತಮ್ಮ ಹೊಣೆಗಾರಿಕೆಯನ್ನು ಅರಿತು ಮೂಲಭೂತ ಕರ್ತವ್ಯವನ್ನು ನಿಭಾಯಿಸುವ ದೃಷ್ಟಿಯಿಂದ ಮತಗಟ್ಟೆಗೆ ಬಂದು ಮತವನ್ನು ಚಲಾಯಿಸಬೇಕು ಎಂಬ ಉದ್ದೇಶದಿಂದ ಪಂಜಿನ ಮೆರವಣಿಗೆಯನ್ನು ಹಮ್ಮಿಕೊಳ್ಳಲಾಗಿದೆ ಎಂದರು.



ಪ್ರತಿಯೊಬ್ಬ ಮತದಾರರು ಕೂಡ ಪ್ರಜಾಸತ್ತಾತ್ಮಕ ಮೌಲ್ಯಗಳನ್ನು ಎತ್ತಿ ಹಿಡಿಯುವ ನಿಟ್ಟಿನಲ್ಲಿ ತಮ್ಮ ಅಮೂಲ್ಯವಾದ ಮತವನ್ನು ಚಲಾಯಿಸಬೇಕು ಎಂದರು.

ನೌಕರರಿಗೆ ಎಪ್ರಿಲ್ 26 ರಂದು ಸಂಬಳ ಸಹಿತ ರಜೆಯನ್ನು ನೀಡಲಾಗಿದ್ದು, ಮನೆಯಲ್ಲಿ ಉಳಿಯದೆ ಮತಗಟ್ಟೆಗೆ ಬಂದು ತಮ್ಮ ಅಮೂಲ್ಯವಾದ ಮತವನ್ನು ಚಲಾಯಿಸುವ ಮೂಲಕ ಪ್ರಜಾಸತಾತ್ಮಕ ಮೌಲ್ಯಗಳನ್ನು ಎತ್ತಿ ಹಿಡಿಯಬೇಕೆಂದು ಎಲ್ಲರಲ್ಲಿಯೂ ವಿನಂತಿಸಿಕೊಳ್ಳುತ್ತೇನೆ ಎಂದರು.

ಜಿಲ್ಲಾ ಪಂಚಾಯತ್ ಮುಂಭಾಗದ ಆವರಣದಲ್ಲಿ ಮತದಾನದ ಜಾಗೃತಿಗೆ ಸಂಬಂಧಿಸಿದಂತೆ ರಂಗೋಲಿಯಿಂದ ಬಿಡಿಸಿದ ಚಿತ್ರಗಳು ಕಂಗೊಳಿಸಿದವು.

ಆಮಿಷಕ್ಕೆ ಮರುಳಾಗದಿರಿ ವಿವೇಚನೆಯಿಂದ ಮತ ಚಲಾಯಿಸಿ, ಪ್ರಜಾಪ್ರಭುತ್ವ ನಮ್ಮಿಂದ ಮತದಾನ ಹೆಮ್ಮೆಯಿಂದ, ಯಾವುದೇ ಮತದಾರ ಮತದಾನದಿಂದ ಹೊರಗುಳಿಯಬಾರದು, ನಮ್ಮ ಮತ ನಮ್ಮ ಹಕ್ಕು, ಮತ ಚಲಾಯಿಸುವುದು ನಮ್ಮೆಲ್ಲರ ಹಕ್ಕು, ತುಂಬಿತು 18 ವರ್ಷ ಸಿಕ್ಕಿತು ಮತದಾನದ ವರ್ಷ, ಮತದಾನ ಮಾಡಿ ಆಡಳಿತದಲ್ಲಿ ಕೈಜೋಡಿಸಿ, ರಾಜ್ಯದ ಭವಿಷ್ಯ ನಮ್ಮ ಬೆರಳಲ್ಲಿ, ಮತ ಚಲಾಯಿಸಿ ಪ್ರಜಾಪ್ರಭುತ್ವ ಗೆಲ್ಲಿಸಿ, ಮತದಾನ ನಮ್ಮ ಭವಿಷ್ಯ ಎಂಬ ಫ್ಲೆಕ್ಸ್ ಗಳ ಮೂಲಕ ಜಾಗೃತಿ ಮೂಡಿಸಲಾಯಿತು.

ಇದೇ ಸಂದರ್ಭದಲ್ಲಿ ಪ್ರತಿಜ್ಞಾವಿಧಿಯನ್ನು ಬೋಧಿಸಲಾಯಿತು.

ಕಾರ್ಯಕ್ರಮದಲ್ಲಿ ಅಪರ ಜಿಲ್ಲಾಧಿಕಾರಿ ಡಾ. ಎಚ್. ಎಲ್. ನಾಗರಾಜು ಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಶಿ ಸಂಜೀವಪ್ಪ, ನಗರಸಭೆ ಆಯುಕ್ತ ಮಂಜುನಾಥ ಸೇರಿದಂತೆ ಇನ್ನಿತರೆ ಅಧಿಕಾರಿಗಳು ಉಪಸ್ಥಿತರಿದ್ದರು.

## ಬೇಸಿಗೆಗಾಲದ ಹಿನ್ನೆಲೆ: ಅಗತ್ಯ ಸಲಹೆಗಳು

**ಮಂಡ್ಯ:** ಪ್ರಸ್ತುತ ಜಿಲ್ಲೆಯಲ್ಲಿ ಬೇಸಿಗೆಗಾಲ ಆರಂಭವಾಗಿದ್ದು, ಮುಂಬರುವ ದಿನಗಳಲ್ಲಿ ಬಿಸಿ ವಾತಾವರಣವು ಸಾಮಾನ್ಯ ತಾಪಮಾನಕ್ಕಿಂತ ಹೆಚ್ಚಾಗಿ ಇರುತ್ತದೆ. ಈ ಅವಧಿಯಲ್ಲಿ ಅತಿಯಾದ ಉಷ್ಣಾಂಶದಿಂದಾಗಿ ನಾನಾ ರೀತಿಯ ಅನಾರೋಗ್ಯ ಪರಿಸ್ಥಿತಿಗಳು ಸಂಭವಿಸುವ ಸಾಧ್ಯತೆಯಿದ್ದು, ಅನಾರೋಗ್ಯ ಪರಿಸ್ಥಿತಿಗಳ ತಡೆಗಟ್ಟುವಿಕೆ, ನಿಯಂತ್ರಣ ಮತ್ತು ನಿರ್ವಹಣೆಯನ್ನು ಸಾರ್ವಜನಿಕರ ಆರೋಗ್ಯದ ಹಿತದೃಷ್ಟಿಯಿಂದ ಸೂಕ್ತಸಲಹೆಗಳನ್ನು ತಿಳಿಸಲಾಗಿದೆ. ಅತೀ ಹೆಚ್ಚು ತಾಪಮಾನದಿಂದ ಉಂಟಾಗುವ ಅನಾರೋಗ್ಯವನ್ನು ತಡೆಗಟ್ಟಲು ಸಾಮಾನ್ಯ ಸೂಚನೆಗಳು: ಹೊರಗಿನ ಉಷ್ಣತೆಯು ಅಧಿಕವಾಗಿರುವುದರಿಂದ ಬಿಸಿಲಿನಲ್ಲಿ (ಮದ್ಯಾಹ್ನ 12 ರಿಂದ 3 ರವರೆಗೆ) ಹೋಗುವುದನ್ನು ತಪ್ಪಿಸುವುದು ಹಾಗೂ ಶ್ರಮದಾಯಕ ಚಟುವಟಿಕೆಗಳನ್ನು ತಪ್ಪಿಸುವುದು. ಹೆಚ್ಚಾಗಿ ನೀರು ಸೇವಿಸುವುದು. ಹಗುರವಾದ, ತಿಳಿ ಬಣ್ಣದ ಸಡಿಲವಾದ ಮತ್ತು ಹತ್ತಿಬಟ್ಟೆಗಳನ್ನು ಧರಿಸುವುದು. ಬಿಸಿಲಿನಲ್ಲಿ ಹೋಗುವಾಗ ರಕ್ಷಣೆಗಾಗಿ ಕನ್ನಡಕಗಳು, ಛತ್ರಿ, ಟೋಪಿ, ಬೂಟುಗಳು ಅಥವಾ ಚಪ್ಪಲಿಗಳನ್ನು ಬಳಸುವುದು. ಪ್ರಯಾಣ ಮಾಡುವಾಗ ನೀರನ್ನು ಜೊತೆಯಲ್ಲಿ ಒಯ್ಯುವುದು. ದೇಹವನ್ನು ನಿರ್ಜಲೀಕರಣಗೊಳಿಸುವ ಆಲ್ಕೋಹಾಲ್, ಚಹಾ, ಕಾಫಿ ಮತ್ತು ಕಾರ್ಬೋನೇಟೆಡ್ ತಂಪು ಪಾನೀಯಗಳನ್ನು ತಪ್ಪಿಸುವುದು. ಮನೆಯನ್ನು ತಂಪಾಗಿರಿಸಲು ಪರದೆಗಳು, ಶಟರ್‌ಗಳು ಅಥವಾ ಸನ್ ಶೆಡ್‌ಗಳನ್ನು ಬಳಸುವುದು ಮತ್ತು ಆಗ್ಗಿಂದಾಗೆ ತಣ್ಣೀರು ಸ್ನಾನ ಮಾಡುವುದು ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಹಾಗೂ ಜಿಲ್ಲಾ ರೋಗವಾಹಕ ಆಶ್ರಿತ ರೋಗಗಳ ನಿಯಂತ್ರಣಾಧಿಕಾರಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಬಾಬು ಜಗಜೀವನ್ ರಾಮ್ 117ನೇ ಜನ್ಮ ದಿನಾಚರಣೆ

**ರಾಮನಗರ:** ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಸಮಾಜ ಕಲ್ಯಾಣ ಇಲಾಖೆ ವತಿಯಿಂದ ಇದೇ ಏ. 5ರ ಶುಕ್ರವಾರ ನಗರದ ಡಾ. ಬಿ.ಆರ್. ಅಂಬೇಡ್ಕರ್ ಭವನದಲ್ಲಿ ಹಸಿರು ಕ್ರಾಂತಿಯ ಹರಿಕಾರ ಮತ್ತು ಭಾರತ ದೇಶದ ಉಪ ಪ್ರಧಾನಿ ಡಾ. ಬಾಬು ಜಗಜೀವನ್ ರಾಮ್ ರವರ 117ನೇ ಜನ್ಮ ದಿನಾಚರಣೆ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ. ಕ್ರಾಂತಿಯ ಹರಿಕಾರ ಮತ್ತು ಭಾರತ ದೇಶದ ಉಪ ಪ್ರಧಾನಿ ಡಾ. ಬಾಬು ಜಗಜೀವನ್ ರಾಮ್ ರವರ 117ನೇ ಜನ್ಮ ದಿನಾಚರಣೆ ಅಂಗವಾಗಿ ಏ. 5ರ ಶುಕ್ರವಾರ ಬೆಳಿಗ್ಗೆ 9.30ಕ್ಕೆ ನಗರದ ಜೂನಿಯರ್ ಕಾಲೇಜಿನಿಂದ ಡಾ. ಬಾಬು ಜಗಜೀವನ್ ರಾಮ್ ರವರ ಭಾವಚಿತ್ರವನ್ನು ಸಾರೋಟ್‌ನಲ್ಲಿ ಇರಿಸಿ, ನಗರದ ಪ್ರಮುಖ ವೃತ್ತಗಳಲ್ಲಿ ಕಲಾತಂಡಗಳೊಂದಿಗೆ ಸಂಚರಿಸಿ ಡಾ. ಬಿ.ಆರ್. ಅಂಬೇಡ್ಕರ್ ಭವನದ ವರೆಗೆ ಮೆರವಣಿಗೆ ಆಯೋಜಿಸಲಾಗಿದೆ ಎಂದು ಜಿಲ್ಲಾ ಸಮಾಜ ಕಲ್ಯಾಣ ಇಲಾಖೆಯ ಜಂಟಿ ನಿರ್ದೇಶಕರು ತಿಳಿಸಿದ್ದಾರೆ.

## ಅರ್ಜಿ ಸಲ್ಲಿಸಲು ಅವಧಿ ವಿಸ್ತರಣೆ

**ರಾಮನಗರ:** ರಾಮನಗರ ಜಿಲ್ಲಾ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಡಿ ಕಾರ್ಯನಿರ್ವಹಿಸುತ್ತಿರುವ ಡಾ. ಎ.ಪಿ.ಜೆ ಅಬ್ದುಲ್ ಕಲಾಂ ವಸತಿ ಶಾಲೆ ಹಾಗೂ ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ವಸತಿ ಶಾಲೆಗಳಿಗೆ 2024-25ನೇ ಸಾಲಿನ 6ನೇ ತರಗತಿಗೆ ಉಚಿತ ಪ್ರವೇಶ ಪಡೆಯಲು ಅರ್ಜಿ ಆಹ್ವಾನಿಸಲಾಗಿದೆ. ಪ್ರವೇಶ ಪಡೆಯಲು ಆಸಕ್ತಿವುಳ್ಳ ವಿದ್ಯಾರ್ಥಿಗಳು ಸೇವಾ ಸಿಂಧು ಪೋರ್ಟಲ್ ಮುಖಾಂತರ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಲು ಮಾ. 31 ಕೊನೆಯ ದಿನಾಂಕವಾಗಿತ್ತು, ಪ್ರಸ್ತುತ ಅರ್ಜಿ ಸಲ್ಲಿಸಲು ಏ. 15ರ ವರೆಗೆ ವಿಸ್ತರಿಸಲಾಗಿದೆ.ಹೆಚ್ಚಿನ ಮಾಹಿತಿಗಾಗಿ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ಕೊಠಡಿ ಸಂಖ್ಯೆ 308, 2ನೇ ಮಹಡಿ, ಕಂದಾಯ ಭವನ, ಬಿ.ಎಂ. ರಸ್ತೆ, ರಾಮನಗರ-562 159. ದೂ.ಸಂಖ್ಯೆ: 080-27271104 ಸಂಪರ್ಕಿಸಬಹುದು ಎಂದು ರಾಮನಗರ ಜಿಲ್ಲೆಯ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿಗಳು ತಿಳಿಸಿದ್ದಾರೆ.

## ಬಾಬೂಜಿ ಜನ್ಮದಿನಾಚರಣೆ

**ಬೆಂಗಳೂರು:** ಸರ್ಕಾರದ ವತಿಯಿಂದ 2024-25ನೇ ಸಾಲಿನಲ್ಲಿ ಡಾ. ಬಾಬು ಜಗಜೀವನರಾಂ ರವರ 117ನೇ ಜನ್ಮದಿನಾಚರಣೆಯನ್ನು ಏಪ್ರಿಲ್ 05 ರಂದು ಬೆಳಿಗ್ಗೆ 10.00 ಗಂಟೆಗೆ ವಿಧಾನಸೌಧದ ಪಶ್ಚಿಮ ದ್ವಾರದಲ್ಲಿರುವ ಡಾ. ಬಾಬು ಜಗಜೀವನರಾಂ ರವರ ಪ್ರತಿಮೆ ಬಳಿ ಮಾಲಾರ್ಪಣೆ ಮಾಡುವ ಮುಖಾಂತರ ಆಚರಿಸಲಾಗುತ್ತಿದೆ. ಕಾರ್ಯಕ್ರಮವನ್ನು ಲೋಕಸಭಾ ಸಾರ್ವತ್ರಿಕ ಚುನಾವಣೆ 2024ರ ಹಿನ್ನೆಯಲ್ಲಿ ಮಾದರಿ ನೀತಿ ಸಂಹಿತೆ ಉಲ್ಲಂಘನೆಯಾಗದಂತೆ ಆಚರಿಸಲಾಗುತ್ತಿದ್ದು, ಕಾರ್ಯಕ್ರಮದಲ್ಲಿ ಸನ್ಮಾನ್ಯ ಮುಖ್ಯಮಂತ್ರಿಗಳು, ಉಪ ಮುಖ್ಯಮಂತ್ರಿಗಳು, ಸಮಾಜ ಕಲ್ಯಾಣ ಇಲಾಖೆ ಸಚಿವರು ಮತ್ತು ಇತರೆ ಗಣ್ಯ ವ್ಯಕ್ತಿಗಳು ಪಾಲ್ಗೊಳ್ಳಲಿದ್ದಾರೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

## ರಾಷ್ಟ್ರೀಯ ಲೋಕ್-ಅದಾಲತ್

**ಬೆಂಗಳೂರು:** 2024ನೇ ಜುಲೈ 13 ರಂದು ರಾಜ್ಯಾದ್ಯಂತ ರಾಷ್ಟ್ರೀಯ ಲೋಕ್ ಅದಾಲತ್ ಹಮ್ಮಿಕೊಳ್ಳಲಾಗಿದ್ದು, ಸದರಿ ಲೋಕ್ ಅದಾಲತ್‌ನಲ್ಲಿ ಸಾರ್ವಜನಿಕರು ನ್ಯಾಯಾಲಯದಲ್ಲಿ ಬಾಕಿ ಇರುವ ಪ್ರಕರಣಗಳನ್ನು ಮತ್ತು ವ್ಯಾಜ್ಯ ಪೂರ್ವ ಪ್ರಕರಣಗಳನ್ನು ಇತ್ಯರ್ಥಪಡಿಸಿಕೊಳ್ಳಲು ಇಚ್ಛಿಸಿದಲ್ಲಿ ಮುಂಚಿತವಾಗಿ ಸಂಬಂಧಪಟ್ಟ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಹಾಗೂ ತಾಲ್ಲೂಕು ಕಾನೂನು ಸೇವಾ ಸಮಿತಿಗಳನ್ನು ಸಂಪರ್ಕಿಸಿ ಮಾಹಿತಿ ಪಡೆದುಕೊಳ್ಳಬಹುದು. ನ್ಯಾಯಾಲಯದಲ್ಲಿ ಬಾಕಿ ಇರುವ ಪ್ರಕರಣಗಳನ್ನು ಇತ್ಯರ್ಥಪಡಿಸಿಕೊಳ್ಳಲು ಪ್ರಕರಣ ನಡೆಯುತ್ತಿರುವ ನ್ಯಾಯಾಲಯಕ್ಕೆ ಪ್ರಕರಣ ರಾಜೀ ಮಾಡಿಕೊಳ್ಳುವ ಕುರಿತು ತಿಳಿಸುವ ಮೂಲಕ ಅಥವಾ ಅರ್ಜಿ ಸಲ್ಲಿಸುವ ಮೂಲಕ ಪ್ರಕರಣ ಇತ್ಯರ್ಥಪಡಿಸಿಕೊಳ್ಳಬಹುದು. ಹೆಚ್ಚಿನ ಮಾಹಿತಿಗಾಗಿ ಸಹಾಯವಾಣಿ ಸಂಖ್ಯೆ 15100 ಸಂಪರ್ಕಿಸಬಹುದು ಎಂದು ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳು ತಿಳಿಸಿದ್ದಾರೆ.

# 19 ಅಭ್ಯರ್ಥಿಗಳಿಂದ 45 ನಾಮಪತ್ರ ಸಲ್ಲಿಕೆ

**ರಾಮನಗರ:** ಲೋಕಸಭಾ ಸಾರ್ವತ್ರಿಕ ಚುನಾವಣೆ-2024ಕ್ಕೆ ಸಂಬಂಧಿಸಿದಂತೆ 23-ಬೆಂಗಳೂರು ಗ್ರಾಮಾಂತರ ಲೋಕಸಭಾ ಕ್ಷೇತ್ರದಲ್ಲಿ ಇಂದು (ಏ. 4ರಂದು) 19 ನಾಮಪತ್ರ ಸ್ವೀಕರಿಸಲಾಗಿದೆ.

23-ಬೆಂಗಳೂರು ಗ್ರಾಮಾಂತರ ಲೋಕಸಭಾ ಕ್ಷೇತ್ರದಲ್ಲಿ ಇಂಡಿಯನ್ ನ್ಯಾಷನಲ್ ಕಾಂಗ್ರೆಸ್ ಪಕ್ಷದ ಅಭ್ಯರ್ಥಿ ಡಿ.ಕೆ. ಸುರೇಶ್ 4 ನಾಮಪತ್ರ, ಸ್ವತಂತ್ರ ಅಭ್ಯರ್ಥಿ ಶ್ರೀನಿವಾಸ ಮೂರ್ತಿ ಹೆಚ್.ಕೆ. 1 ನಾಮಪತ್ರ, ಸೋಷಿಯಲಿಸ್ಟ್ ಯುನಿಟಿ ಸೆಂಟರ್ ಆಫ್ ಇಂಡಿಯಾ (ಕಮ್ಯುನಿಸ್ಟ್) ಪಕ್ಷದ ಅಭ್ಯರ್ಥಿ ಹೇಮವಾತಿ ಕೆ. 2 ನಾಮಪತ್ರ, ಬಹುಜನ್ ಸಮಾಜ ಪಕ್ಷದ ಅಭ್ಯರ್ಥಿ ಡಾ. ಚಿನ್ನಪ್ಪ ವೈ ಚಿಕ್ಕಹಾಗಡೆ 2 ನಾಮಪತ್ರ, ಸ್ವತಂತ್ರ ಅಭ್ಯರ್ಥಿ ದೇವರಾಜು ಎಂ.ಸಿ 2 ನಾಮಪತ್ರ, ಸ್ವತಂತ್ರ ಅಭ್ಯರ್ಥಿ ಶ್ರೀನಿವಾಸ ಮೂರ್ತಿ ಹೆಚ್.ಕೆ. 1 ನಾಮಪತ್ರ, ಕರ್ನಾಟಕ ರಾಷ್ಟ್ರ ಸಮಿತಿ ಪಕ್ಷದ ಅಭ್ಯರ್ಥಿ ಮಹಮದ್ ಮುಸದಿಕ್ ಪಾಷ 2 ನಾಮಪತ್ರ, ಯಂಗ್‌ಸ್ಟಾರ್ ಎಂಪಾರ್‌ಮೆಂಟ್ ಪಕ್ಷದ ಅಭ್ಯರ್ಥಿ ಮೊಹಮ್ಮದ್ ದಸ್ತಗೀರ್ 1 ನಾಮಪತ್ರ, ಉತ್ತಮ ಪ್ರಜಾಕೀಯ ಪಕ್ಷದ ಅಭ್ಯರ್ಥಿ ಅಭಿಷೇಕ್ ಕೆ. 1 ನಾಮಪತ್ರ, ಭಾರತೀಯ ಪ್ರಜೆಗಳ ಕಲ್ಯಾಣ ಪಕ್ಷದ ಅಭ್ಯರ್ಥಿ ಕುಮಾರ್ ಎಲ್. 1 ನಾಮಪತ್ರ, ಸ್ವತಂತ್ರ ಅಭ್ಯರ್ಥಿ ಜೆ.ಟಿ. ಪ್ರಕಾಶ್ 2 ನಾಮಪತ್ರ, ಅಖಿಲ ಭಾರತ್ ಹಿಂದೂ ಮಹಾಸಭಾ ಪಕ್ಷದ ಅಭ್ಯರ್ಥಿ ಹೆಚ್. ರಾಜಣ್ಣ 2 ನಾಮಪತ್ರ, ಕರುನಾಡು ಪಕ್ಷದ ಅಭ್ಯರ್ಥಿ ಸುರೇಶ್ ಎಸ್ 1 ನಾಮಪತ್ರ, ನವಭಾರತ್ ಸೇನಾ ಪಕ್ಷದ ಅಭ್ಯರ್ಥಿ ಎನ್. ವಸಂತ್ ರಾವ್ ಜಗತಾಪ್ 2 ನಾಮಪತ್ರ, ಸ್ವತಂತ್ರ ಅಭ್ಯರ್ಥಿ ರಾಜೇಂದ್ರ ಟಿ. 1 ನಾಮಪತ್ರ, ಭಾರತೀಯ ಪ್ರಜೆಗಳ ಕಲ್ಯಾಣ ಪಕ್ಷದ ಅಭ್ಯರ್ಥಿ ಕುಮಾರ್ ಎಲ್ 1 ನಾಮಪತ್ರ, ಉತ್ತಮ ಪ್ರಜಾಕೀಯ ಪಕ್ಷದ ಅಭ್ಯರ್ಥಿ ಮನಮೋಹನ್ ರಾಜ್ ಕೆ.ಎನ್ 1 ನಾಮಪತ್ರ, ಬಹುಜನ್ ಭಾರತ ಪಕ್ಷದ ಅಭ್ಯರ್ಥಿ ಮಂಜುನಾಥ ಸಿಎನ್ 1 ನಾಮಪತ್ರ, ಸ್ವತಂತ್ರ ಅಭ್ಯರ್ಥಿ ಮಂಜುನಾಥ್ ಸಿ 1 ನಾಮಪತ್ರ, ಕಂಟ್ರಿಸಿಟಿಜನ್ ಪಕ್ಷದ ಅಭ್ಯರ್ಥಿ ವಸಿಸ್ಟ್ ಜೆ 1 ನಾಮಪತ್ರ, ಸ್ವತಂತ್ರ ಅಭ್ಯರ್ಥಿ ಮಂಜುನಾಥ್ ಎನ್ 1 ನಾಮಪತ್ರ, ಸ್ವತಂತ್ರ ಅಭ್ಯರ್ಥಿ ಮಂಜುನಾಥ್ ಕೆ. 1 ನಾಮಪತ್ರ, ಭಾರತೀಯ ಜನತಾ ಪಕ್ಷದ ಅಭ್ಯರ್ಥಿ ಡಾ. ಸಿ.ಎನ್ ಮಂಜುನಾಥ್ 4 ನಾಮಪತ್ರ, ವಿಡುದಲೈ ಚಿರುತೈದಲ್ ಕಚ್ಚಿ ಪಕ್ಷದ ಅಭ್ಯರ್ಥಿ ಚಂದ್ರ ಶೇಖರ್ ಹೆಚ್.ವಿ. 1 ನಾಮಪತ್ರ, ಪಿರಮಿಡ್ ಪಾರ್ಟಿ ಆಫ್ ಇಂಡಿಯಾ ಪಕ್ಷದ ಅಭ್ಯರ್ಥಿ ಎನ್. ಕೃಷ್ಣಪ್ಪ 1 ನಾಮಪತ್ರ, ಇಂಡಿಯನ್ ಮೂಮೆಂಟ್ ಪಕ್ಷದ ಅಭ್ಯರ್ಥಿ ಡಿ.ಎಂ. ಮಾದೇಗೌಡ 1 ನಾಮಪತ್ರ, ಸ್ವತಂತ್ರ ಅಭ್ಯರ್ಥಿ ಮಹೇಶ್ ಎಸ್ 1 ನಾಮಪತ್ರ, ಸ್ವತಂತ್ರ ಅಭ್ಯರ್ಥಿ ಬಂಡಿ ರಂಗನಾಥ್ ವೈ.ಆರ್. 1 ನಾಮಪತ್ರ, ಸ್ವತಂತ್ರ ಅಭ್ಯರ್ಥಿ ನರಸಿಂಹ ಮೂರ್ತಿ ವೈ.ಪಿ 1 ನಾಮಪತ್ರ, ಸ್ವತಂತ್ರ ಅಭ್ಯರ್ಥಿ ಶಿವಣ್ಣ 1 ನಾಮಪತ್ರ, ಸ್ವತಂತ್ರ ಅಭ್ಯರ್ಥಿ ಎಲ್.ವಿ. ವೆಂಕಟೇಶ್ 1 ನಾಮಪತ್ರ, ಸ್ವತಂತ್ರ ಅಭ್ಯರ್ಥಿ ಪ್ರದೀಪ್ ಟಿ.ವಿ. 1 ನಾಮಪತ್ರ, ಸ್ವತಂತ್ರ ಅಭ್ಯರ್ಥಿ ಸುರೇಶ್ ಎಂ. 1 ನಾಮಪತ್ರ ಸಲ್ಲಿಸಿರುತ್ತಾರೆ. ಮಾರ್ಚ್ 28 ರಿಂದ ಏ. 4ರ ವರೆಗೆ ಒಟ್ಟು 45 ನಾಮಪತ್ರಗಳನ್ನು ಸ್ವೀಕರಿಸಲಾಗಿದೆ ಎಂದು ತಿಳಿಸಿದ್ದಾರೆ.

# ಮೇಕೆದಾಟು ಅಣೆಕಟ್ಟು ನಿರ್ಮಾಣದ ಹೋರಾಟಕ್ಕೆ ಎಲ್ಲರೂ ಕೈಜೋಡಿಸಿ

**ಚನ್ನಪಟ್ಟಣ:** ಕಾವೇರಿ ಕುಡಿಯುವ ನೀರು ಬಳಕೆ ಮಾಡುವ ಪ್ರತಿಯೊಬ್ಬರು ಮೇಕೆದಾಟು ಅಣೆಕಟ್ಟು ನಿರ್ಮಾಣದ ಹೋರಾಟಕ್ಕೆ ಕೈಜೋಡಿಸಿದಾಗ ಹೋರಾಟಕ್ಕೆ ಫಲ ಸಿಗುತ್ತದೆ ಎಂದು ಡಿಎಸ್‌ಎಸ್ ಸಂಚಾಲಕ ವೆಂಕಟೇಶ್(ಸೇಟು) ಅಭಿಪ್ರಾಯಿಸಿದರು.

ಕಾವೇರಿ ನದಿ ನೀರಿನ ಹಂಚಿಕೆಯಲ್ಲಿ ಸಂಕಷ್ಟ ಸೂತ್ರ ರಚಿಸುವ ಜೊತೆಗೆ ಮೇಕೆದಾಟು ಯೋಜನೆಗೆ ಅಡಿಗಲ್ಲು ಹಾಕುವಂತೆ ಆಗ್ರಹಿಸಿ ಕಸ್ತೂರಿ ಕರ್ನಾಟಕ ಜನಪರ ವೇದಿಕೆಯ ರಾಜ್ಯಾಧ್ಯಕ್ಷರಾದ ರಮೇಶ್ ಗೌಡರ ನೇತೃತ್ವದಲ್ಲಿ 2023ರ ಅಕ್ಟೋಬರ್ 5 ರಿಂದ ನಿರಂತರವಾಗಿ ಹೋರಾಟ ಮಾಡುತ್ತಿದ್ದು ಗುರುವಾರ ನಡೆದ 183 ನೇ ದಿನದ ಹೋರಾಟದಲ್ಲಿ ಅವರು ಮಾತನಾಡಿ, ರಾಜ್ಯದಲ್ಲಿ ಕೆರೆ- ಕಟ್ಟೆಗಳಲ್ಲಿ ನೀರಿಲ್ಲದೆ ಪ್ರಾಣಿ ಪಕ್ಷಿಗಳಿಗೂ ನೀರಿಲ್ಲದಂತಾಗಿದ್ದು, ಜನರಿಗೆ ವಾರಕ್ಕೆ ಒಂದು ದಿನ ನೀರು ಬಿಟ್ಟರು 10 ನಿಮಿಷವೂ ಬರುವುದಿಲ್ಲ, ಮೇಕೆದಾಟು ಯೋಜನೆ ಆಗಬೇಕು ಹಾಗೂ ಕಾವೇರಿ ನದಿ ನೀರು ಹಂಚಿಕೆಯಲ್ಲಿ ಮಳೆ ಆದಾರಿತ ಸಂಕಷ್ಟ ಸೂತ್ರ ರಚಿಸಬೇಕು ಎಂದು ರಮೇಶ್‌ಗೌಡರು ನಡೆಸುತ್ತಿರುವ ಈ ನಿರಂತರ ಹೋರಾಟ ಅವರ ಸ್ವಾರ್ಥಕ್ಕಾಗಿ ನಡೆಯುತ್ತಿಲ್ಲ. ಸಾರ್ವಜನಿಕರಿಗಾಗಿ ನಡೆಸುತ್ತಿದ್ದಾರೆ. ನಮಗೆ ನೀರಿಲ್ಲದೆ ಪರದಾಡುತ್ತಿದ್ದರೂ ಸಹ ತಮಿಳುನಾಡು ಸರ್ಕಾರ ನೀರು ಕೇಳುತ್ತಿರುವುದು ನಾಚಿಕೆಗೇಡಿನ ಸಂಗತಿಯಾಗಿದೆ. ಈ ಸಮಸ್ಯೆ ಪರಿಹರಿಸಲು ಕೇಂದ್ರ ಸರ್ಕಾರವು ಮಧ್ಯಸ್ಥಿಕೆ ವಹಿಸಿ ರಾಜ್ಯದಲ್ಲಿನ ನೀರಿನ ಸಮಸ್ಯೆ ಬಗ್ಗೆ ವಾಸ್ತವತೆ ಹರಿತು ಮೇಕೆದಾಟು ಅಣೆಕಟ್ಟೆ ನಿರ್ಮಾಣಕ್ಕೆ ಅನುಮತಿ ನೀಡಬೇಕು. ಈ ನಿಟ್ಟಿನಲ್ಲಿ ರಮೇಶ್‌ಗೌಡರ ಹೋರಾಟಕ್ಕೆ ಕಾವೇರಿ ನೀರನ್ನು ಬಳಕೆ ಮಾಡುವ ಪ್ರತಿಯೊಬ್ಬರು 10 ನಿಮಿಷ ಹೋರಾಟಕ್ಕೆ ಬೆಂಬಲ ನೀಡಿದರೂ ಶಕ್ತಿ ತುಂಬಿದರೆ ಈ ಹೋರಾಟ ಯಶಸ್ವಿಯಾಗುತ್ತದೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ನಿವೃತ್ತ ಪ್ರಾಂಶುಪಾಲ ನಿಂಗೇಗೌಡ(ಎನ್‌ಜಿ) ಮಾತನಾಡಿ, ನಾವು ಮೇಕೆದಾಟು ಯೋಜನೆ ಮಾಡಲು ಮುಂದಾಗಿರುವುದು ಕುಡಿಯುವ ನೀರಿಗಾಗಿ ಮಾತ್ರ, ಆದರೆ ಅದಕ್ಕೆ ಅಡ್ಡಿ ಪಡಿಸುತ್ತಿರುವ ತಮಿಳುನಾಡು ಸರ್ಕಾರ ಮತ್ತು ಇದನ್ನು ಕಂಡೂ ಕಾಣದಂತಿರುವ ಕೇಂದ್ರ ಸರ್ಕಾರದ ಮಲತಾಯಿ ಧೋರಣೆಯಿಂದ ರಾಜ್ಯದ ಜನತೆ ರೊಚ್ಚಿಗೇಳುವ ಪರಿಸ್ಥಿತಿ ಬರುತ್ತದೆ.



ಈ ನಿಟ್ಟಿನಲ್ಲಿ ಸರ್ಕಾರಗಳು ಎಚ್ಚೆತ್ತುಕೊಂಡು ಮೇಕೆದಾಟು ಯೋಜನೆಯನ್ನು ಕೂಡಲೇ ಅನುಷ್ಠಾನಕ್ಕೆ ಕ್ರಮ ಕೈಗೊಳ್ಳಬೇಕು ಎಂದರು.

ನಿವೃತ್ತ ಶಿಕ್ಷಕರು, ಸಾಕ್ಷರ ಕೋಗಿಲೆ ಚೌಪು ಸ್ವಾಮಿ ಮಾತನಾಡಿ, ಕನ್ನಡ ಅಸ್ಮಿತೆ ಕಾಪಾಡಲು ಹೋರಾಟಗಳು ಕನ್ನಡಿಗರ ಅಸ್ತ್ರಗಳಾಗಿದ್ದು, ಮೇಕೆದಾಟು ಯೋಜನೆ ನಿರ್ಮಾಣಕ್ಕೆ ಹಾಗೂ ಕಾವೇರಿ ನೀರು ಹಂಚಿಕೆ ಸಂಕಷ್ಟ ಸೂತ್ರ ರಚಿಸಲು ಸರ್ಕಾರದ ಕಣ್ಣು ಕಿವಿ ತೆರೆಸಲು ಈ ಹೋರಾಟ ಮಾಡಲಾಗುತ್ತದೆ. ಹೋರಾಟಕ್ಕೆ ಮಣಿಯುವವರೆಗೆ ನಮ್ಮ ಹೋರಾಟ ನಿರಂತರ ಎಂದರು.

ಕಕಜ ವೇದಿಕೆ ರಾಜ್ಯಾಧ್ಯಕ್ಷ ರಮೇಶ್‌ಗೌಡ ಮಾತನಾಡಿ, ಪ್ರಕೃತಿಯಲ್ಲಿ ಜನರ ಜೊತೆಗೆ ಜನ-ಜಾನುವಾರುಗಳು, ಪ್ರಾಣಿ ಪಕ್ಷಿಗಳು, ಜಲಚರ ಜೀವ ಸಂಕುಲಗಳು ಉಳಿಯದಿದ್ದರೆ ಪ್ರಕೃತಿ ಸಮತೋಲನ ಕಳೆದುಕೊಳ್ಳುತ್ತದೆ. ಈ ನಿಟ್ಟಿನಲ್ಲಿ ಮೂಕ ಪ್ರಾಣಿಗಳಿಗೆ, ಪಕ್ಷಿಗಳಿಗೆ ನೀರುಣಿಸುವ ನಿಟ್ಟಿನಲ್ಲಿ ಈಗಾಗಲೆ ವೇದಿಕೆಯಿಂದ ಮನೆಗಳ ಮೇಲೆ ಮಣ್ಣಿನ ಬಟ್ಟಲಿನಲ್ಲಿ ನೀರನ್ನು ಇಡುವ ಆಂದೋಲನ ಆರಂಭಿಸಲಾಗಿದ್ದು ಇದರ ಜೊತೆಗೆ ಬಿಡಾಡಿ ಹಸುಗಳಿಗೆ, ನಾಯಿಗಳಿಗೆ ಕುಡಿಯುವ ನೀರನ್ನು ಇಡಲು ಪಟ್ಟಣದ ಜೈನ ಸಂಸ್ಥೆಯು ಕೈ ಜೋಡಿಸಿದ್ದು ಸಾರ್ವಜನಿಕ ಸ್ಥಳಗಳಲ್ಲಿ ಸಣ್ಣ ನೀರಿನ ಟ್ಯಾಂಕ್‌ಗಳಲ್ಲಿ ನೀರನ್ನು ಇಟ್ಟು ಮರುದಿನ ನೀರನ್ನು ಬದಲಿಸಲುಕ್ರಮ ಕೈಗೊಳ್ಳಲಾಗುತ್ತದೆ ಎಂದರು. ಅಲ್ಲದೆ ಈಗಾಗಲೆ ಮನೆಗಳ ಮೇಲೆ ಮಣ್ಣಿನ ಬಟ್ಟಲುಗಳಲ್ಲಿ ನೀರನ್ನು ಇಡುವ ಆಂದೋಲನಕ್ಕೆ ಪಟ್ಟಣದ ಜನತೆ ಕೈಜೋಡಿಸಿದ್ದಾರೆ. ಇದೀಗ ಬಸವೇಶ್ವರನಗರದ ರಾಮಕೃಷ್ಣಪ್ಪ ಅವರು ತಮ್ಮ ಮನೆಯ ಮೇಲೆ ಬಟ್ಟಲಿನಲ್ಲಿ ನೀರನ್ನು ಇಟ್ಟಿದ್ದಾರೆ. ಇದರ ಜೊತೆಗೆ ರಸ್ತೆಯಲ್ಲಿ ನೀರನ್ನು ಇಡಲು ಸಣ್ಣ ಟ್ಯಾಂಕ್ ಕೊಡಿಸಲು ಮನವಿ ಮಾಡಿದ್ದಾರೆ. ವೇದಿಕೆಯಿಂದ ನಾಡು, ನುಡು, ಜಲ ಭಾಷೆಯ ವಿಚಾರಕ್ಕೆ ಮಾತ್ರ ಹೋರಾಟ ಸೀಮಿತವಾಗದೆ ಪ್ರಾಣಿಪಕ್ಷಿಗಳು ಉಳಿವಿಗೂ ಆಂದೋಲನ ಮಾಡಲಾಗುತ್ತಿದೆ ಎಂದರು.

ಪ್ರತಿಭಟನೆಯಲ್ಲಿ ವೇದಿಕೆ ಜಿಲ್ಲಾಧ್ಯಕ್ಷ ಬೇವೂರು ಯೋಗೀಶ್‌ಗೌಡ, ರಾಜ್ಯ ಉಪಾಧ್ಯಕ್ಷರುಗಳಾದ ರಂಜಿತ್‌ಗೌಡ, ಬೆಳಕು ಶ್ರೀಧರ್, ಮೆಣಸಿಗನಹಳ್ಳಿ ರಾಮಕೃಷ್ಣಪ್ಪ, ರಾಜು, ಜಯರಾಮು, ವೆಂಕಟರಾಮು, ಆಟೋ ಚಾಲಕ ಮಂಜು, ನಂದೀಶ್, ರ್‍ಯಾಂಬೋ ಸೂರಿ, ಕೃಷ್ಣಪ್ಪ, ಪರಶುರಾಮು ಇತರರು ಇದ್ದರು.

# ವಿದ್ಯಾಸಿರಿ ಶಾಲೆಯಲ್ಲಿ ಸಿರಿ ಸಂಭ್ರಮ

**ಹುಳಿಯಾರು:** ವಿದ್ಯಾಸಿರಿ ನ್ಯಾಷನಲ್ ಪಬ್ಲಿಕ್ ಸ್ಕೂಲ್ ಬೋರನಕಣಿವೆ ಶಾಲೆಯಲ್ಲಿ ಸಿರಿ ಸಂಭ್ರಮ-2024 ಎಂಬ ಶೀರ್ಷಿಕೆ ಅಡಿಯಲ್ಲಿ ಮಕ್ಕಳ ಸಾಂಸ್ಕೃತಿಕ ಹಬ್ಬವನ್ನು ಅದ್ದೂರಿಯಾಗಿ ಆಚರಿಸಲಾಯಿತು.

ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಸದಸ್ಯರಾದ ಡಾ.ಕೆ.ಟಿ ತಿಪ್ಪೇಸ್ವಾಮಿ ಮಾತನಾಡಿ ಈ ಶಾಲೆಯಲ್ಲಿ ಮಕ್ಕಳ ಕಲಿಕೆ ಮನೋವಿಜ್ಞಾನ ಆಧಾರಿತವಾಗಿ ನಡೆಯುತ್ತಿರುವುದು ವಿಶೇಷ. ಶಾಲಾ ವಾರ್ಷಿಕ ವರದಿ ಕೇಳಿ, ಶಾಲೆಯ ಸಾಧನೆಗಳನ್ನು ತಿಳಿದು ಸಂತೋಷವಾಯಿತು. ಪೋಷಕರು ಮಕ್ಕಳಿಗೆ ಒತ್ತಡ ಹಾಕದೆ ಸಹಜವಾಗಿ ಕಲಿಯಲು ಅನುವು ಮಾಡಿಕೊಡಬೇಕು. ಮಕ್ಕಳನ್ನು ಮೊಬೈಲ್ ನಿಂದ ಮೊದಲು ದೂರವಿರಿಸಿ ಎಂದರು. ಸಿರಾದ ಅಬಕಾರಿ ಇನ್ಸ್‌ಪೆಕ್ಟರ್ ಮಂಜುನಾಥ ಎಸ್.ಎಚ್ ರವರು ಮಾತನಾಡಿ ಪ್ರತಿಭೆಗಳು ಹುಟ್ಟುವುದು ಬಡತನದಲ್ಲಿ ಮತ್ತು ಗ್ರಾಮೀಣ ಭಾಗದಲ್ಲಿ, ಅತಿ ಕಡಿಮೆ ಅವಧಿಯಲ್ಲಿ ವಿದ್ಯಾಸಿರಿ ಶಾಲೆಯ ಪ್ರಗತಿ ಈ ಭಾಗದಲ್ಲಿ ಭರವಸೆ ಮೂಡಿಸಿದೆ ಎಂದರು. ಈ ಶಾಲೆಯ ವಿದ್ಯಾರ್ಥಿಗಳು ಪ್ರತಿಭಾ ಕಾರಂಜಿಯಲ್ಲಿ 22 ಸ್ಪರ್ಧೆಗಳಲ್ಲಿ ಭಾಗವಹಿಸಿ 18 ಬಹುಮಾನಗಳನ್ನು ಪಡೆದಿರುವುದು ಈ ಶಾಲೆ ಪ್ರತಿಭೆಗಳ ಗಣಿ ಎಂಬುದನ್ನು ಸಾಬೀತುಪಡಿಸಿದೆ ಎಂದರು.

ಹಿರಿಯ ಮತ್ತು ಖ್ಯಾತ ವೈದ್ಯರಾದ ಡಾ.ರಾಮಕೃಷ್ಣ ಮಾತನಾಡಿ ನಿಜವಾದ ಸೇವಾ ಮನೋಭಾವದಿಂದ ಶಿಕ್ಷಣ ನೀಡುತ್ತಿರುವುದು



ಇಂತಹ ಗ್ರಾಮೀಣ ಸಂಸ್ಥೆಗಳೇ, ನಗರದಲ್ಲಿ ಶಿಕ್ಷಣ ಇತ್ತೀಚೆಗೆ ವ್ಯಾಪಾರಿಕರಣ ಆಗುತ್ತಿದೆ. ಈ ಶಾಲೆಯಲ್ಲಿ ವಿದ್ಯೆಯೇ ಸಿರಿಯಾಗಿದೆ ಈ ಶಿಕ್ಷಣ ಸಂಸ್ಥೆ ಇನ್ನಷ್ಟು ಎತ್ತರಕ್ಕೆ ಬೆಳೆಯುವಲ್ಲಿ ಯಾವ ಸಂಶಯವಿಲ್ಲ ಎಲ್ಲರಿಗೂ ಶುಭವಾಗಲಿ ಎಂದು ಶುಭ ಕೋರಿದರು. ಹೊಯ್ಸಳಕಟ್ಟೆ ಕ್ಲಸ್ಟರ್ ಸಂಪನ್ಮೂಲ ವ್ಯಕ್ತಿಗಳಾದ ಗುರು ಶಾಂತಕುಮಾರ್, ಬೋರನಕಣಿವೆ ಸರ್ಕಾರಿ ಪ್ರೌಢಶಾಲೆ ಹಿರಿಯ ಶಿಕ್ಷಕರಾದ ರಮೇಶ್, ಸಂಸ್ಥಾಪಕ ಅಧ್ಯಕ್ಷರಾದ ಕಾಮಾಕ್ಷಮ್ಮ, ಕಾರ್ಯದರ್ಶಿ ಕುಮಾರ್, ಶಾಲೆಯ ಮುಖ್ಯೋಪಾಧ್ಯಾಯರಾದ ಆಫಿಯಾ ತಬಸುಂ ಹಾಜರಿದ್ದರು.

# ದೇವೇಗೌಡರ ಗರಡಿಯಲ್ಲಿ ಪಳಗಿದ ಸೋಮಣ್ಣ

**ಹುಳಿಯಾರು:** ಈ ಸೋಮಣ್ಣ ದೇವೇಗೌಡರ ಗರಡಿಯಲ್ಲಿ ಪಳಗಿದವನು. ಸರ್ಕಾರದ ಖಜಾನೆಯಿಂದ ಹೇಗೆ ಹಣ ತರಬೇಕೆಂಬುದನ್ನು ನಾ ಬಲ್ಲೆ. ಬೆಂಗಳೂರಿನಂತೆ ತುಮಕೂರನ್ನೂ ಅಭಿವೃದ್ಧಿ ಮಾಡುತ್ತೇನೆ. ನನ್ನನ್ನು ಈ ಚುನಾವಣೆಯಲ್ಲಿ ಗೆಲ್ಲಿಸಿ. ಇದು ತುಮಕೂರು ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ವಿ.ಸೋಮಣ್ಣ ಅವರ ಪ್ರಚಾರದ ನುಡಿ.

ಹುಳಿಯಾರು ಹೋಬಳಿಯ ಹೊಯ್ಸಲಕಟ್ಟೆ, ದಸೂಡಿ, ಸೋಮನಹಳ್ಳಿ, ಗಾಣಧಾಳು ಗ್ರಾಮಗಳಲ್ಲಿ ಗುರುವಾರ ಚುನಾವಣಾ ಪ್ರಚಾರ ಮಾಡಿ ಅವರು ಮಾತನಾಡಿದರು.

ಚುನಾವಣಾ ಪ್ರಚಾರದ ನಿಮಿತ್ತ ಚಿಕ್ಕನಾಯಕನಹಳ್ಳಿ ಕ್ಷೇತ್ರದಲ್ಲಿ ಸಂಚರಿಸುವಾಗ ಈ ತಾಲೂಕಿಗೆ ನೀರಾವರಿಗೆ ಆದ್ಯತೆ ಕೊಡದಿದ್ದರೆ ಜನರ ಜೀವನ ಕಷ್ಟ ಎಂಬುದನ್ನು ಅರಿತಿದ್ದೇನೆ. ಶಾಸಕ ಸಿ.ಬಿ.ಸುರೇಶ್‌ಬಾಬು ಗೆದ್ದ ಸಂದರ್ಭದಲ್ಲೆಲ್ಲಾ ಬೇರೆ ಪಕ್ಷ ಅಧಿಕಾರದಲ್ಲಿದ್ದಿದ್ದರಿಂದ ನೀರಾವರಿ ಯೋಜನೆ ಪೂರ್ಣಗೊಳಿಸಲು ಸಾಧ್ಯವಾಗಲಿಲ್ಲ. ಈ ಚುನಾವಣೆಯಲ್ಲಿ ನನ್ನನ್ನು ಗೆಲ್ಲಿಸಿದರೆ ಸುರೇಶ್ ಬಾಬು ಜೊತೆ ರಾಜ್ಯ ಸರ್ಕಾರದ ಅನುದಾನ ಹಾಗೂ ಕೇಂದ್ರದ ಹಣ ತಂದು ನೀರಾವರಿ ಯೋಜನೆ ಪೂರ್ಣಗೊಳಿಸುತ್ತೇನೆ ಎಂದು ಭರವಸೆ ನೀಡಿದರು.

ದೇಶ ಸುಭದ್ರವಾಗಿದ್ದರೆ ಮಾತ್ರ ನಾವೆಲ್ಲರೂ ಸುಖದಿಂದ ನೆಮ್ಮದಿಯಿಂದ ಬಾಳಲು ಸಾಧ್ಯ. ಅಂತಹ ಕನಸಿಗೆ ಬಣ್ಣ ತುಂಬಿ ಅದನ್ನು ನನಸು ಮಾಡಿದ್ದು ಪ್ರಧಾನಿ ನರೇಂದ್ರ ಮೋದಿಯವರು. ಅತ್ಯಂತ ಸ್ವಚ್ಛ ಆಡಳಿತ ಪ್ರಧಾನ ಮಂತ್ರಿ ನರೇಂದ್ರ ಮೋದಿಯವರ ನೇತೃತ್ವದಲ್ಲಿ ನಡೆದಿದೆ. ದೇಶದ ರೈತರಿಗಾಗಿ ಅನೇಕ ಯೋಜನೆಗಳನ್ನು ಜಾರಿಗೊಳಿಸಿದ್ದಲ್ಲದೆ, ನೇರವಾಗಿ ರೈತರ ಖಾತೆಗೆ ಹಣ ಜಮೆ ಮಾಡುವ ಮೂಲಕ ಮೋದಿಯವರು ರೈತಪರ ಕೆಲಸವನ್ನು ಮಾಡಿದ್ದಾರೆ. ಅಲ್ಲದೆ ಈ ದೇಶವನ್ನು ಆರ್ಥಿಕ ಮಟ್ಟದಲ್ಲಿ ಮೂರನೆ ಸ್ಥಾನಕ್ಕೆ ತಂದು ನಿಲ್ಲಿಸುವ ಸಂಕಲ್ಪ ಮಾಡಿದ್ದಾರೆ ಅದಕ್ಕೆ ಮತ್ತೊಮ್ಮೆ ಇಂತಹ ನಾಯಕನನ್ನು ಪ್ರಧಾನಿಯನ್ನಾಗಿ ಮಾಡಲು ಬಿಜೆಪಿ ಮತ ನೀಡಿ ಎಂದು ಮನವಿ ಮಾಡಿದರು.

ಶಾಸಕ ಸಿ.ಬಿ.ಸುರೇಶ್‌ಬಾಬು, ಜಿಪಂ ಮಾಜಿ ಸದಸ್ಯ ರಾಮಚಂದ್ರಯ್ಯ, ಮುಖಂಡರಾದ ದಬ್ಬಗುಂಟೆ ರವಿಕುಮಾರ್ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

# ನಕಲಿ ಸಾಗರೋತ್ತರ ಉದ್ಯೋಗಗಳನ್ನು ನೀಡುವಿಕೆ ಮತ್ತು ಅಕ್ರಮ ನೇಮಕಾತಿ ಕುರಿತು ಎಚ್ಚರಿಕೆವಹಿಸಲು ಸಲಹೆ

**ಬೆಂಗಳೂರು:** ನೋಂದಣಿಯಾಗದ ನೇಮಕಾತಿ ಏಜೆಂಟರು ಒದಗಿಸುವ ನಕಲಿ ಉದ್ಯೋಗದ ಕೊಡುಗೆಗಳಿಂದ ವಂಚನೆಗೆ ಒಳಗಾಗುವ ವಿದೇಶಿ ಉದ್ಯೋಗಾಕಾಂಕ್ಷಿಗಳ ಸಂಖ್ಯೆಯಲ್ಲಿ ಭಾರಿ ಏರಿಕೆ ಕಂಡುಬಂದಿದೆ ಮತ್ತು ಹೆಚ್ಚುವರಿಯಾಗಿ ರೂ.2 ಲಕ್ಷದಿಂದ ರಿಂದ 5 ಲಕ್ಷಗಳವರೆಗೆ ಶುಲ್ಕ ವಿಧಿಸುವುದು ಕೂಡಾ ಕಂಡು ಬಂದಿದೆ. ಈ ನೋಂದಾಯಿಸದ / ಅಕ್ರಮ ಏಜೆಂಟ್ ಗಳು ವಿದೇಶಾಂಗ ವ್ಯವಹಾರಗಳ ಸಚಿವಾಲಯದಿಂದ ಪರವಾನಗಿ ಪಡೆಯದೆ ಕಾರ್ಯನಿರ್ವಹಿಸುತ್ತಿರುತ್ತಾರೆ, ವಿದೇಶದಲ್ಲಿ ಕೆಲಸ ಮಾಡಲು ನೇಮಕಾತಿ ಮಾಡುವುದಕ್ಕೆ ಏಜೆನ್ಸಿಗಳು ವಿದೇಶಾಂಗ ವ್ಯವಹಾರಗಳ ಸಚಿವಾಲಯದಿಂದ ಪರವಾನಗಿ ಪಡೆಯುವುದು ಕಡ್ಡಾಯವಾಗಿದೆ. ಆದರೆ ಹಲವು ಅಕ್ರಮ ಏಜೆಂಟ್‌ಗಳು ಫೇಸ್‌ಬುಕ್, ವಾಟ್ಸಾಪ್, ಟೆಕ್ಸ್ಟ್ ಮೆಸೇಜ್ ಮತ್ತು ಇತರ ಮಾಧ್ಯಮಗಳ ಮೂಲಕ ಕಾರ್ಯನಿರ್ವಹಿಸುತ್ತಿದ್ದಾರೆ ಎಂದು ವರದಿಯಾಗಿದೆ. ಈ ಏಜೆನ್ಸಿಗಳು ಅವರ ಇರುವಿಕೆ ಮತ್ತು ಅವರನ್ನು ಸಂಪರ್ಕಿಸುವ ಬಗ್ಗೆ ಬಹಳ ಕಡಿಮೆ ವಿವರಗಳನ್ನು ಒದಗಿಸುತ್ತವೆ ಅಥವಾ ಯಾವುದೇ ವಿವರಗಳನ್ನು ಒದಗಿಸುವುದಿಲ್ಲ. ಅವರು ಸಾಮಾನ್ಯವಾಗಿ ಕೇವಲ ವಾಟ್ಸಾಪ್ ಮೂಲಕ ಮಾತ್ರವೇ ಸಂವಹನ ನಡೆಸುತ್ತಾರೆ. ಇದರಿಂದಾಗಿ ಕರೆ ಮಾಡಿದವರ ಸ್ಥಳವನ್ನು ಮತ್ತು ಅವರನ್ನು ಗುರುತಿಸುವುದು ಮತ್ತು ಅವರು ಕೊಡಮಾಡುವ ಕೆಲಸದ ಕುರಿತಂತೆ ಅದರ ನೈಜತೆಯನ್ನು ಖಚಿತಪಡಿಸಿಕೊಳ್ಳುವುದು ಕಷ್ಟವಾಗುತ್ತದೆ. ಅಂತಹ ಏಜೆಂಟ್‌ಗಳು ಕಾರ್ಮಿಕರನ್ನು ಕಷ್ಟಕರ ಮತ್ತು ಜೀವಕ್ಕೆ ಅಪಾಯಕಾರಿ ಪರಿಸ್ಥಿತಿಗಳಲ್ಲಿ ಕೆಲಸ ಮಾಡಲು ಆಮಿಷವೊಡ್ಡುತ್ತಾರೆ. ಹಲವಾರು ಪೂರ್ವ ಯುರೋಪಿಯನ್ ರಾಷ್ಟ್ರಗಳು, ಕೆಲವು ಗಲ್ಫ್ ರಾಷ್ಟ್ರಗಳು, ಮಧ್ಯ ಏ?ಾ?ಯದ ದೇಶಗಳು, ಇಸ್ರೇಲ್, ಕೆನಡಾ, ಮ್ಯಾನ್ಮಾರ್ ಮತ್ತು ಲಾವೊ ಪೀಪಲ್ಸ್ ಡೆಮಾಕ್ರಟಿಕ್ ರಿಪಬ್ಲಿಕ್ ನಲ್ಲಿ ಕೆಲಸ ಮಾಡಲು ನೇಮಕಾತಿಗಾಗಿ ಆಮಿಷವೊಡ್ಡುವ ಇಂತಹ ಪ್ರಕರಣಗಳು ವರದಿಯಾಗುತ್ತಿವೆ. ಮಾನ್ಯತೆ ಇರುವ ಉದ್ಯೋಗಾವಕಾಶಗಳು ಎಂದರೆ ಅದು ನೇಮಕಾತಿ ಏಜೆಂಟ್, ವಿದೇಶದಲ್ಲಿರುವ ಉದ್ಯೋಗದಾತ, ಮತ್ತು ವಲಸೆ ಹೋಗಲು ಬಯಸುವ ಕೆಲಸಗಾರ ಈ ಮೂವರೂ ಸಹಿ ಮಾಡಿದ ಒಂದು ಉದ್ಯೋಗ ಒಪ್ಪಂದದ ಜೊತೆಗೆ ಬರುತ್ತದೆ. ಅಂತಹ ಉದ್ಯೋಗದ ಒಪ್ಪಂದ ಪತ್ರದಲ್ಲಿ, ನೀಡಲಾಗುವ ಕೆಲಸಕ್ಕೆ ಸಂಬಂಧಪಟ್ಟ ನಿಯಮಗಳು, ಷರತ್ತುಗಳು, ಸಂಬಳ ಮತ್ತು ಇತರ ಭತ್ಯೆಗಳನ್ನು ನಮೂದಿಸಬೇಕು. ಮಾನ್ಯತೆ ಇರುವ ಉದ್ಯೋಗಾವಕಾಶಗಳು ಪ್ರವಾಸಿ ವೀಸಾವನ್ನು ಹೊರತುಪಡಿಸಿ ಉದ್ಯೋಗ ವೀಸಾ, ಕೆಲಸದ ವೀಸಾ ಅಥವಾ ಇತರ ರೀತಿಯ ವೀಸಾಗಳ ಆಧಾರದ ಮೇಲೆ ವಲಸೆ ಹೋಗಲು ಅವಕಾಶ ನೀಡಬೇಕು. ಪ್ರವಾಸಿ ವೀಸಾವನ್ನು ಪ್ರವಾಸೋದ್ಯಮದ ಉದ್ದೇಶಕ್ಕಾಗಿ ಮಾತ್ರ ಬಳಸಬೇಕು ಎಂಬುದನ್ನು ಗಮನಿಸಿ. ಸಾಮಾನ್ಯವಾಗಿ, ಪ್ರತಿಷ್ಠಿತ ವಿದೇಶಿ ಉದ್ಯೋಗದಾತರು ವಿಮಾನ ದರ, ಊಟ, ವಸತಿ ಮತ್ತು ವಿಮೆಯ ವೆಚ್ಚವನ್ನು ಒದಗಿಸುತ್ತಾರೆ. ವಲಸೆ ಹೋಗಲು ಬಯಸುವ ಕಾರ್ಮಿಕರು ಅವರು ಹೋಗಬೇಕಾಗಿರುವ ದೇಶದ ಸ್ಥಳೀಯ ಪರಿಸ್ಥಿತಿಗಳ ಬಗ್ಗೆ ಸ್ವತಃ ತಿಳಿದುಕೊಳ್ಳಬೇಕು. ಇದರ ಬಗ್ಗೆ ಮಾಹಿತಿಯನ್ನು ಅವರು ನಿರ್ಗಮನ-ಪೂರ್ವ ಓರಿಯಂಟೇಶನ್ ತರಬೇತಿ (ಪಿ.ಡಿ.ಓ.ಟಿ) ಕೇಂದ್ರಗಳಿಗೆ ಹಾಜರಾಗುವ ಮೂಲಕ ಅಥವಾ ಅವರು ಹೋಗಬೇಕಾಗಿರುವ ವಿದೇಶದ ಭಾರತೀಯ ರಾಯಭಾರ ಕಚೇರಿಯ ಸಮುದಾಯ ಕಲ್ಯಾಣ ವಿಭಾಗದಿಂದ ಪಡೆಯಬಹುದು. ನೋಂದಾಯಿತ ನೇಮಕಾತಿ ಏಜೆಂಟರು ವಲಸೆ ಕಾರ್ಮಿಕರಿಗೆ ಪ್ರವಾಸಿ ಭಾರತೀಯ ವಿಮಾ ಯೋಜನೆಯನ್ನು (ಪಿಬಿಬಿವೈ) ಖರೀದಿಸುವುದನ್ನು ಭಾರತ ಸರ್ಕಾರವು ಕಡ್ಡಾಯಗೊಳಿಸಿದೆ. ಈ ವಿಮಾ ಯೋಜನೆಗೆ ಒಂದು ಬಾರಿ ಪ್ರೀಮಿಯಂ ಪಾವತಿಸಬೇಕಾಗಿದ್ದು (ಎರಡು ವರ್ಷಗಳ ವಿಮೆಗೆ ರೂ. 275 ಮತ್ತು ಮೂರು ವರ್ಷಗಳ ವಿಮೆಗೆ ರೂ. 375) ಇದು ಸಾವಿನ ಪ್ರಕರಣಗಳಲ್ಲಿ ಮತ್ತು ಕೆಲಸಕ್ಕೆ ಸಂಬಂಧಿಸಿದ ಗಾಯ ಮತ್ತು ವೈದ್ಯಕೀಯ ವೆಚ್ಚಗಳ ಮೇಲೆ 10 ಲಕ್ಷ ಮೊತ್ತದ ವಿಮೆಯೂ ಸೇರಿದಂತೆ ವಿವಿಧ ಪ್ರಯೋಜನಗಳನ್ನು ಒದಗಿಸುತ್ತದೆ.

# ಮತದಾನ ನಮ್ಮೆಲ್ಲರ ಕರ್ತವ್ಯ: ಇಒ

**ಮಂಡ್ಯ:** ಒಂದೊಂದು ಮತ ಕೂಡ ತನ್ನದೇ ಆದ ಮಹತ್ವವನ್ನು ಹೊಂದಿರುತ್ತದೆ. ದೇಶದ ಸುಭದ್ರತೆ ಹಾಗೂ ಉತ್ತಮ ನಾಯಕತ್ವಕ್ಕೆ ಮತ ಚಲಾಯಿಸುವುದರ ಮೂಲಕ ಉತ್ತಮ ಆಭ್ಯರ್ಥಿಯ ಆಯ್ಕೆ ನಿಮ್ಮದಾಗಿರುತ್ತದೆ . ಚುನಾವಣಾ ಪರ್ವ ದೇಶದ ಗರ್ವ ಎಂದು ಕಾರ್ಯನಿರ್ವಾಹಕ ಅಧಿಕಾರಿ ಲೋಕೇಶ್ ಮೂರ್ತಿ ರವರು ಹೇಳಿದರು.

ಪಾಂಡವಪುರ ತಾಲೂಕಿನ ಕೆನ್ನಾಳು ಗ್ರಾಮ ಪಂಚಾಯತ್ ವ್ಯಾಪ್ತಿಯ ಶಂಭುಲಿಂಗೇಶ್ವರ ಶಿಕ್ಷಣ ಸಂಸ್ಥೆ ಮತ್ತು ಕಾಲೇಜು ಸಹಯೋಗದಲ್ಲಿ ಸ್ವೀಪ್ ಚಟುವಟಿಕೆ ಕಾರ್ಯಕ್ರಮ ಕುರಿತು ಮಾತನಾಡಿದ ಅವರು ಮತದಾನ ದಿವಸ ಎಲ್ಲಾ ಕೆಲಸವನ್ನು ಬದಿಗಿಟ್ಟು ಮತದಾನ ಮಾಡಬೇಕು. ಯಾವುದೇ ಆಸೆ ಆಮಿಷಗಳಿಗೆ ಒಳಗಾಗದೆ ತಪ್ಪದೆ ಮತ ಚಲಾಯಿಸಿ ಎಲ್ಲರೂ ಕಡ್ಡಾಯವಾಗಿ ಮತದಾನ ಮಾಡಬೇಕು ಎಂದರು. 18 ವರ್ಷ ವಯಸ್ಸಿನ ಪ್ರತಿಯೊಬ್ಬರು ಮತದಾನ ಮಾಡಲು ನಮ್ಮ ಸಂವಿಧಾನ ಅವಕಾಶ ಕಲ್ಪಿಸಿದ್ದು, ನನ್ನ ಮತ ನನ್ನ ಹಕ್ಕು ಎಂಬ ಘೋಷವಾಕ್ಯದೊಡನೆ ಯುವಕ ಯುವತಿಯರು ಮತದಾನ ಮಾಡುವುದರ ಮೂಲಕ ದೇಶದ ಅಭಿವೃದ್ಧಿಗೆ ಸ್ವ-ಇಚ್ಛೆಯಿಂದ ಆರ್ಹ ಅಭ್ಯರ್ಥಿಗೆ




ಮತ ಚಲಾಯಿಸಬೇಕು. ಗ್ರಾಮೀಣ ಭಾಗದ ಜನರು ಮತದಾನ ಪ್ರಕ್ರಿಯೆಯಲ್ಲಿ ಉತ್ತಮ ಬೆಳವಣಿಗೆಯಾಗಿದ್ದು ಇದರಿಂದ ಯೋಗ್ಯ ಅಭ್ಯರ್ಥಿಯನ್ನು ಆಯ್ಕೆ ಮಾಡಲು ಅನುಕೂಲಕರವಾಗುತ್ತದೆ . ಮತದಾನದಿಂದ ಯಾರು ಕೂಡ ವಂಚಿತರಾಗಬಾರದು ಎಂದು ತಿಳಿಸಿದರು. ಮತದಾನ ಪ್ರತಿಜ್ಞಾನ ವಿಧಿ ಬೋಧಿಸಲಾಯಿತು. ಇದೇ ವೇಳೆ ಸಹಾಯಕ ನಿದೇಶಕರಾದ ಸುರೇಂದ್ರ, (ಗ್ರಾ.ಉ), ಖಖಇಖಿ ಶಿಕ್ಷಣ ಸಂಸ್ಥೆಯ ಸಂಸ್ಥಾಪಕರು ಪಂಚಲಿಂಗೇಗೌಡ, ಂಇಇ ಅಭಿಯಂತರರು ಮಹದೇವ್, ಪಿಡಿಓ ಹಾಗೂ ಎನ್, ಆರ್ , ಎಲ್ , ಎಂ ಸಿಬ್ಬಂದಿಗಳು ನರಸಿಂಹ, ವಿಕಾಸ್ , ನಾರಾಯಣ್ ಮಂಜುನಾಥ್ ಮತ್ತು ಸುರೇಶ್ ಹಾಗೂ ಸಂಸ್ಥೆಯ ಉಪನ್ಯಾಸಕರು ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

Postal Registration No.KA/BGW-1823/2019-2021, Posted at Patrika Channel, RMS Bhavan, Bengaluru PSO, Mysore Road, Bengaluru- 560020, RNI No.KARKAN/2002/08054

## ಮತ್ತೆ ಬಣ್ಣ ಹಚ್ಚಿದ ವಜ್ರಕಾಯ ಬೆಡಗಿ ಸ್ವಯಂಭುನಲ್ಲಿ ರಾಣಿಯಾದ ನಭಾ



ತೆಲುಗು ನಟ ನಿಖಿಲ್ ಸಿದ್ಧಾರ್ಥ್ ನಟಿಸುತ್ತಿರುವ ಕ್ರೇಜಿ ಪ್ಯಾನ್ ಇಂಡಿಯಾ ಪ್ರಾಜೆಕ್ಟ್ ಸ್ವಯಂಭು ಸಿನಿಮಾದ ಶೂಟಿಂಗ್ ಭರದಿಂದ ಸಾಗುತ್ತಿದೆ. ಸಹಸ್ರಮಾನಗಳ ಹಿಂದಿನ ಕಥೆಯನ್ನೊಳಗೊಂಡಿರುವ ಈ ಚಿತ್ರದ ಮೂಲಕ ವಜ್ರಕಾಯದ ಪಟಾಕ ಕಂಬ್ಯಾಕ್ ಮಾಡುತ್ತಿದ್ದಾರೆ. ಕನ್ನಡತಿ ನಭಾ ನಟೇಶ್‌ಗೆ 2023ರಲ್ಲಿ ರಸ್ತೆ ಅಪಘಾತಕ್ಕೆ ಒಳಗಾಗಿದ್ದರು. ಈ ವೇಳೆ ಅವರು ಸರ್ಜರಿಗೂ ಒಳಗಾಗಬೇಕಾಯಿತು. ಈಗ ಸಂಪೂರ್ಣ ಚೇತರಿಕೆ ಕಂಡಿರುವ ಶೃಂಗೇರಿ ಸುಂದರಿ ಸ್ವಯಂಭು ಸಿನಿಮಾ ಮೂಲಕ ಬಣ್ಣದ ಲೋಕದಲ್ಲಿ ಸೆಕೆಂಡ್ ಇನ್ನಿಂಗ್ಸ್ ಶುರು ಮಾಡುತ್ತಿದ್ದಾರೆ.

ಸ್ವಯಂಭು ಶೂಟಿಂಗ್ ಅಖಾಡಕ್ಕೆ ನಭಾ ಎಂಟ್ರಿ ಕೊಟ್ಟಿದ್ದಾರೆ. ಸಣ್ಣ ಝಲಕ್ ಮೂಲಕ ಚಿತ್ರತಂಡ ಆಕೆಯನ್ನು ಚಿತ್ರಪ್ರೇಮಿಗಳಿಗೆ ಪರಿಚಯಿಸಿದೆ. ರಾಣಿಯಂತೆ ಕಂಗೊಳಿಸುತ್ತಿರುವ ನಭಾ ಲುಕ್ ರಿವೀಲ್ ಮಾಡಲಾಗಿದೆ. ಆದ್ರೆ, ಪಾತ್ರದ ಬಗ್ಗೆ ಚಿತ್ರತಂಡ ಗುಟ್ಟು ಬಿಟ್ಟು ಕೊಟ್ಟಿಲ್ಲ. ಶಿವಣ್ಣ ನಟನೆಯ ವಜ್ರಕಾಯ ಚಿತ್ರದ ಮೂಲಕ ಸಿನಿಮಾ ಲೋಕದಲ್ಲಿ ಅದೃ?ಟ ಪರೀಕ್ಷೆಗಿಳಿದಿದ್ದ ನಭಾ, ಪೂರಿ ಜಗನ್ನಾಥ್ ನಿರ್ದೇಶನದ ಇಸ್ಮಾರ್ಟ್ ಶಂಕರ್ ಮೂಲಕ ಪ್ರಖ್ಯಾತಿ ಗಳಿಸಿದರು.

ನಿಖಿಲ್ ನಾಯಕ ನಟನಾಗಿರುವ ಸ್ವಯಂಭು ಸಿನಿಮಾದಲ್ಲಿ ಸಂಯುಕ್ತ ಮೆನನ್ ನಾಯಕಿಯಾಗಿ ನಟಿಸುತ್ತಿದ್ದಾರೆ. ತಮ್ಮ ಪಾತ್ರಕ್ಕಾಗಿ ಅವರು ತಯಾರಿಯಲ್ಲಿದ್ದಾರೆ. ಅಂದಹಾಗೇ ಭರತ್ ಕೃ?ಣಮಾಚಾರಿ ಸ್ವಯಂಭು ಆಕ್ಷನ್ ಕಟ್ ಹೇಳಿದ್ದಾರೆ.

ಪಿಕ್ಸೆಲ್ ಸ್ಟುಡಿಯೋ ಮೂಲಕ ಭುವನ್ ಹಾಗೂ ಶ್ರೀಕರ್ ಚಿತ್ರ ನಿರ್ಮಾಣ ಮಾಡುತ್ತಿದ್ದು, ಟ್ಯಾಗೋರೆ ಮಧು ಪ್ರಸ್ತುತಪಡಿಸುತ್ತಿದ್ದಾರೆ. ಸ್ವಯಂಭೂ ಎಂದರೆ ಸ್ವಯಂ ಹುಟ್ಟು ಎಂದರ್ಥ. ಈ ಸಿನಿಮಾ ನಿಖಿಲ್ ಸಿದ್ದಾರ್ಥ್ ವೃತ್ತಿಜೀವನದ ಬಿಗ್ ಬಜೆಟ್ ಚಿತ್ರವಾಗಿದೆ. ಮನೋಜ್ ಪರಮಹಂಸ ಛಾಯಾಗ್ರಹಣ, ರವಿ ಬಸ್ರೂರ್ ಸಂಗೀತ, ವಾಸುದೇವ್ ಮುನೆಪ್ಪಗರಿ ಚಿತ್ರಕ್ಕೆ ಸಂಭಾ?ಣೆಯನ್ನು ನೀಡಿದ್ದಾರೆ.

## ಮೊದಲ ಮಗುವಿನ ನಿರೀಕ್ಷೆಯಲ್ಲಿದ್ದಾರೆ ಅಹಂ ಪ್ರೇಮಾಸ್ಮಿ ನಟಿ



ಮುಂಬೈ ಬೆಡಗಿ ಆರತಿ ಛಾಬ್ರಿಯಾ ತಮ್ಮ ಅಭಿಮಾನಿಗಳಿಗೆ ಸಿಹಿಸುದ್ದಿ ಕೊಟ್ಟಿದ್ದಾರೆ. ಇದೀಗ ಮೊದಲ ಮಗುವಿನ ನಿರೀಕ್ಷೆಯಲ್ಲಿದ್ದಾರೆ. ಬೇಬಿ ಬಂಪ್ ವಿಡಿಯೋ ಶೇರ್ ಮಾಡಿ ನಟಿ ಪ್ರೆಗ್ನೆನ್ಸಿ ಸುದ್ದಿ ತಿಳಿಸಿದ್ದಾರೆ.

ಬೇಬಿ ಬಂಪ್ ನಟಿ ವಿಶೇಷ ವಿಡಿಯೋ ಶೇರ್ ಮಾಡಿದ್ದಾರೆ. ಮೊದಲ ಮಗುವಿನ ಆಗಮನಕ್ಕಾಗಿ ಎದುರು ನೋಡುತ್ತಿರುವ ವಿಚಾರ ತಿಳಿಸುತ್ತಿದ್ದಂತೆ ಸಾಮಾಜಿಕ ಜಾಲತಾಣದಲ್ಲಿ ನಟಿಗೆ ಫ್ಯಾನ್ಸ್ ಶುಭಕೋರುತ್ತಿದ್ದಾರೆ. ಬಾಲಿವುಡ್ ನಟಿ ಆರತಿ ಛಾಬ್ರಿಯಾ ಅವರು 2019ರಲ್ಲಿ ಆಸ್ಟ್ರೇಲಿಯಾ ಮೂಲದ ಚಾರ್ಟರ್ಡ್ ಅಕೌಂಟೆಂಟ್ ವಿಶಾರದ್ ಬೀಡಸ್ಸಿ ಜೊತೆ ಮದುವೆಯಾಗಿದ್ದಾರೆ. ಈ ಜೋಡಿ 5 ವ?ರ್ಗಗಳ ನಂತರ ಸಿಹಿಸುದ್ದಿ ಕೊಟ್ಟಿದ್ದಾರೆ.

ಅಂದಹಾಗೆ ನಟಿ ಆರತಿ, ಕನ್ನಡದ ಅಹಂ ಪ್ರೇಮಾಸ್ಮಿ, ಸಂತ, ರಜನಿ ಸೇರಿದಂತೆ ಹಲವು ಸಿನಿಮಾಗಳಲ್ಲಿ ನಟಿಸಿದ್ದಾರೆ.

## ಹಿಮಾಚಲದ ಪಹಾಡಿ ಹುಡುಗಿಯಾದ ನಟಿ ರೂಪಾಲಿ ಸೂದ್



ಶಿಮ್ಲಾದ ಸುಂದರಿ ರೂಪಾಲಿ ಸೂದ್ ವೆಂಕ್ಯಾ ಸಿನಿಮಾದ ಮೂಲಕ ಕನ್ನಡಕ್ಕೆ ಬಂದಿರುವ ವಿಚಾರ ಗೊತ್ತೇ ಇದೆ. ಪವನ್ ಒಡೆಯರ್ ನಿರ್ಮಾಣದಲ್ಲಿ ಮೂಡಿ ಬರುತ್ತಿರುವ ವೆಂಕ್ಯಾ ಸಿನಿಮಾದಲ್ಲಿ ಈಕೆ ನಾಯಕಿಯಾಗಿ ನಟಿಸುತ್ತಿದ್ದಾರೆ. ಉತ್ತರ ಕರ್ನಾಟಕ ಹಿನ್ನೆಲೆಯ ಸಿನಿಮಾ ಇದಾಗಿದ್ದರೂ, ಈ ಚಿತ್ರದ ರೂಪಾಯಿ ಹಿಮಾಚಲದ ಪಹಾಡಿ ಹುಡುಗಿಯಾಗಿ ನಟಿಸುತ್ತಿದ್ದಾರೆ ಎನ್ನುವುದು ವಿಶೇ?.

ಮೂಲತಃ ಶಿಮ್ಲಾದವರಾದ ರೂಪಾಲಿ ಕಾಲೇಜು ದಿನಗಳಲ್ಲಿದ್ದಾಗಲೇ ಮಾಡೆಲಿಂಗ್ ಅಖಾಡಕ್ಕೆ ಇಳಿದಿದ್ದರು. ಮಾಡೆಲಿಂಗ್ ಜೊತೆ ಜೊತೆಯಲಿ ಹಲವು ಮ್ಯೂಸಿಕ್





ಆಲ್ಬಂಗಳಲ್ಲಿ ನಟಿಸಿರುವ ಈ ಶಿಮ್ಲಾ ಚೆಲುವೆ, ಹಾರ್ಡಿ ಸಂಧು ಅವರೊಂದಿಗಿನ ಸೂಪರ್ ಹಿಟ್ ಹಾಡು 'ಹಾರ್ನ್ ಬ್ಲೋ'ನಲ್ಲಿ ಹೆಜ್ಜೆ ಹಾಕಿದ್ದಾರೆ. ಇದೀಗ 'ವೆಂಕ್ಯಾ' ಸಿನಿಮಾದ ಪ್ರಮುಖ ಪಾತ್ರದಲ್ಲಿ ಅಭಿನಯಿಸುತ್ತಿದ್ದಾರೆ. ರೂಪಾಲಿ ಈಗಾಗಲೇ 'ವೆಂಕ್ಯಾ' ಶೂಟಿಂಗ್ ನಲ್ಲಿ ಭಾಗಿಯಾಗಿದ್ದಾರೆ. ಅವರು ಹಿಮಾಚಲದ ಪಹಾಡಿ ಹುಡುಗಿಯಾಗಿ ನಟಿಸುತ್ತಿದ್ದಾರೆ. ಶೂಟಿಂಗ್ ಅನುಭವ ಹಂಚಿಕೊಂಡಿರುವ ರೂಪಾಲಿ, 'ನಾವು ಇತ್ತೀಚೆಗೆ ಮನಾಲಿಯ ಮುಂದೆ ಕೈಲಾಂಗ್ನಲ್ಲಿ, ಪರ್ವತಗಳ ನಡುವೆ ಸುಂದರವಾದ ಸ್ಥಳದಲ್ಲಿ ಕೆಲವು ಭಾಗಗಳನ್ನು ಚಿತ್ರೀಕರಿಸಿದ್ದೇವೆ. ಇದು ನನ್ನ ಸಿನಿಮಾ ವೃತ್ತಿಜೀವನಕ್ಕೆ ಅದ್ಭುತ ಆರಂಭ' ಎಂದು ಸಂತಸ ವ್ಯಕ್ತಪಡಿಸಿದ್ದಾರೆ. 'ಡೊಳ್ಳು' ಸಿನಿಮಾ ನಿರ್ಮಾಣ ಮಾಡಿದ್ದ ಪವನ್ ಒಡೆಯರ್ ವೆಂಕ್ಯಾನಿಗೂ ಸಾಥ್ ಕೊಟ್ಟಿದ್ದಾರೆ. ಒಡೆಯರ್ ಫಿಲ್ಮ್ಸ್ ನಡಿ ತಯಾರಾಗ್ತಿರುವ ಈ ಚಿತ್ರಕ್ಕೆ ಅವಿನಾಶ್ ವಿ ರೈ ಮತ್ತು ಮೋಹನ್ ಲಾಲ್ ಮೆನನ್ ಕೂಡ ಹಣ ಹಾಕಿದ್ದಾರೆ. ಉತ್ತರ ಕರ್ನಾಟಕವನ್ನು ಕಥೆ ಆಧಾರಿಸಿ ಮೂಡಿ ಬರುತ್ತಿರುವ 'ವೆಂಕ್ಯಾ' ಚಿತ್ರದ ಚಿತ್ರಕಥೆ ಮತ್ತು ಸಂಭಾಷಣೆಯನ್ನು ಶ್ರೀನಿಧಿ ಡಿಎಸ್ ಬರೆದಿದ್ದಾರೆ, ಪ್ರಣವ್ ಮುಲೆ ಅವರ ಛಾಯಾಗ್ರಹಣ ಮತ್ತು ಹೇಮಂತ್ ಜೋಯಿಸ್ ಸಂಗೀತ ನೀಡಿದ್ದಾರೆ.

### ಮಿಸ್ಟರ್‌-360 ಸೂರ್ಯಕುಮಾರ್ ಕಂಬ್ಯಾಕ್

## ಮುಂಬೈ ತಂಡಕ್ಕಿನ್ನು ಆನೆ ಬಲ!



ವಿಶ್ವದ ನಂ.1 ಟಿ20 ಬ್ಯಾಟರ್ ಹಾಗೂ ಮುಂಬೈ ಇಂಡಿಯನ್ಸ್ ತಂಡ ಸ್ಟಾರ್ ಆಟಗಾರ ಸೂರ್ಯಕುಮಾರ್ ಯಾದವ್ ಸಂಪೂರ್ಣ ಫಿಟ್ ಆಗಿದ್ದು ಸದ್ಯದಲ್ಲೇ ಮುಂಬೈ ಇಂಡಿಯನ್ಸ್ ತಂಡವನ್ನು ಸೇರಲಿದ್ದಾರೆ ಎಂದು ಮೂಲಗಳು ತಿಳಿಸಿವೆ. ಇದರಿಂದ ಹ್ಯಾಟ್ರಿಕ್ ಸೋಲಿನಿಂದ ಕಂಗಾಲಾಗಿರುವ ಮುಂಬೈ ಇಂಡಿಯನ್ಸ್ ತಂಡಕ್ಕೆ ಆನೆಬಲ ಬಂದಂತಾಗಿದೆ.

ಸದ್ಯ ಮೆಡಿಕಲ್ ಫಿಟ್‌ನೆಸ್ ಪಾಸ್ ಮಾಡಿರುವ ಸೂರ್ಯ ಶುಕ್ರವಾರ (ಏ.5) ರಂದು ಮುಂಬೈ ಇಂಡಿಯನ್ಸ್ ತಂಡವನ್ನು ಸೇರಿಕೊಳ್ಳುವ ಸಾಧ್ಯತೆ ಇದೆ ಎನ್ನಲಾಗಿದೆ. ಎಲ್ಲವೂ ಅಂದುಕೊಂಡಂತೆ ನಡೆದರೆ, ಸೂಪರ್ ಸಂಡೇ (ಏ.7) ಡೆಲ್ಲಿ ಕ್ಯಾಪಿಟಲ್ಸ್ ವಿರುದ್ಧ ವಾಂಖೆಡೆ ಮೈದಾನದಲ್ಲಿ ನಡೆಯುವ ಪಂದ್ಯದಲ್ಲಿ ಸೂರ್ಯ ಕಣಕ್ಕಿಳಿದು ಅಬ್ಬರಿಸಲಿದ್ದಾರೆ.

2023ರ ವಿಶ್ವಕಪ್ ಬಳಿಕ ಆಸ್ಟ್ರೇಲಿಯಾ ವಿರುದ್ಧ ನಡೆದ 5 ಪಂದ್ಯಗಳ ಟಿ20 ತಂಡಕ್ಕೆ ನಾಯಕತ್ವ ವಹಿಸಿದ್ದ ಸೂರ್ಯ ದಕ್ಷಿಣ ಆಫ್ರಿಕಾ ವಿರುದ್ಧದ ಟಿ20 ಸರಣಿ ವೇಳೆ ಗಾಯಕ್ಕೆ ತುತ್ತಾಗಿದ್ದರು. ಸರಣಿಯ 3ನೇ ಪಂದ್ಯದಲ್ಲಿ ಭರ್ಜರಿ ಶತಕ ಸಿಡಿಸಿದ್ದ ಸ್ಕೈ ಪಾದದ ಗಾಯಕ್ಕೆ ತುತ್ತಾಗಿದ್ದರು. ಇದಾದ ಬಳಿಕ ಸೂರ್ಯಕುಮಾರ್ ಯಾದವ್ ಸ್ಪೋರ್ಟ್ಸ್ ಹೆರ್ನಿಯಾದಲ್ಲಿ ತಮ್ಮ ಪಾದದ ಶಸ್ತ್ರ ಚಿಕಿತ್ಸೆಗೆ ಒಳಗಾಗಿದ್ದರು. ಈ ಕಾರಣದಿಂದ ಅವರು ಸ್ಪರ್ಧಾತ್ಮಕ ಕ್ರಿಕೆಟ್‌ಗೆ ಕಮ್‌ಬ್ಯಾಕ್ ಮಾಡಲು ಸಾಧ್ಯವಾಗಿರಲಿಲ್ಲ. ಅಂದಿನಿಂದ ಇಲ್ಲಿಯವರೆಗೂ ಅವರು ಬೆಂಗಳೂರಿನ ನ್ಯಾಷನಲ್ ಕ್ರಿಕೆಟ್ ಅಕಾಡೆಮಿಯಲ್ಲಿ ಪುನರ್ವಸತಿ ಚಿಕಿತ್ಸೆ ಪಡೆಯುತ್ತಿದ್ದರು.

**ಫಿಟ್‌ನೆಸ್‌ನಲ್ಲಿ SKY ಪಾಸ್:** ಗಾಯದಿಂದ ಸಂಪೂರ್ಣ ಗುಣಮುಖರಾಗಿರುವ ಸೂರ್ಯಕುಮಾರ್ ಯಾದವ್ ಅವರು ಎನ್ ಸಿಎನಲ್ಲಿ ಫಿಟ್‌ನೆಸ್ ಪರೀಕ್ಷೆ ಪಾಸ್ ಮಾಡಿದ್ದಾರೆ. ಆದ್ದರಿಂದ ಅವರು ಶುಕ್ರವಾರ (ಏ.5) ರಂದು ಮುಂಬೈ ಇಂಡಿಯನ್ಸ್ ತಂಡವನ್ನು ಸೇರಿಕೊಳ್ಳುವ ಸಾಧ್ಯತೆ ಇದೆ ಎನ್ನಲಾಗಿದೆ.

**ಗೆಲುವಿನ ಖಾತೆ ತೆರೆಯುತ್ತಾ ಮುಂಬೈ?:** ಹಾರ್ದಿಕ್ ಪಾಂಡ್ಯ ನಾಯಕತ್ವದ ಮುಂಬೈ ಇಂಡಿಯನ್ಸ್ ತಂಡ 2024ರ ಇಂಡಿಯನ್ ಪ್ರೀಮಿಯರ್ ಲೀಗ್ (ಐಪಿಎಲ್) ಟೂರ್ನಿಯಲ್ಲಿ ಹ್ಯಾಟ್ರಿಕ್ ಸೋಲು ಅನುಭವಿಸಿದೆ. ಗುಜರಾತ್ ಟೈಟನ್ಸ್ ಎದುರು ತನ್ನ ಮೊದಲ ಪಂದ್ಯದಲ್ಲಿ ಸೋತಿದ್ದ ಮುಂಬೈ ಇಂಡಿಯನ್ಸ್, ನಂತರ ಸನ್ ರೈಸರ್ಸ್ ಹೈದರಾಬಾದ್ ಹಾಗೂ ರಾಜಸ್ಥಾನ್ ರಾಯಲ್ಸ್ ವಿರುದ್ಧವೂ ಸೋಲು ಅನುಭವಿಸಿತ್ತು. ಆರಂಭಿಕ ಮೂರು ಸೋಲುಗಳ ಕಾರಣ ಮುಂಬೈ ಇಂಡಿಯನ್ಸ್ ತಂಡ ಟೂರ್ನಿಯ ಅಂಕಪಟ್ಟಿಯಲ್ಲಿ ಗೆಲುವಿನ ಖಾತೆ ತೆರೆಯದೇ ಕೊನೇ ಸ್ಥಾನಕ್ಕೆ ಕುಸಿದಿದೆ.

## ತವರಿನಲ್ಲೇ ಟೈಟಾನ್ಸ್‌ಗೆ ಸೋಲು!



ಡೆತ್ ಓವರ್‌ನಲ್ಲಿ ಅಶುತೋಷ್ ಶರ್ಮಾ ಹಾಗೂ ಶಶಾಂಕ್ ಸಿಂಗ್ ಅವರ ಸ್ಫೋಟಕ ಬ್ಯಾಟಿಂಗ್ ಪ್ರದರ್ಶನದಿಂದ ಪಂಜಾಬ್ ಕಿಂಗ್ಸ್ ತಂಡವು ಗುಜರಾತ್ ಟೈಟಾನ್ಸ್ ವಿರುದ್ಧ 3 ವಿಕೆಟ್‌ಗಳ ರೋಚಕ ಜಯ ಸಾಧಿಸಿದೆ. ಇಲ್ಲಿನ ನರೇಂದ್ರ ಮೋದಿ ಕ್ರೀಡಾಂಗಣದಲ್ಲಿ ಟಾಸ್ ಸೋತು ಮೊದಲು ಬ್ಯಾಟಿಂಗ್ ಮಾಡಿದ ಶುಭಮನ್ ಗಿಲ್ ನಾಯಕತ್ವದ ಗುಜರಾತ್ ಟೈಟಾನ್ಸ್ ತಂಡವು 20 ಓವರ್‌ಗಳಲ್ಲಿ 4 ವಿಕೆಟ್ ನಷ್ಟಕ್ಕೆ 199 ರನ್ ಗಳಿಸಿತ್ತು. ಬೃಹತ್ ಮೊತ್ತದ ಗುರಿ ಬೆನ್ನತ್ತಿದ ಪಂಜಾಬ್ ಕಿಂಗ್ಸ್ ತಂಡವು 19.5 ಓವರ್‌ಗಳಲ್ಲಿ 7 ವಿಕೆಟ್ ನಷ್ಟಕ್ಕೆ 200 ರನ್ ಪೂರೈಸಿ ಗೆಲುವು ಸಾಧಿಸಿತು. ಇದರೊಂದಿಗೆ ಅಂಕಪಟ್ಟಿಯಲ್ಲಿ 5ನೇ ಸ್ಥಾನಕ್ಕೇರಿದ ಪಂಜಾಬ್, ಐಪಿಎಲ್‌ನಲ್ಲಿ ಹೆಚ್ಚುಬಾರಿ 200 ರನ್ ಗುರಿ ಬೆನ್ನಟ್ಟಿದ ಯಶಸ್ವಿ ತಂಡ ಎಂಬ ಹೆಗ್ಗಳಿಕೆಯನ್ನೂ ಪಡೆದುಕೊಂಡಿತು. ಕೊನೇ ಓವರ್‌ನಲ್ಲಿ ಪಂಜಾಬ್ ಗೆಲುವಿಗೆ 7 ರನ್‌ಗಳ ಅಗತ್ಯವಿತ್ತು. ದರ್ಶನ್ ನಾಲ್ಕಂಡೆ ಬೌಲಿಂಗ್‌ನಲ್ಲಿದ್ದರು. ನಾಲ್ಕಂಡೆ ಬೌಲಿಂಗ್‌ನ ಮೊದಲ ಎಸೆತದಲ್ಲೇ ಸಿಕ್ಸರ್ ಪ್ರಯತ್ನಿಸಿದ ಅಶುತೋ? ಬೌಂಡರಿ ಲಾಂಗ್‌ಆನ್‌ನಲ್ಲಿ ಕ್ಯಾಚ್ ನೀಡಿ ಔಟಾದರು. 2ನೇ ಎಸೆತದಲ್ಲಿ ವೈಡ್ ಎಸೆದ ನಾಲ್ಕಂಡೆ 3ನೇ ಎಸೆತವನ್ನು ಬೀಟ್ ಮಾಡಿದ್ದರು. ಇದರಿಂದ ಪಂದ್ಯ ರೋಚಕತೆಗೆ ತಿರುಗಿತ್ತು. ಆದ್ರೆ ಕ್ರೀಸ್‌ನಲ್ಲಿದ್ದ ಹರ್ಪ್ರೀತ್ ಬ್ರಾರ್ 4ನೇ ಎಸೆತದಲ್ಲಿ 1 ರನ್ ತಂದುಕೊಡುತ್ತಿದ್ದಂತೆ ಬೌಂಡರಿ ಚಚ್ಚಿದ ಶಶಾಂಕ್ ಸಿಂಗ್ ಗೆಲುವನ್ನು ಪಂಜಾಬ್ ತಂಡದತ್ತ ವಾಲಿಸಿದರು. 5ನೇ ಎಸೆತ ಎದುರಿಸುವಲ್ಲಿ ಶಶಾಂಕ್ ವಿಫಲವಾದರೂ ಲೆಗ್‌ಬೈಸ್ ರನ್ ಕದಿಯುವಲ್ಲಿ ಯಶಸ್ವಿಯಾದರು. ಪರಿಣಾಮ ಪಂಜಾಬ್ ಕಿಂಗ್ಸ್ 3 ವಿಕೆಟ್‌ಗಳ ರೋಚಕ ಗೆಲುವು ಸಾಧಿಸಿತು. 200 ರನ್‌ಗಳ ಗುರಿ ಬೆನ್ನಟ್ಟಿದ್ದ ಪಂಜಾಬ್ ಕಿಂಗ್ಸ್ 15 ಓವರ್‌ಗಳಲ್ಲಿ 153 ರನ್‌ಗಳಿಗೆ ಪ್ರಮುಖ 6 ವಿಕೆಟ್ ಕಳೆದುಕೊಂಡಿತ್ತು. ಆದ್ರೆ ಡೆತ್ ಓವರ್‌ನಲ್ಲಿ ಜೊತೆಗೂಡಿದ ಅಶುತೋ? ಶರ್ಮಾ ಹಾಗೂ ಶಶಾಂಕ್ ಸಿಂಗ್ ಜೋಡಿ ರನ್ ಹೊಳೆ ಹರಿಸಿತು. ಕೊನೇ 5 ಓವರ್‌ಗಳಲ್ಲಿ ಕ್ರಮವಾಗಿ 15, 6, 16, 18, 7 ರನ್ ತಂಡಕ್ಕೆ ಸೇರ್ಪಡೆಯಾದ ಪರಿಣಾಮ ಪಂಜಾಬ್ ಗೆಲುವು ಸಾಧಿಸಿತು. ಪಂಜಾಬ್ ಕಿಂಗ್ಸ್ ಪರ ಶಶಾಂಕ್ ಸಿಂಗ್ ಅಜೇಯ 61 ರನ್ (29 ಎಸೆತ, 4 ಸಿಕ್ಸರ್, 6 ಬೌಂಡರಿ), ಅಶುತೋ? ಶರ್ಮಾ 31 ರನ್ (17 ಎಸೆತ, 1 ಸಿಕ್ಸರ್, 3 ಬೌಂಡರಿ), ಪ್ರಭ್‌ಸಿಮ್ರಾನ್ ಸಿಂಗ್ 35 ರನ್, ಶಿಖರ್ ಧವನ್ 1, ಜಾನಿ ಬೈರ್‌ಸ್ಟೋವ್ 22 ರನ್, ಸ್ಯಾಮ್ ಕರ್ರನ್ 5 ರನ್, ಸಿಖಂದರ್ ರಾಜಾ 15 ರನ್, ಜಿತೇಶ್ ಶರ್ಮಾ 16 ರನ್ ಗಳಿಸಿದ್ರೆ, ಹರ್ಪ್ರೀತ್ ಬ್ರಾರ್ 1 ರನ್ ಕದ್ದರು. ಗುಜರಾತ್ ಟೈಟಾನ್ಸ್ ಪರ ವೃದ್ಧಿಮಾನ್ ಸಾಹಾ 11 ರನ್, ಶುಭಮನ್ ಗಿಲ್ 89 ರನ್ (48 ಎಸೆತ, 6 ಬೌಂಡರಿ, 4 ಸಿಕ್ಸರ್, ಕೇನ್ ವಿಲಿಯಮ್ಸನ್ 26 ರನ್, ಸಾಯಿ ಸುದರ್ಶನ್ 33 ರನ್, ವಿಜಯ್ ಶಂಕರ್ 8 ರನ್, ರಾವುಲ್ ತೆವಾಟಿಯಾ 23 ರನ್ (8 ಎಸೆತ, 3 ಬೌಂಡರಿ, 1 ಸಿಕ್ಸರ್) ಗಳಿಸಿದರು.

### ಕೊಳವೆ ಬಾವಿಗೆ ಬಿದ್ದಿದ್ದ 2 ವರ್ಷದ ಮಗು ರಕ್ಷಣೆ

## ಸಾವು ಗೆದ್ದುಬಂದ ಸಾತ್ವಿಕ್



**ವಿಜಯಪುರ:** ವಿಜಯಪುರ ಜಿಲ್ಲೆಯ ಇಂಡಿ ತಾಲೂಕಿನ ಲಚ್ಯಾಣ ಗ್ರಾಮದಲ್ಲಿ ಕೊಳವೆ ಬಾವಿಗೆ ಬಿದ್ದಿದ್ದ 2 ವರ್ಷದ ಮಗು ಸಾತ್ವಿಕ್‌ನನ್ನು ಕೊನೆಗೂ ರಕ್ಷಣೆ ಮಾಡಲಾಗಿದೆ. ಸತತ 20 ಗಂಟೆಗಳಿಗೂ ಹೆಚ್ಚು ಕಾಲ ನಡೆದ ಕಾರ್ಯಾಚರಣೆಯ ಬಳಿಕ ಮಗುವನ್ನು ರಕ್ಷಣೆ ಮಾಡಲಾಗಿದೆ. ಮಗುವಿನ ಪೋ?ಕರಾದ ಸತೀಶ್ ಮತ್ತು ಪೂಜಾ ದಂಪತಿ ಹಾಗೂ ಸ್ಥಳೀಯರು ಕೊನೆಗೂ ನಿಟ್ಟುಸಿರು ಬಿಡುವಂತಾಗಿದೆ. ಸಾತ್ವಿಕ್ ?ನನ್ನು ಜೀವಂತವಾಗಿ ಹೊರ ತೆಗೆಯುವಲ್ಲಿ ರಕ್ಷಣಾ ಸಿಬ್ಬಂದಿ ಕೊನೆಗೂ ಯಶಸ್ವಿಯಾಗಿದ್ದಾರೆ. ನಿರಂತರ ಕಾರ್ಯಾಚರಣೆ ನಡೆಸಿ ಮಗು ಸಾತ್ವಿಕ್‌ನನ್ನು ರಕ್ಷಿಸಿದ ಸಿಬ್ಬಂದಿಯ ಬಗ್ಗೆ ಇದೀಗ ಎಲ್ಲೆಡೆ ಮೆಚ್ಚುಗೆಯ ಮಹಾಪೂರವೇ ವ್ಯಕ್ತವಾಗುತ್ತಿದೆ. ಸಾತ್ವಿಕ್‌ನನ್ನು ತಕ್ಷಣವೇ ಆಂಬುಲೆನ್ಸ್‌ನಲ್ಲಿ ಆಸ್ಪತ್ರೆಗೆ ಕರೆದೊಯ್ಯಲಾಗಿದೆ.

ಎನ್‌ಡಿಆರ್‌ಎಫ್ ತಂಡ ಸಿಬ್ಬಂದಿ ರಕ್ಷಣಾ ಕಾರ್ಯಾಚರಣೆ ನಡೆಸಿದರು. ಇವರಿಗೆ ಬೆಳಗಾವಿಯಿಂದ ಬಂದಿದ್ದ ಶ್ರೀಶೈಲ್ ಚೌಗಲಾ ನೇತೃತ್ವದ ರಾಜ್ಯ ವಿಪತ್ತು ನಿರ್ವಹಣಾ ತಂಡ (ಎಸ್‌ಡಿಆರ್‌ಎಫ್), ಸ್ಥಳೀಯ ಪೊಲೀಸರು, ಅಗ್ನಿ ಶಾಮಕ ದಳ ಸಿಬ್ಬಂದಿ ಸಾಥ್ ನೀಡಿದರು. ರಕ್ಷಣಾ ಕಾರ್ಯಾಚರಣೆ ಅಂತಿಮ ಹಂತ ತಲುಪುತ್ತಿದ್ದಂತೆಯೇ ಆಂಬುಲೆನ್ಸ್ ಸಿದ್ಧವಾಗಿ ಇರಿಸಲಾಗಿತ್ತು. ಮಗುವನ್ನು ಕೊಳವೆ ಬಾವಿಯಿಂದ ಹೊರ ತೆಗೆಯುತ್ತಿದ್ದಂತೆಯೇ ಪ್ರಾಥಮಿಕ ಚಿಕಿತ್ಸೆ ನೀಡಿ ಆಂಬುಲೆನ್ಸ್‌ನಲ್ಲಿ ಆಸ್ಪತ್ರೆಗೆ ಕರೆದೊಯ್ಯಲಾಯಿತು.

ಅಂತಿಮ ಹಂತದ ಕಾರ್ಯಾಚರಣೆ ವೇಳೆ ಮಗು ಅಳುತ್ತಿರುವ ಶಬ್ದ ರಕ್ಷಣಾ ಸಿಬ್ಬಂದಿಗೆ ಕೇಳಿಸುತ್ತಿತ್ತು. ಯಂತ್ರಗಳ ಸದ್ದು ಹೆಚ್ಚಾದಂತೆ ಮಗು ಅಳುತ್ತಿರುವುದೂ ಹೆಚ್ಚಾಗಿತ್ತು ಎಂದು. ಮಗು ಚೀರಾಡುತ್ತಿತ್ತು ಎಂದು ಸಿಬ್ಬಂದಿ ತಿಳಿಸಿದ್ದಾರೆ. ಇದಕ್ಕೂ ಮುನ್ನ ಸ್ಥಳಕ್ಕೆ ಬಂದ ಇಂಡಿ ಶಾಸಕ ಯಶವಂತರಾಯಗೌಡ ಪಾಟೀಲ್ ಸಿಬ್ಬಂದಿಯಿಂದ ಮಾಹಿತಿ ಪಡೆದಿದ್ದರು. ರಕ್ಷಣೆಗೆ ಎಲ್ಲ ರೀತಿಯ ಪ್ರಯತ್ನ ಮಾಡುವುದಾಗಿ ಭರವಸೆ ನೀಡಿದ್ದರು.

**ಲಚ್ಯಾಣದಲ್ಲಿ ಬುಧವಾರ ನಡೆದಿದ್ದೇನು?:** ಲಚ್ಯಾಣ ಗ್ರಾಮದ ಜಮೀನಿನಲ್ಲಿ ಶಂಕರಪ್ಪ ಮುಜಗೊಂಡ ಎಂಬವರು ಮಂಗಳವಾರ ಕೊಳವೆ ಬಾವಿ ಕೊರೆಯಿಸಿದ್ದರು. ಸುಮಾರು 500 ಅಡಿ ಆಳ ಕೊರೆಸಲಾಗಿತ್ತು. ಆದರೆ, ನೀರು ಬಾರದ ಕಾರಣ ಮುಚ್ಚದೆ ಹಾಗೆಯೇ ಬಿಟ್ಟಿದ್ದರು. ಶಂಕರಪ್ಪ ಮುಜಗೊಂಡ ಮೊಮ್ಮಗ ಸಾತ್ವಿಕ್ ಬುಧವಾರ ಕೊಳವೆ ಬಾವಿಗೆ ಬಿದ್ದಿದ್ದಾನೆ. ಆತ ಸುಮಾರು 15ರಿಂದ 20 ಅಡಿ ಆಳದಲ್ಲಿ ಸಿಲುಕಿದ ಬಗ್ಗೆ ಶಂಕೆ ವ್ಯಕ್ತವಾಗಿದ್ದು, ಆಕ್ಸಿಜನ್ ವ್ಯವಸ್ಥೆ ಮಾಡಲಾಗಿತ್ತು.

ಇಂದಿನ ಪ್ರಕರಣಕ್ಕೂ ಮುಂಚೆ ಇಂತಹ ಎರಡು ಪ್ರಕರಣಗಳು ವಿಜಯಪುರ ಜಿಲ್ಲೆಯಲ್ಲಿ ನಡೆದಿದ್ದವು. 2008 ಮತ್ತು 2014ರಲ್ಲಿಕೊಳವೆ ಬಾವಿ ದುರಂತಗಳು ಸಂಭವಿಸಿದ್ದವು. 2008 ರಲ್ಲಿ ಚಡಚಣ ತಾಲೂಕಿನ ದೇವರನಿಂಬರಗಿ ಗ್ರಾಮದಲ್ಲಿ ಕಾಂಚನಾ ಉರ್ಫ್ ಏಗವ್ವ ಎನ್ನುವ ಬಾಲಕಿ ತೆರೆದ ಕೊಳವೆ ಬಾವಿಗೆ ಬಿದ್ದಿದ್ದಳು. ಜೆಸಿಬಿಗಳ ಮೂಲಕ ರಕ್ಷಣಾ ಕಾರ್ಯಾಚರಣೆ ನಡೆಸಲಾಗಿತ್ತು. ಆದ್ರೆ, ಮಗು ಮೃತಪಟ್ಟಿತ್ತು.

## ಚಾರ್ಮಾಡಿ ಘಾಟಿಯಲ್ಲಿ ಮತ್ತೆ 12 ಚಕ್ರದ ಲಾರಿ ಲಾಕ್



**ಚಿಕ್ಕಮಗಳೂರು:** ಜಿಲ್ಲೆಯ ಮೂಡಿಗೆರೆ ತಾಲೂಕಿನ ಕೊಟ್ಟಿಗೆಹಾರ ಚೆಕ್ ಪೋಸ್ಟ್‌ನಲ್ಲಿ ಪೊಲೀಸರು ಇದ್ದಾರೋ? ಇಲ್ಲವೋ? ಇದ್ದರೆ ಏನು ಮಾಡುತ್ತಿದ್ದಾರೆ ಎಂಬ ಪ್ರಶ್ನೆ ಸ್ಥಳಿಯರು ಹಾಗೂ ಸಾರ್ವಜನಿಕರನ್ನು ಕಾಡುತ್ತಿದೆ.

ಏಕೆಂದರೆ ಕಳೆದ ಮಾರ್ಚ್ 18ರಂದು ಹುಬ್ಬಳ್ಳಿಯಿಂದ ಮಂಗಳೂರಿಗೆ ಹೋಗುತ್ತಿದ್ದ 16 ಚಕ್ರದ ಸಿಮೆಂಟ್ ಲಾರಿ ಚಾರ್ಮಾಡಿ ಘಾಟಿಯ ಹತ್ತನೇ ತಿರುವಿನಲ್ಲಿ ಲಾಕ್ ಆಗಿ ಮಂಗಳೂರು ಹಾಗೂ ಚಿಕ್ಕಮಗಳೂರು ಎರಡೂ ಮಾರ್ಗದಲ್ಲೂ ಮೂರ್ನಾಲ್ಕು ಕಿ.ಮೀ.ನಷ್ಟು ದೂರ ಟ್ರಾಫಿಕ್ ಜಾಮ್ ಆಗಿತ್ತು. ಇಂದು ಮತ್ತೆ ಚಾರ್ಮಾಡಿ ಘಾಟಿಯ ಎರಡನೇ ತಿರುವಿನಲ್ಲಿ 12 ಚಕ್ರದ ಲಾರಿ ಲಾಕ್ ಆಗಿದೆ. ರಸ್ತೆಯ ತಿರುವಿನಲ್ಲಿ ಲಾರಿ ಟರ್ನ್ ಆಗದೇ ನಿಂತಲ್ಲಿ ನಿಂತಿದೆ. ಬೆಳಗ್ಗೆಯಿಂದಲೂ ಕೂಡ ಚಾರ್ಮಾಡಿ ಘಾಟಿಯಲ್ಲಿ ವಾಹನಗಳು ನಿಂತಲ್ಲೇ ನಿಂತು ಮುಂದೆ ಹೋಗಲಾಗದೇ ಹಿಂದೆಯೂ ಬರಲಾಗದೇ ಪರದಾಡುವಂತೆ ಆಗಿದೆ. ಬಳ್ಳಾರಿಯಿಂದ ಸರಕನ್ನು ತುಂಬಿಕೊಂಡು ಮಂಗಳೂರಿಗೆ ಹೋಗುತ್ತಿದ್ದ ಲಾರಿ ಚಾರ್ಮಾಡಿ ಘಾಟಿಯಲ್ಲಿ ಲಾಕ್ ಆಗಿರುವುದರಿಂದ ವಾಹನ ಸವಾರರು ಪರದಾಡುತ್ತಿದ್ದಾರೆ. ಚಾರ್ಮಾಡಿ ಘಾಟಿಯಲ್ಲಿ ಹತ್ತು ಚಕ್ರದ ಬಸ್ಸು ಹಾಗೂ ಲಾರಿ ಸೇರಿದಂತೆ ಭಾರೀ ವಾಹನಗಳ ಸಂಚಾರಕ್ಕೆ ನಿಷೇಧವಿದೆ. ಸರ್ಕಾರದ ಅಧಿಕೃತ ಆದೇಶವಿದ್ದರೂ ಕೂಡ ಅಪಾಯಕಾರಿ ತಿರುವಿನ ಚಾರ್ಮಾಡಿ ಘಾಟಿಯಲ್ಲಿ ಅ?ಟು ದೊಡ್ಡ ವಾಹನಗಳು ಹೇಗೆ ಹೋಗುತ್ತವೆ ಎನ್ನುವುದೇ ಯಕ್ಷಪ್ರಶ್ನೆಯಾಗಿದೆ.

ಲೋಕಸಭೆ ಚುನಾವಣೆ ಹಿನ್ನೆಲೆ ಮಂಗಳೂರು ಹಾಗೂ ಚಿಕ್ಕಮಗಳೂರು ಗಡಿಯಾಗಿರುವ ಮೂಡಿಗೆರೆ ತಾಲೂಕಿನ ಕೊಟ್ಟಿಗೆಹಾರ ಚೆಕ್ ಪೋಸ್ಟ್‌ನಲ್ಲಿ ಪೊಲೀಸರು ಹಾಗೂ ಇತರೆ ಅಧಿಕಾರಿಗಳು ದಿನದ 24 ಗಂಟೆಯೂ ಕಾರ್ಯನಿರ್ವಹಿಸುತ್ತಿದ್ದಾರೆ. ಅವರುಗಳ ಕಣ್ಣುಗಳನ್ನು ತಪ್ಪಿಸಿ 12 ಚಕ್ರದ ಲಾರಿ ಹೇಗೆ ಹೋಯಿತು ಅನ್ನೋದು ಸ್ಥಳೀಯರ ಅನುಮಾನಕ್ಕೂ ಕಾರಣವಾಗಿದೆ. ಸರ್ಕಾರದ ಅಧಿಕೃತ ಆದೇಶವಿದ್ದರೂ ಕೂಡ ಪೊಲೀಸರೇ ಲಾರಿಗಳನ್ನು ಬಿಡುತ್ತಿದ್ದಾರೆ ಎಂದು ಸ್ಥಳೀಯರು ಹಾಗೂ ವಾಹನ ಸವಾರರು ಆರೋಪಿಸಿದ್ದಾರೆ. ಚಾರ್ಮಾಡಿ ಘಾಟಿಯನ್ನ ಬದುಕಿನ ದಾರಿ ಎಂದು ಕರೆಯುತ್ತಾರೆ. ನಿತ್ಯ ಈ ಮಾರ್ಗದಲ್ಲಿ ರೋಗಿಗಳನ್ನ ಹೊತ್ತ ಹಲವು ಅಂಬುಲೆನ್ಸ್‌ಗಳು ಕೂಡ ಉಡುಪಿ ಹಾಗೂ ಮಂಗಳೂರಿಗೆ ಹೋಗುತ್ತವೆ. ಹೀಗೆ ಬಾರಿ ವಾಹನದಿಂದ ಟ್ರಾಫಿಕ್ ಜಾಮ್ ಉಂಟಾದರೆ ಅಂಬುಲೆನ್ಸ್ ಕೂಡ ಹೇಗೆ ಹೋಗಬೇಕು ಎಂದು ಸ್ಥಳೀಯರು ಪ್ರಶ್ನಿಸುತ್ತಿದ್ದಾರೆ.

Printed, Published & Owned by N.Venugopal Krishna, Printed at DASHAPRAMATHI MUDRANALAYA, No.433/1, Chikkavitalenahalli Village, Thagachagere Post, Kasaba Hobli, Channapatna Taluk, Ramanagar District, Pin-562160. Published at No.15, Ground Floor, 12th Block, 5th Main, Kumara Park (West), Behind BDA Head Office, Bengaluru-560020. Editor: N.Venugopal Krishna, Mobile No.+91 94835 89085, email: sanjemugilu@gmail.com

# ಬಾಹ್ಯಾಕಾಶದ ರಹಸ್ಯವನ್ನೆಲ್ಲ ಬಹಿರಂಗ ಪಡಿಸಲಿದೆ ವಿಶ್ವದ ಅತಿದೊಡ್ಡ ಕ್ಯಾಮರಾ...!



**ದೆಹಲಿ:** ಬಾಹ್ಯಾಕಾಶದಲ್ಲಿ ಅನೇಕ ರಹಸ್ಯಗಳು ಅಡಗಿವೆ. ಅವನ್ನೆಲ್ಲ ಪತ್ತೆ ಮಾಡುವುದು ಅಸಾಧ್ಯವಾದ ಕೆಲಸ. ಕೆಲವು ನಿಗೂಢ ಸಂಗತಿಗಳನ್ನು ಇದುವರೆಗೆ ಯಾರಿಂದಲೂ ಬಯಲು ಮಾಡಲು ಸಾಧ್ಯವಾಗಿಲ್ಲ. ಆದ್ರೆ, ಮನುಷ್ಯರದ್ದು ಹಠ ಬಿಡದ ಪ್ರಯತ್ನ. ಒಂದಿಲ್ಲೊಂದು ಹೊಸ ಹೊಸ ಆವಿಷ್ಕಾರಗಳ ಮೂಲಕ ಆಗಸದ ಆಸಕ್ತಿದಾಯಕ ಸಂಗತಿಗಳನ್ನು ಹುಡುಕುತ್ತಲೇ ಇರುತ್ತಾರೆ. ಇದೀಗ ಜಗತ್ತಿನ ರಹಸ್ಯಗಳನ್ನು ತಿಳಿಯಲು ವಿಜ್ಞಾನಿಗಳು ಅತಿದೊಡ್ಡ ಡಿಜಿಟಲ್ ಕ್ಯಾಮೆರಾವನ್ನು ಸಿದ್ಧಪಡಿಸಿದ್ದಾರೆ. ಅದರ ರೆಸಲ್ಯೂಶನ್ 3.2 ಬಿಲಿಯನ್ ಪಿಕ್ಸೆಲ್ಗಳು. ಈ ಬಾಹುಬಲಿ ಕ್ಯಾಮೆರಾ ತಯಾರಿಸಲು 9 ವರ್ಷಗಳೇ ಬೇಕಾಯಿತು.

**ವಿಶ್ವದ ಅತಿದೊಡ್ಡ ಡಿಜಿಟಲ್ ಕ್ಯಾಮೆರಾ:** ಲಾರ್ಜ್ ಸಿನೊಪ್ಟಿಕ್ ಸರ್ವೆ ಟೆಲಿಸ್ಕೋಪ್ (ಎಲ್‌ಎಸ್‌ಎಸ್ಟಿ) ಹೆಸರಿನ ಈ ಕ್ಯಾಮೆರಾ ಬಾಹ್ಯಾಕಾಶದ ರಹಸ್ಯಗಳನ್ನು ತಿಳಿಯಲು ಮಾನವರು ತಯಾರಿಸಿದ ಅತಿದೊಡ್ಡ ಡಿಜಿಟಲ್ ಕ್ಯಾಮೆರಾ ಎನಿಸಿಕೊಂಡಿದೆ. ಇದನ್ನು ಚಿಲಿಯ ವೆರಾ ರೂಬಿನ್ ಅಬ್ಸರ್ವೇಟರಿಯಲ್ಲಿ ಸ್ಥಾಪಿಸಲಾಗುವುದು. ಶೀಘ್ರದಲ್ಲೇ ಈ ಕ್ಯಾಮರಾ ಮೂಲಕ ರಹಸ್ಯಗಳನ್ನು ಅರ್ಥಮಾಡಿಕೊಳ್ಳುವ ಕೆಲಸ ನಡೆಯಲಿದೆ.

### ಕ್ಯಾಮೆರಾ ಏನು ಮಾಡುತ್ತದೆ?

ಈ ಸೂಪರ್ ಕ್ಯಾಮೆರಾ ಬ್ರಹ್ಮಾಂಡದ ರಚನೆ, ಬ್ರಹ್ಮಾಂಡದ ವಿಸ್ತರಣೆ, ಸೌರವ್ಯೂಹ, ನಕ್ಷತ್ರಪುಂಜದ ರಚನೆ, ಡಾರ್ಕ್ ಎನರ್ಜಿ, ಡಾರ್ಕ್ ಮ್ಯಾಟರ್ನ ಸ್ವರೂಪ ಮತ್ತು ವಿತರಣೆಯ ಕುರಿತು 60 ಪೆಟಾಬೈಟ್ ಡೇಟಾವನ್ನು ಸಂಗ್ರಹಿಸುತ್ತದೆ. ಈ ಕ್ಯಾಮೆರಾವು 5.1 ಅಡಿ ಅಗಲದ ಆಪ್ಟಿಕಲ್ ಲೆನ್ಸ್ ಹೊಂದಿದೆ. ಈ ಕ್ಯಾಮೆರಾದಲ್ಲಿನ ಫಿಲ್ಟರ್ಗಳು ನೇರಳಾತೀತದಿಂದ ಸಮೀಪ ಇನ್ಫ್ರಾರೆಡ್ಗೆ ವಿಭಿನ್ನ ತರಂಗಾಂತರಗಳಲ್ಲಿ ಬೆಳಕನ್ನು ನೋಡಲು ಸ್ವಯಂಚಾಲಿತವಾಗಿ ಬದಲಾಗುತ್ತವೆ.



## ವಾಯುರಕ್ಷಣೆ ಬಿಗಿಗೊಳಿಸಿದ ಇಸ್ರೇಲ್

**ಟೆಲ್‌ಅವೀವ್:** ಈ ವಾರದ ಆರಂಭದಲ್ಲಿ ಸಿರಿಯಾದಲ್ಲಿ ನಡೆದ ದಾಳಿಗೆ ಇರಾನ್ನ ಪ್ರತೀಕಾರ ಕ್ರಮದ ಸಾಧ್ಯತೆಯ ಹಿನ್ನೆಲೆಯಲ್ಲಿ ತನ್ನ ವಾಯುರಕ್ಷಣೆ ವ್ಯವಸ್ಥೆಯನ್ನು ಇಸ್ರೇಲ್ ಬಿಗಿಗೊಳಿಸಿದ್ದು ಮೀಸಲು ಯೋಧರನ್ನು ಕರೆಸಿಕೊಳ್ಳಲು ನಿರ್ಧರಿಸಿದೆ ಎಂದು ವರದಿಯಾಗಿದೆ. ದಮಾಸ್ಕಸ್ನಲ್ಲಿ ಇರಾನ್ ದೂತಾವಾಸದ ಬಳಿಯ ಕಾನ್ಸುಲರ್ ಕಟ್ಟಡದ ಮೇಲಿನ ದಾಳಿಗೆ ಪ್ರತೀಕಾರ ತೀರಿಸಿಕೊಳ್ಳುವುದಾಗಿ ಇರಾನ್ ಮತ್ತು ಇರಾನ್ ಬೆಂಬಲಿತ ಹಿಜ್ಬುಲ್ಲಾ ಸಶಸ್ತ್ರ ಹೋರಾಟಗಾರರ ಗುಂಪು ಪ್ರತಿಜ್ಞೆ ಮಾಡಿದೆ. ಇರಾನ್ ತಾನು ಬೆಂಬಲಿಸುತ್ತಿರುವ ಗುಂಪುಗಳ ಮೂಲಕ ಲೆಬನಾನ್, ಇರಾಕ್ ಅಥವಾ ಯೆಮೆನ್ನಿಂದ ದಾಳಿ ನಡೆಸುವ ಬದಲು ತನ್ನ ಪ್ರದೇಶದಿಂದ ನೇರವಾಗಿ ಕ್ಷಿಪಣಿ ದಾಳಿ ನಡೆಸಬಹುದು ಎಂದು ಇಸ್ರೇಲ್ ಲೆಕ್ಕಾಚಾರ ಹಾಕಿಕೊಂಡಿದೆ. ಇರಾನ್ನಿಂದ ನೇರ ದಾಳಿ ನಡೆದರೆ ಇದಕ್ಕೆ ಇಸ್ರೇಲ್ ರಕ್ಷಣಾ ಪಡೆಯಿಂದ ಗಮನಾರ್ಹ ಪ್ರತಿದಾಳಿ ನಡೆದು ಉದ್ವಿಗ್ನತೆ ಮತ್ತಷ್ಟು ಹೆಚ್ಚಬಹುದು ಎಂದು ಸ್ಥಳೀಯ ಮಾಧ್ಯಮಗಳು ವರದಿ ಮಾಡಿವೆ. ಈ ಮಧ್ಯೆ, ಮಧ್ಯಪ್ರಾಚ್ಯದಿಂದ ಹೊರಹೊಮ್ಮುವ ಬೆದರಿಕೆಯನ್ನು ಎದುರಿಸಲು ಇಸ್ರೇಲ್ ಸನ್ನದ್ಧತೆಯನ್ನು ಹೆಚ್ಚಿಸುತ್ತಿದೆ ಎಂದು ಇಸ್ರೇಲ್ ರಕ್ಷಣಾ ಸಚಿವ ಯೊವಾವ್ ಗ್ಯಾಲಂಟ್ ಹೇಳಿದ್ದಾರೆ. ಹಿಜ್ಬುಲ್ಲಾ ಹಾಗೂ ಇತರ ಪ್ರತಿಕೂಲ ಸಂಘಟನೆಗಳ ವಿರುದ್ಧದ ಕಾರ್ಯಾಚರಣೆಯನ್ನು ವಿಸ್ತರಿಸುವ ಅಗತ್ಯವಿದ್ದು ಇದಕ್ಕಾಗಿ ಮೀಸಲು ಯೋಧರನ್ನು ಸಂಘಟಿಸಲು ನಿರ್ಧರಿಸಲಾಗಿದೆ ಎಂದವರು ಹೇಳಿದ್ದಾರೆ.





## ನಾಮಪತ್ರ ಸಲ್ಲಿಸಿದ ಬಿಜೆಪಿ ಸಂಸದೆ ಹೇಮಾ ಮಾಲಿನಿ

**ಮಥುರಾ:** ನಟಿ ಹಾಗೂ ಬಿಜೆಪಿ ಸಂಸದೆ ಹೇಮಾ ಮಾಲಿನಿ ಅವರು ಇಂದು ನಾಮಪತ್ರ ಸಲ್ಲಿಸಿದ್ದಾರೆ. ಮಥುರಾ ಲೋಕಸಭಾ ಕ್ಷೇತ್ರದಿಂದ 3ನೇ ಬಾರಿ ಕಣಕ್ಕೆ ಇಳಿದಿರುವ ಅವರು, 2014 ಮತ್ತು 2019ರ ಲೋಕಸಭಾ ಚುನಾವಣೆಯಲ್ಲಿ ಗೆಲುವು ಸಾಧಿಸಿದ್ದರು. ನಾಮಪತ್ರ ಸಲ್ಲಿಸಿದ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮಥುರಾ ಕ್ಷೇತ್ರದಲ್ಲಿ ಹೆಚ್ಚಿನ ಅಭಿವೃದ್ಧಿ ಸಾಧಿಸುವ ನಿಟ್ಟಿನಲ್ಲಿ ಈ ಬಾರಿಯೂ ಸ್ಪರ್ಧಿಸುತ್ತಿದ್ದೇನೆ. ಬಾಕಿ ಉಳಿದಿರುವ ಅಭಿವೃದ್ಧಿ ಕಾಮಗಾರಿಗಳನ್ನು ಪೂರ್ಣಗೊಳಿಸುತ್ತೇನೆ. ಎಲ್ಲರ ಸಹಕಾರದಿಂದಾಗಿ ಹೆಚ್ಚಿನ ಅಭಿವೃದ್ಧಿಯಾಗಲಿದೆ ಎಂದರು. ಮಥುರಾದಲ್ಲಿ ಯಮುನಾ ನದಿ ಸ್ವಚ್ಛತಾ ಕಾರ್ಯ ಕುರಿತು ಕೇಳಿದ ಪ್ರಶ್ನೆಗೆ ಉತ್ತರಿಸಿದ ಹೇಮಾ ಮಾಲಿನಿ, 50 ವರ್ಷಗಳಲ್ಲಿ ಮಾಡಲಾಗದ ಕೆಲಸವನ್ನು ಕೇವಲ 10 ವರ್ಷದಲ್ಲಿ ಮಾಡುವುದು ಅಸಾಧ್ಯ. ಆದರೆ ಯಮುನಾ ನದಿ ಸ್ವಚ್ಛತಾ ಕಾರ್ಯ ಸಂಬಂಧ ಕ್ರಮ ಕೈಗೊಳ್ಳುವುದಾಗಿ ತಿಳಿಸಿದರು. ಕಾಂಗ್ರೆಸ್ ನಾಯಕ ರಣದೀಪ್ ಸುರ್ಜೆವಾಲಾ ಅವರ ಟೀಕೆಗಳ ಬಗ್ಗೆ ಪ್ರತಿಕ್ರಿಯಿಸಿದ ಮಾಲಿನಿ, ಜೀವನದಲ್ಲಿ ಏನನ್ನಾದರೂ ಸಾಧಿಸಿದವರನ್ನೇ ಗುರಿಯಾಗಿಸಿಕೊಂಡು ಮಾತನಾಡುತ್ತಾರೆ ಎಂದು ತಿರುಗೇಟು ನೀಡಿದರು. ಹೇಮಾ ಮಾಲಿನಿ ಅವರು ನಾಮಪತ್ರ ಸಲ್ಲಿಸುವ ಸಂದರ್ಭದಲ್ಲಿ ಸಚಿವ ಸ್ವತಂತ್ರ ದೇವ್ ಸಿಂಗ್ ಕೂಡ ಉಪಸ್ಥಿತರಿದ್ದರು.

# ಭಾರತದಲ್ಲೇ CAR T-Cell ಥೆರಪಿ ಚಿಕಿತ್ಸಾಸೇವೆ ಲಭ್ಯ

**ನವದೆಹಲಿ:** ಕ್ಯಾನ್ಸರ್ ಜಾಗತಿಕವಾಗಿ ವೇಗವಾಗಿ ಬೆಳೆಯುತ್ತಿರುವ ಗಂಭೀರ ಕಾಯಿಲೆಯಾಗಿದ್ದು, ಇದರ ಅಪಾಯವು ವರ್ಷದಿಂದ ವರ್ಷಕ್ಕೆ ಹೆಚ್ಚುತ್ತಿದೆ. ಕ್ಯಾನ್ಸರ್ನ ಸಾವಿನ ಪ್ರಮಾಣವೂ ಹೆಚ್ಚಾಗಿದೆ, ಇದರ ಬಗ್ಗೆ ಆರೋಗ್ಯ ತಜ್ಞರು ಎಲ್ಲಾ ಜನರನ್ನು ಎಚ್ಚರಿಸುತ್ತಾರೆ.

ಆರೋಗ್ಯ ತಜ್ಞರು ಹೇಳುವ ಪ್ರಕಾರ, ಹೆಚ್ಚಿನ ಕ್ಯಾನ್ಸರ್ ಸಾವುಗಳಿಗೆ ಒಂದು ಮುಖ್ಯ ಕಾರಣವೆಂದರೆ ಸಮಯಕ್ಕೆ ಸರಿಯಾಗಿ ರೋಗನಿರ್ಣಯ ಮತ್ತು ಚಿಕಿತ್ಸೆ ನೀಡದಿರುವುದು.

ದೇಶದ ಹೆಚ್ಚಿನ ಜನರು ಕೊನೆಯ ಹಂತಗಳಲ್ಲಿ ಕ್ಯಾನ್ಸರ್ನಿಂದ ಬಳಲುತ್ತಿದ್ದಾರೆ, ಅಲ್ಲಿಂದ ಚಿಕಿತ್ಸೆ ನೀಡುವುದು ಮತ್ತು ರೋಗಿಯ ಜೀವವನ್ನು ಉಳಿಸುವುದು ತುಂಬಾ ಕಷ್ಟವಾಗುತ್ತದೆ.

ಕ್ಯಾನ್ಸರ್ ಭಾರತದಲ್ಲಿ ಪ್ರಮುಖ



ಬೆದರಿಕೆಯಾಗಿದೆ. ಪೊವಾಯಿಯ ಇಂಡಿಯನ್ ಇನ್ಸ್ಟಿಟ್ಯೂಟ್ ಆಫ್ ಟೆಕ್ನಾಲಜಿ (ಐಐಟಿ) ಬಾಂಬೆಯಲ್ಲಿ ನಡೆದ ಕಾರ್ಯಕ್ರಮದಲ್ಲಿ ಕ್ಯಾನ್ಸರ್ ಚಿಕಿತ್ಸೆಗಾಗಿ ದೇಶೀಯವಾಗಿ ಅಭಿವೃದ್ಧಿಪಡಿಸಿದ ಸಿಎಆರ್ ಟಿ-ಸೆಲ್ ಥೆರಪಿಯನ್ನು ಅಧ್ಯಕ್ಷ ದ್ರೌಪದಿ ಮುರ್ಮು ಗುರುವಾರ ಬಿಡುಗಡೆ ಮಾಡಿದರು.

ಐಐಟಿ ಬಾಂಬೆ ಮತ್ತು ಟಾಟಾ ಮೆಮೋರಿಯಲ್ ಸೆಂಟರ್ ಅಭಿವೃದ್ಧಿಪಡಿಸಿದ ಈ ಜೀನ್ ಆಧಾರಿತ ಚಿಕಿತ್ಸೆಯು ವಿವಿಧ ರೀತಿಯ ಕ್ಯಾನ್ಸರ್ ಅನ್ನು ಗುಣಪಡಿಸಲು ಸಹಾಯ ಮಾಡುತ್ತದೆ.

ದಿ ಲ್ಯಾನ್ಸೆಟ್ ರೀಜನಲ್ ಹೆಲ್ತ್ ಆಗ್ನೇಯ ಏಷ್ಯಾ ಜರ್ನಲ್ನಲ್ಲಿ ಪ್ರಕಟವಾದ ಅಧ್ಯಯನದ ಪ್ರಕಾರ, ಭಾರತದಲ್ಲಿ 2019 ರಲ್ಲಿ ಸುಮಾರು 1.2 ಮಿಲಿಯನ್ ಹೊಸ ಕ್ಯಾನ್ಸರ್ ಪ್ರಕರಣಗಳು ಮತ್ತು 9.3 ಲಕ್ಷ ಸಾವುಗಳು ದಾಖಲಾಗಿವೆ. ಭಾರತವು ಏಷ್ಯಾದ ಎರಡನೇ ಅತಿ ಹೆಚ್ಚು ರೋಗ ಪೀಡಿತ ದೇಶವಾಗಿದೆ. ಸಿಎಆರ್ ಟಿ-ಸೆಲ್ ಥೆರಪಿ ಕ್ಯಾನ್ಸರ್ ಚಿಕಿತ್ಸೆಯಲ್ಲಿ ಸಹಾಯ ಮಾಡುತ್ತದೆ ಎಂದು ಆರೋಗ್ಯ ತಜ್ಞರು ಭರವಸೆ ವ್ಯಕ್ತಪಡಿಸಿದ್ದಾರೆ.



## ಶೂಟಿಂಗ್ ವೇಳೆ ಪಲ್ಟಿಯಾದ ಅಜಿತ್ ಕಾರು

**ಚನ್ನೈ:** ಕಾಲಿವುಡ್ನ ಪ್ರಸಿದ್ಧನ ನಟ ಅಜಿತ್ ಕುಮಾರ್ ಶೂಟಿಂಗ್ ಸಮಯದಲ್ಲಿ ಡ್ರಿಫ್ಟ್ ಮಾಡುವ ವೇಳೆ ಕಾರು ಪಲ್ಟಿಯಾಗಿದೆ. ಈ ಅಪಘಾತದ ದೃಶ್ಯ ಕ್ಯಾಮೆರದಲಲಿ ಸೆರೆಯಾಗಿದ್ದು ಇದೀಗ ವಿಡಿಯೋ ವೈರಲ್ ಆಗಿದೆ. ಅಜಿತ್ ಕುಮಾರ್ 'ವಿಡೈಮುಯರ್ಚಿ' ಚಿತ್ರೀಕರಣದ ಸಮಯದಲ್ಲಿ ಈ ಘಟನೆ ನಡೆದಿದೆ. ಇದು ಕಳೆದ ವರ್ಷ ಶೂಟಿಂಗ್ ಸಮಯದಲ್ಲಿ ನಡೆದ ಘಟನೆ ಎನ್ನಲಾಗುತ್ತಿದೆ. ಸದ್ಯ ಮಧ್ಯಪ್ರದೇಶದಲ್ಲಿ ಪ್ರವಾಸದಲ್ಲಿರುವ ನಟ, ಕಳೆದ ವರ್ಷ ಕಾರು ಯುರೋಪಿನ್ ದೇಶದಲ್ಲಿ ಸ್ಟಂಟ್ ಮಾಡುವಾಗ ಅವರು ಚಲಾಯಿಸುತ್ತಿದ್ದ ಕಾರು ಪಲ್ಟಿ ಹೊಡೆದಿತ್ತು. ಡ್ಯೂಪ್ ಇಲ್ಲದೇ ನಟ ಕಾರು ಚಲಾಯಿಸುವ ಮತ್ತು ಸಾಹಸ ಮಾಡುವ ದೃಶ್ಯ ಡ್ರೋನ್ ಕ್ಯಾಮೆರಾದಲ್ಲಿ ಸೆರೆಯಾಗಿದೆ. ಅಜಿತ್ ಜೊತೆಗೆ ನಟ ಆರವ್ ಕೂಡ ಕಾರಿನಲ್ಲಿ ಇದ್ದರು. ಈ ಭಯಾನಕ ದೃಶ್ಯವನ್ನು ಪ್ರಚಾರಕ ಸುರೇಶ್ ಚಂದ್ರ ಹಂಚಿಕೊಂಡಿದ್ದಾರೆ. ''ವಿಡೈಮುಯರ್ಚಿ ಚಿತ್ರೀಕರಣ ನವೆಂಬರ್ 2023'' ಎಂದು ಬರೆದುಕೊಂಡಿದ್ದಾರೆ

## ಭಾರತೀಯ ಪ್ರವಾಸಿಗರಿಗೆ ಇ-ವೀಸಾ ಜಾರಿಗೊಳಿಸಿದ ಜಪಾನ್

**ಟೋಕಿಯೊ:** ಭಾರತೀಯ ಪಾಸ್ಪೋರ್ಟ್ ಹೊಂದಿರುವವರು ಇನ್ನು ಮುಂದೆ ಜಪಾನ್ಗೆ ಪ್ರಯಾಣಿಸಲು ಭೌತಿಕ ವೀಸಾ ಸ್ಟಿಕ್ಕರ್ ಅನ್ನು ಒಯ್ಯುವ ಅಗತ್ಯವಿಲ್ಲ. ಎಪ್ರಿಲ್ 1ರಿಂದ ಜಪಾನ್ ಭಾರತೀಯ ಪ್ರವಾಸಿಗರಿಗೆ ಇ-ವೀಸಾ ಒದಗಿಸುವುದಕ್ಕೆ ಚಾಲನೆ ನೀಡಿದೆ. ಈ ಯೋಜನೆಯು ಪ್ರವಾಸಿಗರಿಗೆ ಪ್ರವಾಸೋದ್ಯಮ ಉದ್ದೇಶಕ್ಕಾಗಿ 90 ದಿನಗಳವರೆಗೆ ಜಪಾನ್ ಪ್ರವೇಶಿಸಲು ಅವಕಾಶ ಕಲ್ಪಿಸುತ್ತದೆ. ವಿಎಫ್‌ಎಸ್ ಗ್ಲೋಬಲ್ ನಿರ್ವಹಿಸುವ ಜಪಾನ್ ವೀಸಾ ಅರ್ಜಿ ಕೇಂದ್ರಗಳ ಮೂಲಕ ಇ-ವೀಸಾಕ್ಕೆ ಅರ್ಜಿ ಸಲ್ಲಿಸಬಹುದಾಗಿದೆ. ಈ ಹಿಂದೆಯೂ ಇದೇ ಪ್ರಕ್ರಿಯೆ ಜಾರಿಯಲ್ಲಿತ್ತು. ಆದರೆ ಇ-ವೀಸಾ ಯೋಜನೆಯಡಿ ಪಾಸ್ಪೋರ್ಟ್ಗೆ ಅಂಟಿಸುವ ಸಾಂಪ್ರದಾಯಿಕ ವೀಸಾದ ಬದಲು ಅರ್ಜಿದಾರರು ಇ-ವೀಸಾ ಪಡೆಯುತ್ತಾರೆ. ವಿಮಾನ ನಿಲ್ದಾಣಕ್ಕೆ ಆಗಮಿಸಿದ ಬಳಿಕ ತಮ್ಮ ಮೊಬೈಲ್ ಫೋನ್ ಮೂಲಕ 'ವೀಸಾ ನೀಡಿಕೆ ಸೂಚನೆ'ಯನ್ನು ಅಧಿಕಾರಿಗಳಿಗೆ ತೋರಿಸಬೇಕು. ಸ್ಕ್ರೀನ್ಶಾಟ್, ಮುದ್ರಿತ ಪ್ರತಿ, ಪಿಡಿಎಫ್ ಪ್ರತಿಗಳನ್ನು ಪರಿಗಣಿಸುವುದಿಲ್ಲ. ಮೊಬೈಲ್ ಫೋನ್ಗೆ ಬಂದಿರುವ 'ವೀಸಾ ನೀಡಿಕೆ ಸೂಚನೆ'ಯನ್ನು ತೋರಿಸುವುದು ಕಡ್ಡಾಯವಾಗಿದೆ.




## ಶ್ವೇತಭವನದ ಇಫ್ತಾರ್ ಔತಣಕೂಟ ಆಹ್ವಾನ ತಿರಸ್ಕರಿಸಿದ ಮುಸ್ಲಿಮರು

**ವಾಷಿಂಗ್ಟನ್:** ಗಾಝಾ ಯುದ್ಧದಲ್ಲಿ ಇಸ್ರೇಲ್ಗೆ ಅಮೆರಿಕ ಅಧ್ಯಕ್ಷ ಜೋ ಬೈಡನ್ ನೇತೃತ್ವದ ಆಡಳಿತದ ಬೆಂಬಲದ ಬಗ್ಗೆ ಅಸಮಾಧಾನಗೊಂಡಿರುವ ಅಮೆರಿಕದಲ್ಲಿರುವ ಮುಸ್ಲಿಮ್ ಸಮುದಾಯದ ಸದಸ್ಯರು ಪವಿತ್ರ ರಮಝಾನ್ ಮಾಸದ ಸಂದರ್ಭ ಶ್ವೇತಭವನದ ಇಫ್ತಾರ್ ಔತಣಕೂಟದ ಆಹ್ವಾನವನ್ನು ತಿರಸ್ಕರಿಸಿರುವುದಾಗಿ ವರದಿಯಾಗಿದೆ. ಗಾಝಾದಲ್ಲಿ ಇಸ್ರೇಲ್ನ ಯುದ್ಧಕ್ಕೆ ಅಧ್ಯಕ್ಷ ಬೈಡನ್ ಅವರ ಬೆಂಬಲದ ಬಗ್ಗೆ ಅನೇಕ ಆಹ್ವಾನಿತರು ತಮ್ಮ ಅಸಮಾಧಾನವನ್ನು ವ್ಯಕ್ತಪಡಿಸಿದ್ದು ಔತಣಕೂಟಕ್ಕೆ ಹಾಜರಾಗಲು ನಿರಾಕರಿಸಿದ್ದಾರೆ ಎಂದು ನ್ಯೂಯಾರ್ಕ್ ಟೈಮ್ಸ್ ವರದಿ ಮಾಡಿದೆ.



## ದೆಹಲಿ ಪೊಲೀಸ್ ವೆಬ್‌ಸೈಟ್ ಹ್ಯಾಕ್

**ನವದೆಹಲಿ:** ರಾಷ್ಟ್ರದ ರಾಜಧಾನಿ ದೆಹಲಿಯ ಪೊಲೀಸ್ ವೆಬ್ಸೈಟ್ ಗಳನ್ನು ಗುರುವಾರ ಕಿಡಿಗೇಡಿಗಳು ಹ್ಯಾಕ್ ಮಾಡಿರುವ ಘಟನೆ ನಡೆದಿದೆ.ದೆಹಲಿ ಪೊಲೀಸ್ ಮತ್ತು ದೆಹಲಿ ಟ್ರಾಫಿಕ್ ಪೊಲೀಸ್ ವೆಬ್ಸೈಟ್ಗಳನ್ನು ಹ್ಯಾಕರ್ಗಳ ಗುಂಪು ಹ್ಯಾಕ್ ಮಾಡಿ ಅಕ್ರಮ ಪ್ರವೇಶ ಪಡೆದಿದೆ.ಈ ಸಂಬಂಧ ದೆಹಲಿ ಪೊಲೀಸರು ದತ್ತಾಂಶ ರಕ್ಷಣೆಯ ಕಾರ್ಯಾಚರಣೆಯಲ್ಲಿ ತೊಡಗಿದ್ದಾರೆ.

ಅಲ್ಲದೆ ಹ್ಯಾಕರ್ಗಳ ಕುರಿತು ತನಿಖೆ ನಡೆಸಿದ್ದಾರೆ ಎಂದು ತಿಳಿದುಬಂದಿದೆ. ಮೂಲಗಳ ಪ್ರಕಾರ,ಕಿಲ್ಸೆಕ್ ಎಂಬ ಹ್ಯಾಕರ್ಗಳ ಗುಂಪು ತಮ್ಮ ಟೆಲಿಗ್ರಾಮ್ ಚಾನೆಲ್ನಲ್ಲಿ ಸಂದೇಶಗಳನ್ನು ಪೋಸ್ಟ್ ಮಾಡಿದ್ದು, ಅದರ ಮೂಲಕ ದೆಹಲಿ ಟ್ರಾಫಿಕ್ ಪೊಲೀಸ್ ವೆಬ್ಸೈಟ್ಗೆ ಪ್ರವೇಶವನ್ನು ಪಡೆದು ಹ್ಯಾಕ್ ಮಾಡಿವೆ. ಅಲ್ಲದೆ ವಿವಿಧ ಪ್ರಕರಣಗಳಲ್ಲಿ ವ್ಯಕ್ತಿಗಳಿಗೆ ನೀಡಲಾದ ಚಲನ್ಗಳ ಸ್ಥಿತಿಯನ್ನು ಪಾವತಿಸಿದ ಸ್ಥಿತಿಗೆ ಬದಲಾಯಿಸಲು ಪ್ರಯತ್ನಿಸಿದೆ ಎಂದು ಪೊಲೀಸರು ತಿಳಿಸಿದ್ದಾರೆ. ಹ್ಯಾಕ್ ಮಾಡುವುದಲ್ಲದೇ ಪೊಲೀಸ್ ತಂಡಕ್ಕೆ ಸವಾಲ್ ಹಾಕಿದೆ.ಯಾರು ಯಾರು ದಂಡ ಪಾವತಿಸಬೇಕೋ ಅವರು ತಮ್ಮ ತಮ್ಮ ಚಲನ್ ಗಳ ಮಾಹಿತಿ ನೀಡಿದರೆ ಅದನ್ನು ಪಾವತಿಸಿದ ಸ್ಥಿತಿಗೆ ಬದಲಾಯಿಸಲಾಗುತ್ತದೆ ಎಂದು ಹ್ಯಾಕರ್ ಗಳ ತಂಡ ಓಪನ್ ಆಫರ್ ಕೂಡ ನೀಡಿದೆ. ಮತ್ತೊಂದು ಸಂದೇಶದಲ್ಲಿ, ಹ್ಯಾಕರ್ ಗಳ ಗುಂಪು ದೆಹಲಿ ಪೊಲೀಸ್ ವೆಬ್ಸೈಟ್ ಅನ್ನು ಹ್ಯಾಕ್ ಮಾಡಿ, ಫೋಟೋಗಳನ್ನು ಹೊರತು ಪಡಿಸಿ ಎಲ್ಲಾ ಡೇಟಾವನ್ನು ಕದ್ದಿರುವುದಾಗಿ ಹೇಳಿಕೊಂಡಿದೆ ಎಂದು ಪೊಲೀಸರು ತಿಳಿಸಿದ್ದಾರೆ. ಸದ್ಯ ಇದರ ಖಚಿತ ಮಾಹಿತಿಗೆ ತನಿಖೆ ನಡೆಸಲಾಗುತ್ತಿದೆ.

## ಬಾಲಿವುಡ್ ಖಾನ್‌ಳ ಬಗ್ಗೆ ತಮಾಷೆ ಮಾಡಿದ ಪಾಕ್ ನಟಿ

**ದೆಹಲಿ:** ಬಾಲಿವುಡ್‌ಗೆ ಫವಾದ್ ಖಾನ್ರಂಥ ನಟರು ಬಂದಿರುವುದರಿಂದ, ಬಾಲಿವುಡ್ ಖಾನ್ಗಳಾದ ಶಾರೂಖ್ ಖಾನ್, ಸಲ್ಮಾನ್ ಖಾನ್ ಮತ್ತು ಅಮೀರ್ ಖಾನ್ಗೆ ಅಭದ್ರತೆ ಕಾಡುತ್ತಿದೆ ಎಂದು ಪಾಕ್ ನಟಿ, ನಾದಿಯಾ ಖಾನ್ ತಮಾಷೆ ಮಾಡಿ, ಹೇಳಿಕೆ ಕೊಟ್ಟಿದ್ದಾರೆ. ಈ ನಟಿ ಸನ್ನಿ ಡಿಯೋಲ್ ನಟನೆಯ ಗದರ್ 2 ಸಿನಿಮಾ ರಿಲೀಸ್ ಆದಾಗ, ಅದರಲ್ಲಿ ಪಾಕಿಸ್ತಾನದ ಬಗ್ಗೆ ಹೇಳಿರುವ ಪಾಕಿಸ್ತಾನ್ ವಿರೋಧಿ ಹೇಳಿಕೆಯನ್ನು ವಿರೋಧಿಸಿದ್ದರು. ಇದೀಗ ಮತ್ತೆ ನಾಲಿಗೆ ಹರಿಬಿಟ್ಟಿರುವ ನಾದಿಯಾ, ಖಾನ್ಗಳಿಗೆ ಅಭದ್ರತೆ ಕಾಡುತ್ತಿದೆ ಎಂದಿದ್ದಾರೆ. ಪಾಕಿಸ್ತಾನ ನಟರಿಂದ ಬಾಲಿವುಡ್ನ ಖಾನ್ಗಳಿಗೆ ನಡುಕ ಶುರುವಾಗಿದೆ. ಫವಾದ್ ಖಾನ್ರಂಥವರು, ಬಾಲಿವುಡ್ಗೆ ಕಾಲಿಟ್ಟಿದ್ದು, ಅಂಥವರಿಂದ ತಮ್ಮ ಸ್ಥಾನ ಎಲ್ಲಿ ಕಳೆದುಕೊಳ್ಳುತ್ತೇವೋ ಎಂದು ಬಾಲಿವುಡ್ ಖಾನ್ಗಳು ಹೆದರಿದ್ದಾರೆಂದು ನಟಿ ಹೇಳಿದ್ದಾರೆ. ಈ ರೀತಿ ಹೇಳಿಕೆ ಕೊಡಲು ಕಾರಣವೇನೆಂದರೆ, ಭಾರತ ಚಿತ್ರರಂಗದವರು ರಾಜಕೀಯ ಕಾರಣಗಳನ್ನಿಟ್ಟುಕೊಂಡು, ಪಾಕಿಸ್ತಾನದ ಕಲಾವಿದರಿಗೆ ಬಾಲಿವುಡ್ನಲ್ಲಿ ನಟಿಸಲು ಅವಕಾಶ ನೀಡುತ್ತಿಲ್ಲ. ಭಾರತೀಯ ಸಿನಿ ಪ್ರೇಕ್ಷಕರು ಪಾಕಿಸ್ತಾನದ ನಟರನ್ನು ಇಷ್ಟಪಡುತ್ತಾರೆ. ಹಾಗಾಗಿ ಬಾಲಿವುಡ್ ಸೆಲೆಬ್ರಿಟಿಗಳಿಗೂ ನಮ್ಮ ಬಗ್ಗೆ ಅಸೂಯೆ ಇದೆ. ಭಯವೂ ಇದೆ. ಹಾಗಾಗಿ ಪಾಕಿಸ್ತಾನದ ನಟ ನಟಿಯರು ಬಾಲಿವುಡ್ ಸಿನಿಮಾದಲ್ಲಿ ನಟಿಸದಂತೆ ಬ್ಯಾನ್ ಮಾಡಿದ್ದಾರೆಂದು ನಾದಿಯಾ ಕಿಡಿಕಾರಿದ್ದಾಳೆ.





## ದಿವಾಳಿಯಾಗುವ ಹಾದಿಯಲ್ಲಿದೆ ಪಾಕಿಸ್ತಾನ



**ಇಸ್ಲಾಮಾಬಾದ್:** ಪಾಕಿಸ್ತಾನದ ಆರ್ಥಿಕ ಸ್ಥಿತಿ ನಿರಂತರವಾಗಿ ಹದಗೆಡುತ್ತಿದೆ. ಹಣದುಬ್ಬರವು ಉತ್ತುಂಗದಲ್ಲಿದೆ ಮತ್ತು ಸಾಮಾನ್ಯ ಜನರು ಬಳಲುತ್ತಿದ್ದಾರೆ. ಇದು ಪಾಕಿಸ್ತಾನವು ಬಡತನದ ಹಾದಿಯಲ್ಲಿದೆ ಮತ್ತು ಅದರ ಕೆಟ್ಟ ಪರಿಣಾಮವನ್ನು ಅಲ್ಲಿನ ಸಾಮಾನ್ಯ ಜನರು ಭರಿಸಬೇಕಾಗಬಹುದು ಎಂದು ವಿಶ್ವಬ್ಯಾಂಕ್ ವರದಿ ತಿಳಿಸಿದೆ.

ಪಾಕಿಸ್ತಾನದಲ್ಲಿ 1 ಕೋಟಿಗೂ ಹೆಚ್ಚು ಜನರನ್ನು ಬಡತನ ರೇಖೆಗಿಂತ ಕೆಳಗೆ ತಳ್ಳಬಹುದು ಎಂದು ವಿಶ್ವ ಬ್ಯಾಂಕ್ ಪಾಕಿಸ್ತಾನಕ್ಕೆ ಎಚ್ಚರಿಕೆ ನೀಡಿದೆ. ಪ್ರಸಕ್ತ ಹಣಕಾಸು ವರ್ಷದಲ್ಲಿ ಶೇ.26ಕ್ಕೆ ಏರಿಕೆಯಾಗಿರುವ ಶೇ.1.8ರ ನಿಧಾನಗತಿಯ ಜಿಡಿಪಿ ಬೆಳವಣಿಗೆ ಹಾಗೂ ಹೆಚ್ಚುತ್ತಿರುವ ಹಣದುಬ್ಬರದ ಮೇಲೆ ವಿಶ್ವಬ್ಯಾಂಕ್ ಆತಂಕ ವ್ಯಕ್ತಪಡಿಸಿದೆ. ಪಾಕಿಸ್ತಾನವು ತನ್ನ ಆರ್ಥಿಕ ಗುರಿಗಳನ್ನು ಸಾಧಿಸುವಲ್ಲಿ ವಿಫಲವಾಗಬಹುದು ಎಂದು ವಿಶ್ವ ಬ್ಯಾಂಕ್ ತನ್ನ ವರದಿಯಲ್ಲಿ ಸೂಚಿಸಿದೆ. ಪಾಕಿಸ್ತಾನವು ತನ್ನ ಪ್ರಾಥಮಿಕ ಬಜೆಟ್ ಗುರಿಗಿಂತ ಹಿಂದೆ ಉಳಿದು ಸತತ ಮೂರು ವರ್ಷಗಳ ಕಾಲ ಕೊರತೆಯಲ್ಲಿ ಉಳಿಯಬಹುದು ಎಂದು ವರದಿ ಹೇಳಿದೆ. ವರದಿಯ ಪ್ರಮುಖ ಲೇಖಕ ಸೈಯದ್ ಮುರ್ತಾಜಾ ಮುಜಾಫರಿ, ಕೆಟ್ಟ ಆರ್ಥಿಕ ಪರಿಸ್ಥಿತಿಯಿಂದ ಹೊರಬರಲು ಪ್ರಯತ್ನಗಳು ನಡೆಯುತ್ತಿದ್ದರೂ, ಅದು ಇನ್ನೂ ಆರಂಭಿಕ ಹಂತದಲ್ಲಿದೆ ಎಂದು ಹೇಳುತ್ತಾರೆ. ಬಡತನ ನಿರ್ಮೂಲನೆಗೆ ಮಾಡುತ್ತಿರುವ ಪ್ರಯತ್ನಗಳು ಸಾಕಾಗುವುದಿಲ್ಲ. ಆರ್ಥಿಕ ಬೆಳವಣಿಗೆಯು ಸಾಧಾರಣ ಶೇಕಡಾ 1.8 ರಷ್ಟಿದೆ ಎಂದು ನಿರೀಕ್ಷಿಸಲಾಗಿದೆ. ಸುಮಾರು 98 ಮಿಲಿಯನ್ ಪಾಕಿಸ್ತಾನಿಗಳು ಈಗಾಗಲೇ ಬಡತನ ರೇಖೆಗಿಂತ ಕೆಳಗಿದ್ದಾರೆ, ಬಡತನದ ಪ್ರಮಾಣವು ಶೇಕಡಾ 40 ರಷ್ಟಿದೆ. ವರದಿಯು ಬಡತನ ರೇಖೆಗಿಂತ ಸ್ವಲ್ಪ ಮೇಲಿರುವ ಜನರಿಗೆ ಎಚ್ಚರಿಕೆಯನ್ನು ಸಹ ಹೊಂದಿದೆ.

## ಭಯೋತ್ಪಾದಕ ದಾಳಿ: ಇರಾನ್ 11 ಯೋಧರ ಸಾವು

**ಟೆಹ್ರಾನ್:** ದೇಶದ ಆಗ್ನೇಯ ಪ್ರಾಂತದ ಸಿಸ್ತಾನ್-ಬಲುಚಿಸ್ತಾನ್ನಲ್ಲಿ ಇರಾನ್ನ ರೆವೊಲ್ಯುಷನರಿ ಗಾರ್ಡ್ಸ್(ಐಆರ್ಜಿ) ಕೇಂದ್ರಕಚೇರಿಯ ಮೇಲೆ ಗುರುವಾರ ನಡೆದ ಎರಡು ಪ್ರತ್ಯೇಕ ಭಯೋತ್ಪಾದಕ ದಾಳಿಯಲ್ಲಿ ಇರಾನ್ ಭದ್ರತಾ ಪಡೆಯ 11 ಯೋಧರು ಸಾವನ್ನಪ್ಪಿದ್ದು ಇತರ 10 ಅಧಿಕಾರಿಗಳು ಗಾಯಗೊಂಡಿರುವುದಾಗಿ ವರದಿಯಾಗಿದೆ. ಐಆರ್ಜಿ ಕೇಂದ್ರಕಚೇರಿಯನ್ನು ವಶಕ್ಕೆ ಪಡೆಯುವ ಭಯೋತ್ಪಾದಕರ ಉದ್ದೇಶ ವಿಫಲವಾಗಿದೆ ಎಂದು ಇರಾನ್ನ ಆಂತರಿಕ ಇಲಾಖೆ ಮಾಹಿತಿ ನೀಡಿದೆ. ಇದಕ್ಕೂ ಮುನ್ನ, ಬುಧವಾರ ತಡರಾತ್ರಿ, ಇರಾನ್ನ ಚಬಹಾರ್ ಮತ್ತು ರಾಸ್ಕ್ ನಗರಗಳಲ್ಲಿ ಜೈಶ್ ಅಲ್ ಅದಿಲ್ ಗುಂಪಿನ ಸಶಸ್ತ್ರ ಹೋರಾಟಗಾರರು ಮತ್ತು ಭದ್ರತಾ ಪಡೆಗಳ ನಡುವೆ ನಡೆದ ಘರ್ಷಣೆಯಲ್ಲಿ ಕನಿಷ್ಟ 15 ಹೋರಾಟಗಾರರು ಹತರಾಗಿದ್ದಾರೆ ಎಂದು ಮೂಲಗಳನ್ನು ಉಲ್ಲೇಖಿಸಿ ರಾಯ್ಟರ್ಸ್ ವರದಿ ಮಾಡಿದೆ.



ಸಮಾಜ ಕಲ್ಯಾಣ ಇಲಾಖೆ



"ದೇಶದ ಪ್ರಗತಿಯಲ್ಲಿ ನಮ್ಮ ಪ್ರಗತಿಯಿದೆ;
ಅದರ ಉದ್ಧಾರದಲ್ಲೇ ನಮ್ಮ ಉದ್ಧಾರವಿದೆ;
ಅದರ ವಿಮೋಚನೆಯಲ್ಲೇ, ನಮ್ಮ ವಿಮೋಚನೆಯಿದೆ."

- ಡಾ. ಬಾಬು ಜಗಜೀವನ ರಾಂ

# 117ನೇ ಜನ್ಮದಿನಾಚರಣೆ

ಹಸಿರು ಕ್ರಾಂತಿಯ ಹರಿಕಾರ, ರಾಷ್ಟ್ರನಾಯಕ ಹಾಗೂ ಭಾರತದ ಮಾಜಿ ಉಪ ಪ್ರಧಾನಮಂತ್ರಿಗಳು

## ಡಾ. ಬಾಬು ಜಗಜೀವನ ರಾಂ ರವರ

ಪ್ರತಿಮೆಗೆ ಮಾಲಾರ್ಪಣೆ

ಏಪ್ರಿಲ್ 05, 2024 ಶುಕ್ರವಾರ
ವಿಧಾನಸೌಧದ ಪಶ್ಚಿಮ ದ್ವಾರ, ಬೆಂಗಳೂರು

``ನಮ್ಮ ವೈವಿಧ್ಯಮಯ ಸಂಸ್ಕೃತಿ ಮತ್ತು ಪರಂಪರೆಯನ್ನು ಗೌರವಿಸುವುದು ಮತ್ತು ಕಾಪಾಡುವುದು"
-ಪ್ರತಿಯೊಬ್ಬ ಭಾರತೀಯನ ಸಂವಿಧಾನಬದ್ಧ ಮೂಲಭೂತ ಕರ್ತವ್ಯ.

ಆಯುಕ್ತರು
ಸಮಾಜ ಕಲ್ಯಾಣ ಇಲಾಖೆ

@SWDGok